# Unrelenting rain submerges villages in coastal districts

## Incessant showers in Malnad infuse life into rivers

BENGALURU, DHNS

Relentless torrential rains have brought life to a standstill in coastal districts and Malnad region. Heavy downpour in the last few days has created a flood-like situation in the low-lying areas of Udupi and Dakshina Kannada districts. Acres of agricultural lands have been submerged in the twin districts.

Sharp spell of showers on the intervening night of Wednesday and Thursday followed by downpour in the evening have hit traffic at several stretches of Mangaluru-Bengaluru highway.

The railway underbridge at Bajal in Mangaluru has remained flooded since Wednesday. Motorists had a torrid time negotiating the flooded underpass on the highway near Padil.

The swollen Kumaradhara river submerged the bathing ghat at the temple town Subrahmanya. With Netravathi, Kumaradhara rivers and several streams meandering their way to farmlands on their banks, the district administration has kept a team of expert divers, swimmers and electricians on standby to face any eventuality.

The overnight showers left the residents of the low-lying areas in Udupi sleepless with rainwater gushing into their houses. Bailkere near Kalsanka, the parking lot of Sri Krishna Mutt, Mudanidamburu and Bannanje, as is the norm during monsoon, have remained submerged.

Unrelenting rain has hit normal life in Kumta, Bhatkal and Honnavar taluks of Uttara Kannada. Gusty wind, strong tidal waves and heavy rain have damaged four cottages of the Jungle Lodges and Resorts in Devbagh beach near Karwar. Tidal currents have uprooted wind trees planted on 8 hectares. A landslide was reported at Hasviguli near Siddapur. Mud slip near Bhaskeri on Honnavar-Sagar NH 206 affected traffic on the highway for several hours.

Kodagu district witnessed heavy showers overnight, but the intensity of rain came down considerably in the day.

The inclement weather is likely to continue in the coast and parts of Malnad as the IMD has predicted heavy to very heavy showers in the regions for next three days.



**Mescom staff take a boat to attend repair works even as River Phalguni is in spate at Adyapadi of Mangaluru on Thursday.** DH PHOTO/FAKRUDDIN H

## Two auto drivers electrocuted

Two autorickshaw drivers were electrocuted after coming in contact with a live wire near Rosario Church in Mangaluru on Wednesday night.

The deceased, identified as Raju (50) of Pallyahobli in Hassan district and Devaraj (46) from Ramakunja near Kadaba, were staying in a rented room near the church.

Mayor Sudheer Shetty Kannur, who visited the spot, said that a branch of a tree fell on the electric wire following heavy wind and rain.

"The wire snapped and fell on the autorickshaw. Raju, who was washing the autorickshaw, was electrocuted," Sudheer Shetty said.

Hearing Raju's scream for help, Devaraj rushed to his rescue. He failed in his attempts to remove the wire with help of gunny sack and was also electrocuted. "Both died on the spot," Commissioner of Police Anupam Agrawal said.

Based on a complaint filed by Raju's brother, a case was registered under sections 304A (causing death by negligence) of IPC, police sources added.

# Rain claims 3 more lives in Dakshina Kannada; heavy rainfall in Kodagu

**The Hindu Bureau**
MANGALURU/MYSURU

Continued rains have claimed three more lives in Dakshina Kannada, taking the death toll in rain-related incidents to seven since Wednesday in the coastal district.

While two autorickshaw drivers were electrocuted near Rosario school in Mangaluru on Wednesday night, a woman was electrocuted at Shibaje village, under Dharmasthala police station limits, in Belthangady taluk on Thursday evening. Earlier, four persons of a family died in a wall collapse on the outskirts of Mangaluru on Wednesday morning.

The police gave the names of deceased auto drivers as Raju, 50, and Devaraj, 46. The woman who died was identified as Pratheeksha Shetty, 21.

**Schools, anganwadis remained closed in Dakshina Kannada on Thursday owing to the rains**

**Live wire kills duo**

The drivers lived in a rented room near Rosario church. They came into contact with a electricity line that had fallen on the road, around 9 p.m. on Wednesday. The line 'fell following heavy rains, Mangaluru Police Commissioner Anupam Agarwal said on Thursday. Pratheeksha Shetty died after suffering an electric shock when she walked through rainwater on a road. It is said that a live electric line resulted in the mishap.

Schools and anganwadis remained closed in Dakshina Kannada on Thursday owing to the rains.

Meanwhile, the southwest monsoon intensified in Kodagu and Bhagamandala, the birthplace of the Cauvery, received 211 mm of rain during the 24-hour period ending 8.30 a.m. on Thursday.

This is the highest so far during the current rainy season consequent to which the Triveni Sangama was flooded. Both the Cauvery and the Kannike were in spate and there are indications of the water levels rising further. The Bhagamandala-Napoklu road was flooded and the movement of traffic has stopped.

CM
YK


ಗಾಜನೂರು ಡ್ಯಾಂ ತುಂಬಿದ್ದು, 2 ಕ್ರಸ್ಟ್‌ಗೇಟ್ ಮೂಲಕ ನೀರು ಹೊರಬಿಡಲಾಗಿದೆ.


ಕುಕ್ಕೆ ಸುಬ್ರಹ್ಮಣ್ಯದಲ್ಲಿ ಕುಮಾರಧಾರ ನದಿಯ ಸ್ನಾನ ಘಟ್ಟ ಮುಳುಗಡೆ.


ಕುಶಾಲನಗರ ಬಳಿಯ ದುಬಾರೆ ಸಾಕಾನೆ ಶಿಬಿರದಲ್ಲಿ ತುಂಬಿ ಹರಿದ ಕಾವೇರಿ


ಹೊನ್ನಾವರ ತಾಲೂಕಿನ ಭಾಸ್ಕೇರಿಯಲ್ಲಿ ರಸ್ತೆಯ ಮೇಲೆ ಕುಸಿದ ಗುಡ್ಡ.

### ರಾಜ್ಯದ ಕರಾವಳಿ, ಮಲೆನಾಡಿನಲ್ಲಿ ಮುಂದುವರಿದ ಆರಿದ್ರಾ ಮಳೆ ಅಬ್ಬರ | ನದಿಗಳಲ್ಲಿ ಹರಿವು ಹೆಚ್ಚಳ | ಮುಳುಗಿದ ಭಾಗಮಂಡಲ ಸಂಗಮ

# ಗಾಜನೂರು ಡ್ಯಾಂ ಭರ್ತಿ, ಮೈದುಂಬಿಕೊಂಡ ಜೋಗ

**ವಿಕಸುದ್ದಿಲೋಕ** ಬೆಂಗಳೂರು

ರಾಜ್ಯದ ಕರಾವಳಿ ಮತ್ತು ಮಲೆನಾಡಿನಲ್ಲಿ ಆರಿದ್ರಾ ಮಳೆ ಅರ್ಭಟ ಗುರುವಾರವೂ ಮುಂದುವರಿದಿದ್ದು ಶಿವಮೊಗ್ಗ ಜಿಲ್ಲೆಯಲ್ಲಿ ತುಂಗಾ ನದಿಗೆ ಕಟ್ಟಲಾಗಿರುವ ಗಾಜನೂರು ಡ್ಯಾಂ ಭರ್ತಿ ಆಗಿದೆ. ಶರಾವತಿ ನದಿ ಪಾತ್ರದಲ್ಲಿ ವ್ಯಾಪಕ ಮಳೆಯ ಕಾರಣ ವಿಶ್ವ ವಿಖ್ಯಾತ ಜೋಗ ಜಲಪಾತ ಮೈತುಂಬಿಕೊಂಡಿದೆ, ಕೊಡಗಿನ ಭಾಗಮಂಡಲದ ತ್ರಿವೇಣಿ ಸಂಗಮದ ಸ್ಥಳ ಮುಳುಗಡೆಯಾಗಿದೆ. ಹಳ್ಳ-ಕೊಳ್ಳಗಳು ತುಂಬಿ ಹರಿಯುತ್ತಿದ್ದು ನದಿಗಳಲ್ಲಿ ಹರಿವು ಹೆಚ್ಚಿ ಜಲಾಶಯದ ಒಳಹರಿವು ಏರಿಕೆ ಆಗಿದೆ. ಮರ, ವಿದ್ಯುತ್ ತಂತಿ ಮೇಲೆ ಬಿದ್ದು ತುಂಡಾದ ತಂತಿಯಿಂದ ವಿದ್ಯುತ್ ಆಘಾತಕ್ಕೆ ಒಳಗಾದ ಇಬ್ಬರು ಮೃತಪಟ್ಟ ಘಟನೆ ಮಂಗಳೂರಿನಲ್ಲಿ ನಡೆದಿದೆ.

ಮಲೆನಾಡಿನಲ್ಲಿ ಉತ್ತಮ ಮಳೆಯ ಪರಿಣಾಮ ಶಿವಮೊಗ್ಗ ಸಮೀಪದ ಗಾಜನೂರು ಜಲಾಶಯ ಗುರುವಾರ ಬೆಳಗ್ಗೆ ಪೂರ್ಣಮಟ್ಟ ತಲುಪಿದ ಹಿನ್ನೆಲೆಯಲ್ಲಿ 21 ಕ್ರಸ್ಟ್‌ಗೇಟ್‌ಗಳ ಪೈಕಿ ಎರಡನ್ನು ತೆರೆದು 1 ಸಾವಿರ ಕ್ಯೂಸೆಕ್ ನೀರು ಹೊರಬಿಡಲಾಗುತ್ತಿದೆ. ಜಲಾಶಯಕ್ಕೆ 6 ಸಾವಿರ ಕ್ಯೂಸೆಕ್ ಒಳಹರಿವು ಇದ್ದು, ವಿದ್ಯುತ್ ಉತ್ಪಾದನೆಗೆ 5 ಸಾವಿರ ಕ್ಯೂಸೆಕ್ ಬಳಕೆ ಮಾಡಲಾಗುತ್ತಿದೆ ಎಂದು ನೀರಾವರಿ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

ಶಿವಮೊಗ್ಗ ಜಿಲ್ಲೆಯಲ್ಲಿ ಗುರುವಾರ ಬೆಳಗ್ಗೆ 8 ಗಂಟೆಯ ಮಾಹಿತಿ ಅನ್ವಯ ಕಳೆದ 24 ಗಂಟೆಯಲ್ಲಿ ಸರಾಸರಿ 26 ಮಿ.ಮೀ. ಮಳೆಯಾಗಿದೆ. ಶೃಂಗೇರಿಯಲ್ಲಿ ತುಂಗಾ ನದಿ ತುಂಬಿ ಹರಿಯುತ್ತಿದ್ದು, ಶಾರದಾ ಪೀಠದ ಬಳಿ ಸ್ನಾನಘಟ್ಟದಲ್ಲಿರುವ ಇತಿಹಾಸ ಪ್ರಸಿದ್ಧ ಕಪ್ಪೆ ಶಂಕರ ಮುಳುಗಿದೆ.

**ಕೊಡಗಿನಲ್ಲಿ ನಿಲ್ಲದ ಮಳೆ**

ಕೊಡಗು ಜಿಲ್ಲೆಯಲ್ಲಿ ಗುರುವಾರವೂ ಮಳೆ ಮುಂದುವರಿದಿದ್ದು, ಧಾರಾಕಾರ ಮಳೆಗೆ ಭಾಗಮಂಡಲದ ತ್ರಿವೇಣಿ ಸಂಗಮ, ಹೊಸದಾಗಿ ನಿರ್ಮಿಸಲಾಗಿರುವ ಉದ್ಯಾನ ಸಂಪೂರ್ಣ ಮುಳುಗಡೆಯಾಗಿದೆ. ನಿರಂತರ ಮಳೆಗೆ ಜಿಲ್ಲೆಯ ಜನಜೀವನ ಅಸ್ತವ್ಯಸ್ತವಾಗಿದ್ದು ಅಲ್ಲಲ್ಲಿ ಮಣ್ಣು ಕುಸಿತ ಸೇರಿದಂತೆ ಸಣ್ಣಪುಟ್ಟ ಹಾನಿಯಾಗಿದೆ.

ಮಡಿಕೇರಿ ಹೊರವಲಯದ ಕೊಯಿನಾಡು ಸರಕಾರಿ ಶಾಲೆಯ ಹಿಂಬದಿಯ ದಿಬ್ಬ ಕುಸಿದಿದ್ದು ಶಾಲಾ ಕೊಠಡಿಗೆ ಹಾನಿಯಾಗಿದೆ. ಕಾವೇರಿ ನದಿಯಲ್ಲಿ ನೀರಿನ ಹರಿವು ಹೆಚ್ಚಿರುವುದರಿಂದ ಪ್ರವಾಸಿತಾಣ ದುಬಾರೆಯಲ್ಲಿ ಬೋಟಿಂಗ್ ಸ್ಥಗಿತಗೊಳಿಸಲಾಗಿದೆ. ಆನೆ ಶಿಬಿರಕ್ಕೆ ಪ್ರವೇಶ ನಿರ್ಬಂಧಿಸಲಾಗಿದೆ.


ಶರಾವತಿ ಕಣಿವೆಯಲ್ಲಿ ನಿರಂತರವಾಗಿ ಮಳೆಯಾಗುತ್ತಿರುವುದರಿಂದ ಶಿವಮೊಗ್ಗ ಜಿಲ್ಲೆಯ ಜೋಗ ಜಲಪಾತದ ನಾಲ್ಕು ಜಲಧಾರೆಗಳು ಮೈದುಂಬಿವೆ.

## ಕರಾವಳಿಯಲ್ಲಿ ಕಡಲಿನ ರೌದ್ರಾವತಾರ

ಉತ್ತರ ಕನ್ನಡ ಜಿಲ್ಲೆಯಾದ್ಯಂತ ಮಳೆ ಮುಂದುವರಿದಿದ್ದು, ಗುರುವಾರ ದೇವಬಾಗ ಕಡಲತೀರದ ಸುಮಾರು 15 ಹೆಕ್ಟೇರ್ ಪ್ರದೇಶದಲ್ಲಿ ಕಡಲ ಕೊರತೆ ಆಗಿದೆ. ರೆಸಾರ್ಟ್‌ಗೆ ಸೇರಿದ ನಾಲ್ಕು ಐಷಾರಾಮಿ ಕೊಠಡಿಗಳು ಸಮುದ್ರದ ಅಲೆಗಳಿಗೆ ಆಹುತಿಯಾಗಿವೆ.

"ಈ ಪ್ರದೇಶದಲ್ಲಿ ಕಳೆದ ವರ್ಷ ಏಳು ಹೆಕ್ಟೇರ್ ಪ್ರದೇಶದಲ್ಲಿ ಅಲೆಗಳು ಅಪ್ಪಳಿಸಿ ಮರಗಳನ್ನು ಕೊಚ್ಚಿಕೊಂಡು ಹೋಗಿತ್ತು. ಈ ವರ್ಷ ಹೊಸದಾಗಿ ಮತ್ತೆ ಎಂಟು ಹೆಕ್ಟೇರ್ ಪ್ರದೇಶದ ಮರಗಳನ್ನು ಕೊಚ್ಚಿಕೊಂಡು ಹೋಗಿದೆ. ಎರಡು ವರ್ಷಗಳಲ್ಲಿ ಒಟ್ಟು 15 ಹೆಕ್ಟೇರ್ ಪ್ರದೇಶದ ಗಿಡ, ಮರಗಳು ಸಮುದ್ರ ಪಾಲಾಗಿದೆ" ಎಂದು ಕಾರವಾರ ಡಿಎಫ್‌ಒ ರವಿಶಂಕರ ತಿಳಿಸಿದರು.

ಅಂಕೋಲಾ, ಕುಮಟಾ, ಹೊನ್ನಾವರ, ಭಟ್ಕಳದಲ್ಲಿಯೂ ಗುರುವಾರ ಉತ್ತಮ ಮಳೆಯಾಗಿದೆ. ಶಿರಸಿ ಸೇರಿ ಘಟ್ಟದ ಮೇಲೂ ಮಳೆಯಿಂದ ಕೆಲವೆಡೆ ಮರಗಳು ಉರುಳಿವೆ. ವಿದ್ಯುತ್ ಕಂಬಗಳು ಕೂಡ ಹಾನಿಯಾಗಿವೆ.

ಸಿದ್ದಾಪುರ ತಾಲೂಕಿನ ಹಸ್ವಿಗುಳಿ ಗ್ರಾಮದಲ್ಲಿ ಮನೆಯ ಹಿಂದಿನ ಗುಡ್ಡ ಕುಸಿಯುತ್ತಿದ್ದು, ಗಾಳಿ, ಮಳೆಗೆ ಹಲವೆಡೆ ಮರಗಳು ಮತ್ತು 160ಕ್ಕೂ ಹೆಚ್ಚು ವಿದ್ಯುತ್ ಕಂಬಗಳು ಉರುಳಿವೆ. ವಿದ್ಯುತ್ ಕೈಕೊಟ್ಟಿದೆ.

## ಸುಬ್ರಹ್ಮಣ್ಯದ ಸ್ನಾನ ಘಟ್ಟ ಮುಳುಗಡೆ

ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಯಾದ್ಯಂತ ಧಾರಾಕಾರವಾಗಿ ಮಳೆ ಸುರಿಯುತ್ತಿದ್ದು, ಹಲವೆಡೆ ಕೃತಕ ನೆರೆ ಸಂಭವಿಸಿವೆ. ತಗ್ಗು ಪ್ರದೇಶಗಳು ಜಲಾವೃತಗೊಂಡಿವೆ. ಕುಕ್ಕೆ ಸುಬ್ರಹ್ಮಣ್ಯದಲ್ಲಿ ಕುಮಾರಧಾರ ನದಿ ಸ್ನಾನಘಟ್ಟ ಗುರುವಾರ ಮುಳುಗಡೆ ಆಗಿದೆ. ಕುಮಾರಧಾರ ನದಿಯ ಕಿಂಡಿ ಅಣೆಕಟ್ಟು ಕೂಡ ಸಂಪೂರ್ಣ ಮುಳುಗಡೆಯಾಗಿದೆ. ಕುಮಾರಪರ್ವತ ಹಾಗೂ ಘಟ್ಟಪ್ರದೇಶಲ್ಲಿ ಬಾರಿ ಮಳೆಯಿಂದಾಗಿ ಕುಮಾರಧಾರ ಉಪನದಿ ದರ್ಪಣ ತೀರ್ಥ ನದಿ ಕೂಡ ತುಂಬಿ ಹರಿಯುತ್ತಿದೆ. ಪುತ್ತೂರು ನಗರಸಭೆ ವ್ಯಾಪ್ತಿಯ ಬನ್ನೂರಿನ ಜೈನೆರೆ ಗುರಿ ಎಂಬಲ್ಲಿ ಗುರುವಾರ ನಸುಕಿನಲ್ಲಿ ಬರೆಯ ಮಣ್ಣು ಕುಸಿದು ಮನೆಗೆ ಹಾನಿ ಆಗಿದೆ.

**ತೋಡಿನಲ್ಲಿ ಸಿಲುಕಿದ ಕಾರು:** ಕಡಬ ತಾಲೂಕಿನ ಒಡ್ಡೋಳಿ ಗ್ರಾಮದಲ್ಲಿ ತುಂಬಿ ಹರಿಯುತ್ತಿದ್ದ ತೋಡೊಂದರಲ್ಲಿ ಕಾರು ಸಿಲುಕಿಕೊಂಡಿದೆ. ಮಳೆ ಹೆಚ್ಚಾದ ಕಾರಣ ಜಿಲ್ಲೆಯ ಶಾಲಾ-ಕಾಲೇಜುಗಳಿಗೆ ಜೂನ್ 28ರಂದೂ ರಜೆ ಮುಂದುವರಿಸಲಾಗಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಹೇಳಿದ್ದಾರೆ. ಉಡುಪಿ ಕೃಷ್ಣಮಠದ ಪಾರ್ಕಿಂಗ್ ಸ್ಥಳದ ಸಮೀಪ ಬೈಲಕೆರೆ ಸುತ್ತಮುತ್ತಲಿನಲ್ಲಿ ನೆರೆಯ ಪ್ರಮಾಣ ಹೆಚ್ಚಾಗಿದ್ದು, ಕೆಲವು ಮನೆಗಳಿಗೆ ನೀರು ನುಗ್ಗಿದೆ. ಅಗ್ನಿ ಶಾಮಕ ದಳದ ಸಿಬ್ಬಂದಿ ನಾಲ್ಕು ಮನೆಯಲ್ಲಿದ್ದ ಒಟ್ಟು 14 ಮಂದಿಯ ರಕ್ಷಣೆ ಮಾಡಿದ್ದಾರೆ. ಪರ್ಕಳ ಸಮೀಪದ ಹೆರ್ಗ ಗ್ರಾಮದ ಶೆಟ್ಟಿಬೆಟ್ಟುವಿನಲ್ಲಿ ಮರ ಬಿದ್ದು ಮನೆಗೆ ಹಾನಿಯಾಗಿದೆ.

## ಭಾರಿ ವಾಹನಗಳಿಗೆ ಆಗುಂಬೆ ಘಾಟಿ ಬಂದ್

ರಾಷ್ಟ್ರೀಯ ಹೆದ್ದಾರಿ 169 ಎ ತೀರ್ಥಹಳ್ಳಿ-ಮಲ್ಪೆ ಮಾರ್ಗದ ಆಗುಂಬೆ ಘಾಟಿಯಲ್ಲಿ ಭಾರಿ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಭಾರಿ ವಾಹನಗಳ ಸಂಚಾರಕ್ಕೆ ತಾತ್ಕಾಲಿಕ ನಿರ್ಬಂಧ ಹೇರಿ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಗುರುವಾರ ಆದೇಶಿಸಿದ್ದಾರೆ. ಜೂನ್ 27ರಿಂದ ಸೆಪ್ಟೆಂಬರ್ 15ರವರೆಗೆ ನಿರ್ಬಂಧ ಹೇರಲಾಗಿದೆ. ಭಾರಿ ವಾಹನಗಳು ತೀರ್ಥಹಳ್ಳಿ-ಮಾಸ್ತಿಕಟ್ಟೆ-ಸಿದ್ದಾಪುರ-ಕುಂದಾಪುರ-ಉಡುಪಿ ಮಾರ್ಗವಾಗಿ ಹಾಗೂ ಉಡುಪಿ-ತೀರ್ಥಹಳ್ಳಿ ನಡುವೆ ಸಂಪರ್ಕಿಸುವ ವಾಹನಗಳು ಉಡುಪಿ- ಕುಂದಾಪುರ- ಸಿದ್ದಾಪುರ- ಮಾಸ್ತಿಕಟ್ಟೆ- ತೀರ್ಥಹಳ್ಳಿ ಮಾರ್ಗವಾಗಿ ಸಂಚರಿಸುವಂತೆ ಸೂಚಿಸಲಾಗಿದೆ.

## ವಿದ್ಯುತ್ ತಂತಿ ಬಿದ್ದು ರಿಕ್ಷಾ ಚಾಲಕರಿಬ್ಬರ ಸಾವು

**ಮಂಗಳೂರು:** ನಗರದ ಪಾಂಡೇಶ್ವರ ಬಳಿ ವಿದ್ಯುತ್ ತಂತಿ ತುಂಡಾಗಿ ಬಿದ್ದು ವಿದ್ಯುತ್ ಆಘಾತದಿಂದ ರಿಕ್ಷಾ ಚಾಲಕರಿಬ್ಬರು ಮೃತಪಟ್ಟಿದ್ದಾರೆ.

ಪಾಂಡೇಶ್ವರದ ರೊಸಾರಿಯೊ ಚರ್ಚ್ ಬಳಿ ಈ ಘಟನೆ ನಡೆದಿದ್ದು, ಹಾಸನ ಜಿಲ್ಲೆಯ ಆಲೂರಿನ ರಾಜು (50) ಮತ್ತು ಪುತ್ತೂರು ರಾಮಕುಂಜದ ದೇವರಾಜ್ (46) ಮೃತಪಟ್ಟ ರಿಕ್ಷಾ ಚಾಲಕರು. ಬಾಡಿಗೆ ರಿಕ್ಷಾ ಚಾಲಕರಾಗಿ ದುಡಿಯುತ್ತಿದ್ದ ಇವರಿಬ್ಬರು, ಬುಧವಾರ ರಾತ್ರಿ 9.30ರ ಸುಮಾರಿಗೆ ರೊಸಾರಿಯೊ ಚರ್ಚ್ ಬಳಿ ತಾವು ವಾಸವಿದ್ದ ರೂಮ್ ಎದುರು ವಿದ್ಯುತ್ ಆಘಾತಕ್ಕೆ ಒಳಗಾದರು. ಆದರೆ, ಈ ಘಟನೆ ಗುರುವಾರ ಬೆಳಗ್ಗೆ 6ರ ಸುಮಾರಿಗೆ ಬೀದಿ ದೀಪ ಆರಿಸಲು ಬಂದ ಪಾಲಿಕೆ ಸಿಬ್ಬಂದಿಗೆ ಗಮನಕ್ಕೆ ಬಂದಿತು.



ರಾಜು ರಾತ್ರಿ ರಿಕ್ಷಾ ತೊಳೆಯಲೆಂದು ಬಕೆಟ್‌ನಲ್ಲಿ ನೀರು ತರುತ್ತಿದ್ದಾಗ ಮಳೆ ಗಾಳಿಗೆ ಅಶೋಕ ಮರವೊಂದು ವಿದ್ಯುತ್ ತಂತಿ ಮೇಲೆ ಬಿತ್ತು. ಇದರಿಂದ ತಂತಿ ತುಂಡಾಗಿ ಅವರ ಮೇಲೆ ಬಿದ್ದು ಒದ್ದಾಡತೊಡಗಿದರು. ಇದನ್ನು ಗಮನಿಸಿದ ಗೆಳೆಯ ದೇವರಾಜ್, ಗೋಣಿ ಚೀಲದೊಂದಿಗೆ ಹೊರ ಬಂದಿದ್ದು, ರಕ್ಷಣೆಗೆ ಮುಂದಾದಾಗ ಅವರಿಗೂ ವಿದ್ಯುತ್ ಆಘಾತವಾಗಿ ಇಬ್ಬರೂ ಸ್ಥಳದಲ್ಲೇ ಮೃತಪಟ್ಟರು. ಘಟನೆ ಬಗ್ಗೆ ಪರಿಶೀಲನೆ ನಡೆಸಲಾಗಿದೆ. ಮೃತರ ಕುಟುಂಬಕ್ಕೆ ತಲಾ 5 ಲಕ್ಷ ರೂ. ಪರಿಹಾರ ನೀಡಲಾಗುತ್ತದೆ ಎಂದು ಮೆಸ್ಕಾಂ ವ್ಯವಸ್ಥಾಪಕ ನಿರ್ದೇಶಕರಾದ ಡಿ. ಪದ್ಮಾವತಿ ತಿಳಿಸಿದ್ದಾರೆ.

## ಕಬಿನಿ ಜಲಾಶಯಕ್ಕೆ ಒಳ ಹರಿವು ಏರಿಕೆ

ಮೈಸೂರು ಜಿಲ್ಲೆಯ ಎಚ್.ಡಿ.ಕೋಟೆ ತಾಲೂಕಿನ ಬೀಚನಹಳ್ಳಿ-ಬಿದರಹಳ್ಳಿ ಗ್ರಾಮದ ನಡುವೆ ಇರುವ ಕಬಿನಿ ಜಲಾಶಯದ ಒಳಹರಿವು 17 ಸಾವಿರ ಕ್ಯೂಸೆಕ್‌ಗೆ ಏರಿದ್ದು, ಜಲಾಶಯದಲ್ಲಿ ನೀರಿನ ಮಟ್ಟ 2,270 ಅಡಿಗೆ ತಲುಪಿದೆ. 11.30 ಟಿಎಂಸಿ ನೀರು ಸಂಗ್ರಹಗೊಂಡಿದೆ. ಜಲಾಶಯದಿಂದ 1 ಸಾವಿರ ಕ್ಯೂಸೆಕ್ ನೀರನ್ನು ವಿದ್ಯುತ್ ಉತ್ಪಾದನಾ ಘಟಕದ ಮೂಲಕ ನದಿಗೆ ಬಿಡಲಾಗುತ್ತಿದೆ.

ಕೇರಳದ ವಯನಾಡು ಜಿಲ್ಲೆಯ ಮಾನಂದವಾಡಿ ಮತ್ತು ಸುಲ್ತಾನ್ ಬತೇರಿ ತಾಲೂಕು ಸೇರಿ ಕರ್ನಾಟಕದ ನಾಗರಹೊಳೆ ಮತ್ತು ಬಂಡೀಪುರ ರಾಷ್ಟ್ರೀಯ ಉದ್ಯಾನದಲ್ಲಿ 5 ದಿನಗಳಿಂದ ಸತತವಾಗಿ ಮಳೆ ಆಗುತ್ತಿರುವುದರಿಂದ ಜಲಾಶಯದ ಒಳ ಹರಿವು 1 ಸಾವಿರ ಕ್ಯೂಸೆಕ್‌ನಿಂದ 17 ಸಾವಿರ ಕ್ಯೂಸೆಕ್‌ಗೆ ಏರಿದೆ.


ಉತ್ತರ ಕನ್ನಡ ಜಿಲ್ಲೆಯ ಶಿರಸಿ ಪಟ್ಟಣದ ಪೊಲೀಸ್ ಮೈದಾನ ಅಂಚಿನಲ್ಲಿರುವ ಶಾಸಕ ಭೀಮಣ್ಣ ನಾಯ್ಕ ಅವರ ಕಚೇರಿ ಕಟ್ಟಡದ ಮೇಲೆ ಭಾರಿ ಗಾಳಿ, ಮಳೆಗೆ ಗುರುವಾರ ಮುರಿದು ಬಿದ್ದ ಮರದ ಟೊಂಗೆ.

# ಕರಾವಳಿ, ಮಲೆನಾಡು ಮಳೆಗೆ ತತ್ತರ

ಬೆಂಗಳೂರು: ರಾಜ್ಯಾದ್ಯಂತ ಮಳೆ ಅರ್ಭಟ ತೀವ್ರಗೊಂಡಿದ್ದು, ಕರಾವಳಿ, ಮಲೆನಾಡು ಹಾಗೂ ಕೊಡಗು ಭಾಗದಲ್ಲಿ ಜನಜೀವನ ಅಸ್ತವ್ಯಸ್ತಗೊಂಡಿದೆ. ಕುಕ್ಕೆ ಸುಬ್ರಹ್ಮಣ್ಯ ದೇವಸ್ಥಾನದ ಕುಮಾರಧಾರ ಸ್ನಾನಘಟ್ಟ ಮುಳುಗಡೆ ಆಗಿದೆ. ಕಾಸರಗೋಡು ಸಮೀಪದ ಮಧೂರು ಮಧುವಾಹಿನಿ ಹೊಳೆ ತುಂಬಿ ಹರಿಯುತ್ತಿದ್ದು, ಸಿದ್ಧಿವಿನಾಯಕ ದೇವಸ್ಥಾನದ ಅಂಗಣ ಜಲಾವೃತಗೊಂಡಿದೆ. ಕಾರವಾರ ದೇವಬಾಗದ ಸರ್ಕಾರಿ ಸ್ವಾಮ್ಯದ ಜಂಗಲ್ ಲಾಡ್ಜಸ್ ರೆಸಾರ್ಟ್‌ನ 4 ಕಾಟೇಜ್‌ಗಳು ಸಮುದ್ರದ ಅಲೆಗಳಿಗೆ ಕೊಚ್ಚಿ ಹೋಗಿವೆ. ಲಿಂಗನಮಕ್ಕಿ ಜಲಾಶಯಕ್ಕೆ 24 ಗಂಟೆಯಲ್ಲೇ ಎರಡು ಅಡಿ ನೀರು ಹರಿದುಬಂದಿದೆ. ತುಂಗಾ ಜಲಾಶಯ ಭರ್ತಿಯಾಗಿದ್ದು ಎರಡು ಕ್ರಸ್ಟ್ ಗೇಟ್‌ಗಳ ಮೂಲಕ ನದಿಗೆ ನೀರು ಹರಿಸಲಾಗುತ್ತಿದೆ. ಕೊಡಗು ಭಾಗಮಂಡಲದ ತ್ರಿವೇಣಿ ಸಂಗಮ ಭರ್ತಿಯಾಗಿದೆ. ಕೆಆರ್‌ಎಸ್ ಜಲಶಯದ ನೀರಿನ ಮಟ್ಟ 89 ಅಡಿಗೆ ಏರಿಕೆ ಆಗಿದೆ.

ವಿವರ ಪುಟ 10

# ಮತ್ತಷ್ಟು ಮಳೆ: ತುಂಗಾ ಜಲಾಶಯ

ಒಂದನೇ ಪುಟದಿಂದ...

'3.24 ಟಿಎಂಸಿ ಅಡಿ ಸಂಗ್ರಹ ಸಾಮರ್ಥ್ಯದ ತುಂಗಾ ಜಲಾಶಯದ ಗರಿಷ್ಠ ಮಟ್ಟ 588.24 ಮೀಟರ್. ಜಲಾಶಯಕ್ಕೆ ಒಳಹರಿವು 6,766 ಕ್ಯುಸೆಕ್ ಇದೆ. ಎರಡು ಕ್ರಸ್ಟ್ ಗೇಟ್‌ಗಳನ್ನು ತೆರೆದು 5,285 ಕ್ಯುಸೆಕ್ ನೀರನ್ನು ನದಿಗೆ ಹರಿಸಲಾಗುತ್ತಿದೆ. ಉಳಿದ ಹೆಚ್ಚುವರಿ ನೀರನ್ನು ವಿದ್ಯುತ್ ಉತ್ಪಾದನೆಗೆ ಬಳಸಲಾಗುತ್ತಿದೆ' ಎಂದು ಜಲಾಶಯದ ಕಾರ್ಯನಿರ್ವಾಹಕ ಎಂಜಿನಿಯರ್ ತಿಪ್ಪಾನಾಯ್ಕ 'ಪ್ರಜಾವಾಣಿ'ಗೆ ತಿಳಿಸಿದರು.

ಜಲಾನಯನ ಪ್ರದೇಶದಲ್ಲಿ ಮಳೆ ಸುರಿಯುತ್ತಿರುವುದರಿಂದ ತುಂಗಾ, ಭದ್ರಾ ಹಾಗೂ ಲಿಂಗನಮಕ್ಕಿ ಜಲಾಶಯಗಳಿಗೆ ಒಳಹರಿವು ಹೆಚ್ಚಳಗೊಂಡಿದೆ.

ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಮಳೆಯಿಂದಾಗಿ ನದಿ–ತೊರೆಗಳು ತುಂಬಿ ಹರಿಯುತ್ತಿವೆ. ಭಾರಿ ಮಳೆ ಮುನ್ಸೂಚನೆ ಕಾರಣ ದಕ್ಷಿಣ ಕನ್ನಡ ಜಿಲ್ಲೆಯ ಪ್ರಾಥಮಿಕ, ಪ್ರೌಢ ಶಾಲೆಗಳು ಹಾಗೂ ಪಿಯು ಕಾಲೇಜುಗಳಿಗೆ 28ರಂದು ಶುಕ್ರವಾರ ಕೂಡ ಜಿಲ್ಲಾ ಆಡಳಿತ ರಜೆ ಘೋಷಿಸಿದೆ.

ಬಂಟ್ವಾಳ ತಾಲ್ಲೂಕಿನ ಕಲ್ಲಡ್ಕ ಓವರ್‌ಬ್ರಿಜ್ ಕೆಳಭಾಗದಲ್ಲಿ ಗುರುವಾರವೂ ನೀರು ಹರಿದು ಮಂಗಳೂರು–ಬೆಂಗಳೂರು ರಾಷ್ಟ್ರೀಯ ಹೆದ್ದಾರಿ ಮೂಲಕ ಪ್ರಯಾಣಿಸಿದವರು ಪ್ರಯಾಸಪಟ್ಟರು. ಸುಬ್ರಹ್ಮಣ್ಯದ ಕುಮಾರಧಾರಾ ನದಿ ತುಂಬಿ ಹರಿದಿದ್ದು ಸ್ನಾನಘಟ್ಟ ಮುಳುಗಡೆ ಆಗಿದೆ. ನೆರೆಯ ಕಾಸರಗೋಡಿನ ಪ್ರಸಿದ್ಧ ಮಧೂರು ಮದನಂತೇಶ್ವರ ಸಿದ್ಧಿವಿನಾಯಕ ದೇವಾಲಯ ಜಲಾವೃತವಾಗಿದೆ.



ವಿರಾಜಪೇಟೆ ಸಮೀಪದ ಅರಮೇರಿ ಗ್ರಾಮದ ಭತ್ತದ ಗದ್ದೆಗಳು ಗುರುವಾರ ಜಲಾವೃತಗೊಂಡಿದ್ದವು.

ಕೊಡಗು ಜಿಲ್ಲೆಯ ಭಾಗಮಂಡಲ ಹಾಗೂ ಮಡಿಕೇರಿ ವ್ಯಾಪ್ತಿಯಲ್ಲಿ ಬುಧವಾರ ಇಡೀ ರಾತ್ರಿ ಭಾರಿ ಮಳೆ ಸುರಿದಿದೆ. ಇದರಿಂದ ಹಾರಂಗಿ ಜಲಾಶಯದ ಒಳಹರಿವು ಸಾವಿರ ಕ್ಯುಸೆಕ್ ದಾಟಿದ್ದು, ರೈತರಲ್ಲಿ ನಿರೀಕ್ಷೆಗಳನ್ನು ಗರಿಗೆದರಿಸಿದೆ.

ಜಲಾಶಯದ ಒಳ ಹರಿವು ಬುಧವಾರ 810 ಕ್ಯುಸೆಕ್ ಇದ್ದದ್ದು, ಗುರುವಾರ 1,425 ಕ್ಯುಸೆಕ್‌ಗೆ ಏರಿಕೆಯಾಗಿದೆ. ಜಲಾಶಯದ ಗರಿಷ್ಠ ಮಟ್ಟ 2,859 ಆಗಿದ್ದು, ಸದ್ಯ 2,832.65 ಅಡಿಗಳಷ್ಟೇ ನೀರಿದೆ.

ಕೊಡಗಿನಲ್ಲಿ ಗುರುವಾರ ಮಳೆ ಅಲ್ಪ ಬಿಡುವು ನೀಡಿದ್ದರೂ, ಬಿರುಗಾಳಿ, ಶೀತಗಾಳಿ ಬೀಸಿತ್ತು. ದಟ್ಟ ಮೋಡಕವಿದ ವಾತಾವರಣವಿದ್ದು, ಜನ ಚಳಿಯಿಂದ ಥರಗುಟ್ಟುತ್ತಿದ್ದಾರೆ.

ಉಡುಪಿ ಜಿಲ್ಲೆಯಾದ್ಯಂತ ಬುಧವಾರ ರಾತ್ರಿ ಧಾರಾಕಾರವಾಗಿ ಸುರಿದಿದ್ದ ಮಳೆ, ಗುರುವಾರ ಬೆಳಿಗ್ಗೆಯಿಂದ ಮಧ್ಯಾಹ್ನದವರೆಗೆ ವಿರಾಮ ನೀಡಿತ್ತು. ಸಂಜೆ ಸಾಧಾರಣ ಮಳೆ ಸುರಿದಿದೆ.

ಚಿಕ್ಕಮಗಳೂರು ಜಿಲ್ಲೆಯ ಶೃಂಗೇರಿ, ಕೊಪ್ಪ, ಕಳಸ, ಮೂಡಿಗೆರೆ ತಾಲ್ಲೂಕಿನಲ್ಲಿ ಬುಧವಾರ ರಾತ್ರಿ ಧಾರಾಕಾರವಾಗಿ ಮಳೆ ಸುರಿದಿದೆ. ಕುದುರೆಮುಖ, ಸಂಸೆ, ಕೊಟ್ಟಿಗೆಹಾರ ಸುತ್ತಮುತ್ತ ಹೆಚ್ಚು ಮಳೆಯಾಗಿದ್ದು, ಭದ್ರಾ, ಹೇಮಾವತಿ ಮತ್ತು ತುಂಗಾ ನದಿಗಳಲ್ಲಿ ನೀರು ಹರಿವಿನ ಪ್ರಮಾಣ ಜಾಸ್ತಿಯಾಗಿದೆ. ಗುರುವಾರ ಹಲವೆಡೆ ಸಾಧಾರಣ ಮಳೆಯಾಗಿದ್ದು, ಮಲೆನಾಡು ಭಾಗದಲ್ಲಿ ಜೀವಕಳೆ ಬಂದಿದೆ.

**ರೈತರಲ್ಲಿ ಆಶಾಭಾವ:** ಲಕ್ಕವಳ್ಳಿ ಬಳಿ ಇರುವ ಭದ್ರಾ ಜಲಾಶಯಕ್ಕೆ ಗುರುವಾರ ಒಳಹರಿವು 4,082 ಕ್ಯುಸೆಕ್‌ಗೆ ಏರಿಕೆಯಾಗಿದೆ. ಬುಧವಾರ ಒಳಹರಿವು 2,276 ಕ್ಯುಸೆಕ್ ಇತ್ತು. ಕಳೆದ ವರ್ಷ ಮಳೆ ಕೊರತೆಯಿಂದ ಜಲಾಶಯದಲ್ಲಿ ನೀರಿನ ಪ್ರಮಾಣ ಭಾರಿ ಪ್ರಮಾಣದಲ್ಲಿ ಕಡಿಮೆಯಾಗಿತ್ತು. ವಾರದಿಂದ ಭದ್ರೆಗೆ ಒಳಹರಿವು ಹೆಚ್ಚುತ್ತಿದ್ದು, ಅಚ್ಚುಕಟ್ಟು ಪ್ರದೇಶದ ರೈತರಲ್ಲಿ ಆಶಾಭಾವ ಮೂಡಿದೆ.

186 ಅಡಿ ನೀರಿನ ಸಂಗ್ರಹ ಸಾಮರ್ಥ್ಯದ ಜಲಾಶಯದಲ್ಲಿ ಸದ್ಯ 120.8 ಅಡಿ ನೀರಿನ ಸಂಗ್ರಹವಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ ಜಲಾಶಯದಲ್ಲಿ 137 ಅಡಿ ನೀರಿನ ಸಂಗ್ರಹವಿತ್ತು. ಭದ್ರಾ ಜಲಾಶಯ ಭರ್ತಿಯಾಗಲು ಇನ್ನೂ 66 ಅಡಿ ನೀರಿನ ಅಗತ್ಯವಿದೆ.

ಲಿಂಗನಮಕ್ಕಿ ಜಲಾಶಯದ ಒಳಹರಿವು 16,984 ಕ್ಯುಸೆಕ್‌ಗೆ ಏರಿಕೆಯಾಗಿದೆ. ಬುಧವಾರ ಒಳಹರಿವು 9,033 ಕ್ಯುಸೆಕ್ ಇತ್ತು. ಜಲಾನಯನ ಪ್ರದೇಶದಲ್ಲಿ ಭಾರಿ ಮಳೆ ಸುರಿಯುತ್ತಿರುವುದರಿಂದ 24 ಗಂಟೆಯಲ್ಲಿ 7,900 ಕ್ಯುಸೆಕ್‌ನಷ್ಟು ಒಳಹರಿವು ಹೆಚ್ಚಳಗೊಂಡಿದೆ. 1,819 ಅಡಿ ನೀರು ಸಂಗ್ರಹ ಸಾಮರ್ಥ್ಯದ ಜಲಾಶಯದಲ್ಲಿ ಗುರುವಾರ 1,747.60 ಅಡಿ ನೀರಿನ ಸಂಗ್ರಹ ಇದೆ. ಕಳೆದ ವರ್ಷ ಇದೇ ಅವಧಿಯಲ್ಲಿ 1,740.20 ಅಡಿ ನೀರಿನ ಸಂಗ್ರಹ ಇತ್ತು.

ಬೆಂಗಳೂರು–ಮಂಗಳೂರು ಸಂಪರ್ಕಿಸುವ ಹೆದ್ದಾರಿ; ಕಳಪೆ ಕಾಮಗಾರಿಯೇ ಕಾರಣ– ಆರೋಪ

# ಧಾರಾಕಾರ ಮಳೆ: ಕುಸಿದ ಹೆದ್ದಾರಿ

ಪ್ರಜಾವಾಣಿ ವಾರ್ತೆ

ಸಕಲೇಶಪುರ (ಹಾಸನ ಜಿಲ್ಲೆ): ಹಾಸನ-ಬಂಟ್ವಾಳ ನಡುವೆ ನಡೆಯುತ್ತಿರುವ ಬೆಂಗಳೂರು-ಮಂಗಳೂರು ಚತುಷ್ಪಥ ರಾಷ್ಟ್ರೀಯ ಹೆದ್ದಾರಿ ತಾಲ್ಲೂಕಿನ ಆನೆಮಹಲ್ ಗ್ರಾಮದಲ್ಲಿ ಗುರುವಾರ ಸುರಿದ ಒಂದೇ ಮಳೆಗೆ ಕುಸಿದಿದೆ.

ಸಕಲೇಶಪುರ ಬೈಪಾಸ್ ಟೋಲ್‌ಗೇಟ್‌ನಿಂದ ಮಾರನಹಳ್ಳಿವರೆಗೆ ಚತುಷ್ಪಥ ಕಾಮಗಾರಿ ಪ್ರಗತಿಯಲ್ಲಿದ್ದು, ಗ್ರಾಮದಲ್ಲಿ ಕಾಂಕ್ರಿಟ್ ರಸ್ತೆಯ ಕೆಳಗೆ ಅಳವಡಿಸಿರುವ ಮೋರಿಯ ಪೈಪ್ ತುಂಡಾಗಿ ರಸ್ತೆಯ ಒಂದು ಬದಿ ಕುಸಿದಿದೆ. ಮತ್ತೊಂದು ಬದಿಯಲ್ಲಿ ವಾಹನ ಸಂಚಾರಕ್ಕೆ ಅಡ್ಡಿಯಾಗಲಿಲ್ಲ.

‘ರಸ್ತೆಯ ಕೆಳಭಾಗದಲ್ಲಿ ಅಳವಡಿಸಿರುವ ಚರಂಡಿಯ ಪೈಪುಗಳು ಉತ್ತಮ ಗುಣಮಟ್ಟದಿಂದ ಕೂಡಿಲ್ಲ’ ಎಂದು ಗ್ರಾಮದ ಭಾಸ್ಕರ್, ಹಸೈನಾರ್ ಅವರು ಕಾಮಗಾರಿ ಸಂದರ್ಭದಲ್ಲೇ ಆಕ್ಷೇಪ ವ್ಯಕ್ತಪಡಿಸಿದ್ದರು. ಆದರೆ, ಗುತ್ತಿಗೆದಾರರು ಹಾಗೂ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಎಂಜಿನಿಯರ್‌ಗಳು ಅದನ್ನುಗಂಭೀರವಾಗಿ ಪರಿಗಣಿಸದೆ ಕಳಪೆ ಕಾಮಗಾರಿ ಮಾಡಿದ್ದೇ ಕುಸಿಯಲು ಕಾರಣ’ ಎಂದು ಗ್ರಾಮಸ್ಥರು ಮಾಧ್ಯಮ ಪ್ರತಿನಿಧಿಗಳಿಗೆ ತಿಳಿಸಿದರು.

**ಶಾಸಕ ಭೇಟಿ:** ಸ್ಥಳಕ್ಕೆ ಗುರುವಾರ ಸಂಜೆ ಶಾಸಕ ಸಿಮೆಂಟ್ ಮಂಜು ಭೇಟಿ ನೀಡಿ ಪರಿಶೀಲಿಸಿದರು.

‘ಹಾಸನದಿಂದ ಮಾರನಹಳ್ಳಿವರೆಗೆ ಹೆದ್ದಾರಿ ಕಾಮಗಾರಿ ಉತ್ತಮ ಗುಣಮಟ್ಟದಿಂದ ಕೂಡಿಲ್ಲ ಎಂದು ಗುತ್ತಿಗೆದಾರರಿಗೆ ಹಾಗೂ ಎಂಜಿನಿಯರ್‌ಗಳಿಗೆ ಹಲವು ಬಾರಿ ಹೇಳಿದ್ದೆ. ನಿತ್ಯ 30 ಸಾವಿರಕ್ಕೂ ಹೆಚ್ಚು ವಾಹನಗಳು ಸಂಚರಿಸುವ ಹೆದ್ದಾರಿಯು ಕುಸಿದರೆ ಆಗುವ ಅನಾಹುತ ಊಹಿಸಲೂ ಸಾಧ್ಯವಿಲ್ಲ’ ಎಂದರು.

‘ಎಂಜಿನಿಯರ್‌ಗಳು, ಗುತ್ತಿಗೆದಾರರು ಇಂತಹ ಸಮಸ್ಯೆಗಳಾಗದಂತೆ ಗಂಭೀರವಾಗಿ ಪರಿಗಣಿಸಿ, ತ್ವರಿತವಾಗಿ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು’ ಎಂದರು.



ಸಕಲೇಶಪುರ ತಾಲ್ಲೂಕು ಆನೆಮಹಲ್ ಗ್ರಾಮದಲ್ಲಿ ಇತ್ತೀಚೆಗೆ ನಿರ್ಮಿಸಿರುವ ಬೆಂಗಳೂರು–ಮಂಗಳೂರು ಚತುಷ್ಪಥ ರಾಷ್ಟ್ರೀಯ ಹೆದ್ದಾರಿ ಕುಸಿದಿದೆ

## ವಿದ್ಯುತ್ ಸ್ಪರ್ಶ: ರಿಕ್ಷಾ ಚಾಲಕರಿಬ್ಬರ ಸಾವು

ಮಂಗಳೂರು: ನಗರದ ರೊಸಾರಿಯೊದಲ್ಲಿ ಭಾರಿ ಮಳೆ ವೇಳೆ ತುಂಡಾಗಿ ನೆಲಕ್ಕುರುಳಿದ್ದ ವಿದ್ಯುತ್ ತಂತಿ ಸ್ಪರ್ಶಿಸಿ ರಿಕ್ಷಾ ಚಾಲಕರಿಬ್ಬರು ಮೃತಪಟ್ಟಿದ್ದಾರೆ.

ಹಾಸನ ಜಿಲ್ಲೆಯ ಆಲೂರು ತಾಲ್ಲೂಕಿನ ಪಾಳ್ಯ ಹೋಬಳಿಯ ರಾಜು (50) ಹಾಗೂ ದಕ್ಷಿಣ ಕನ್ನಡ ಜಿಲ್ಲೆಯ ಪುತ್ತೂರು ತಾಲ್ಲೂಕಿನ ರಾಮಕುಂಜದ ದೇವರಾಜ್ (46) ಮೃತರು ಎಂದು ಪೊಲೀಸರು ತಿಳಿಸಿದರು.

ಬಾಡಿಗೆ ಆಟೊ ರಿಕ್ಷಾವನ್ನು ಚಲಾಯಿಸುತ್ತಿದ್ದ ರಾಜು ಹಾಗೂ ದೇವರಾಜ್ ಇಬ್ಬರು ರೊಸಾರಿಯೊದಲ್ಲಿ ಬಾಡಿಗೆ ಮನೆಯೊಂದರಲ್ಲಿ ವಾಸವಿದ್ದರು.

## ಆಗುಂಬೆ ಘಾಟಿ; ಸೆ.15ರವರೆಗೆ ಭಾರಿ ವಾಹನ ಸಂಚಾರ ನಿಷೇಧ

ಶಿವಮೊಗ್ಗ: ಭಾರಿ ಮಳೆ ಸುರಿಯುತ್ತಿರುವ ಕಾರಣ ಆಗುಂಬೆ ಘಾಟಿಯಲ್ಲಿ ಭೂಕುಸಿತ ಆಗುವ ಸಾಧ್ಯತೆ ಇರುವುದರಿಂದ ಮುಂಜಾಗ್ರತಾ ಕ್ರಮವಾಗಿ ಸೆಪ್ಟೆಂಬರ್ 15ರವರೆಗೆ ಭಾರಿ ವಾಹನಗಳ ಸಂಚಾರ ನಿಷೇಧಿಸಿ ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ಆದೇಶಿಸಿದ್ದಾರೆ.

ಶಿವಮೊಗ್ಗ ರಾಷ್ಟ್ರೀಯ ಹೆದ್ದಾರಿ ವಿಭಾಗದ ಮನವಿಯ ಹಿನ್ನೆಲೆಯಲ್ಲಿ ತೀರ್ಥಹಳ್ಳಿ-ಮಲ್ಪೆ ರಸ್ತೆಯ ಆಗುಂಬೆ ಘಾಟಿಯಲ್ಲಿ ಭಾರಿ ವಾಹನ ಹಾಗೂ ಸರಕು ಸಾಗಾಣಿಕೆ ವಾಹನಗಳ ಸಂಚಾರ ನಿಷೇಧಿಸಲಾಗಿದೆ.

ಆಗುಂಬೆ ಘಾಟಿಯ ಬದಲಿಗೆ ತೀರ್ಥಹಳ್ಳಿ-ಮಾಸ್ತಿಕಟ್ಟೆ-ಸಿದ್ದಾಪುರ-ಕುಂದಾಪುರ ಮಾರ್ಗವಾಗಿ ಉಡುಪಿಗೆ ತೆರಳಬಹುದು. ಉಡುಪಿಯಿಂದ ತೀರ್ಥಹಳ್ಳಿಗೂ ಅದೇ ಮಾರ್ಗವಾಗಿ ಬರಬಹುದು ಎಂದು ಜಿಲ್ಲಾಧಿಕಾರಿ ಆದೇಶದಲ್ಲಿ ತಿಳಿಸಿದ್ದಾರೆ.

## ವಿದ್ಯುತ್ ಪ್ರವಹಿಸಿ ಯುವತಿ ಸಾವು

ಉಜಿರೆ (ದಕ್ಷಿಣ ಕನ್ನಡ): ಶಿಬಾಜೆ ಗ್ರಾಮದಲ್ಲಿ ಗುರುವಾರ ಸಂಜೆ ಸ್ಟೇ ವೈರ್‌ಗೆ ವಿದ್ಯುತ್ ತಂತಿ ಸ್ಪರ್ಶಿಸಿದ್ದರಿಂದ ವಿದ್ಯುತ್ ಆಘಾತದಿಂದ ಯುವತಿ ಮೃತಪಟ್ಟಿದ್ದಾರೆ.

ಶಿಬಾಜೆ ಗ್ರಾಮದ ಬರ್ಗುಳ ನಿವಾಸಿ ಗಣೇಶ್ ಶೆಟ್ಟಿ ಮತ್ತು ರೋಹಿಣಿ ದಂಪತಿ ಪುತ್ರಿ ಪ್ರತೀಕ್ಷಾ ಶೆಟ್ಟಿ (21) ಮೃತಪಟ್ಟವರು.

ಪ್ರತೀಕ್ಷಾ ಶೆಟ್ಟಿ ಅವರಿಗೆ ಪಾರ್ಸೆಲ್ ಬಂದಿದ್ದರಿಂದ ಅವರು ಮನೆ ಸಮೀಪದ ರಸ್ತೆ ಪಕ್ಕ ತೆರಳಿದ್ದರು. ಆಗ ರಸ್ತೆಯಲ್ಲಿ ಹರಿಯುವ ನೀರಿನಲ್ಲಿ ವಿದ್ಯುತ್ ಪ್ರವಹಿಸಿದ್ದು, ಅದನ್ನು ಸ್ಪರ್ಶಿಸಿದ ಅವರಿಗೆ ವಿದ್ಯುತ್ ಆಘಾತ ಉಂಟಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ಗೂಗಲ್ ಮ್ಯಾಪ್ ನೋಡಿ ಚಾಲನೆ

## ಕಾರು ನೀರುಪಾಲು, ಇಬ್ಬರ ರಕ್ಷಣೆ

ಪ್ರಜಾವಾಣಿ ವಾರ್ತೆ

ಬದಿಯಡ್ಕ (ಕಾಸರಗೋಡು ಜಿಲ್ಲೆ): ಗೂಗಲ್ ಮ್ಯಾಪ್ ಹಾಕಿಕೊಂಡು ಕಾಞಂಗಾಡಿನ ಅಂಬಲತ್ತರದಿಂದ ಕರ್ನಾಟಕದ ಉಪ್ಪಿನಂಗಡಿಗೆ ತೆರಳುತ್ತಿದ್ದ ಚಾಲಕನ, ನಿಯಂತ್ರಣ ತಪ್ಪಿದ ಕಾರು ಇಲ್ಲಿನ ಪಳ್ಳಂಜಿ ಅರಣ್ಯ ಪ್ರದೇಶದಲ್ಲಿ ತೋಡಿಗೆ (ತೊರೆ) ಬಿದ್ದಿದೆ.

ಕುತ್ತಿಕೋಲಿನಿಂದ ಅರಣ್ಯದ ಮೂಲಕ ಪಾಂಡಿ ಕಡೆಗೆ ತೆರಳುವಾಗ ಪಳ್ಳಂಜಿತೋಡಿನ ಹಳೆಯ ಸೇತುವೆಯಲ್ಲಿ ಅವಘಡ ನಡೆದಿದೆ. ಏಳನೇ ಮೈಲಿನ ಅಂಜಿಲ್ಲತ್ ಹೌಸ್‌ನ ತಸ್ರೀಫ್ (36), ಪುಲ್ಲೂರ್ ಮುನಂಬಂ ಹೌಸ್‌ನ ಅಬ್ದುಲ್ ರಶೀದ್ (35) ತೆರಳುತ್ತಿದ್ದರು. ಎರಡೂ ಬದಿಯಲ್ಲಿ ಆಧಾರ ಇಲ್ಲದ ತೋಡಿನ ಸೇತುವೆ ದಾಟುವಾಗ ಕಾರು ಉರುಳಿದೆ.

ಕಾರು ಸಂಪೂರ್ಣ ಮುಳುಗಿದ್ದರೂ ಕಾರಿನಿಂದ ಹೊರಬಂದ ತಸ್ರೀಫ್, ಅಬ್ದುಲ್ ರಶೀದ್ ಅವರು ಮರ ಹತ್ತಿ ಕುಳಿತು ಪೊಲೀಸರಿಗೆ ಕರೆ ಮಾಡಿ ವಿಷಯ ತಿಳಿಸಿದರು. ಆದೂರು ಠಾಣೆ ಪೊಲೀಸರು ಮತ್ತು ಕುತ್ತಿಕೋಲಿನ ಅಗ್ನಿಶಾಮಕ ಸಿಬ್ಬಂದಿ ಅವರನ್ನು ರಕ್ಷಿಸಿದರು.

**ಸಿಲುಕಿಕೊಂಡ ಕಂಟೇನರ್:** ಇನ್ನೊಂದು ಪ್ರಕರಣದಲ್ಲಿ ಬೆಂಗಳೂರು ಕಡೆಯಿಂದ ಗೂಗಲ್ ಮ್ಯಾಪ್ ಅನುಸರಿಸಿ ಮಂಗಳೂರು ಕಡೆಗೆ ಬಂದ ಕಂಟೈನರ್ ಲಾರಿ, ಒಳರಸ್ತೆಯಲ್ಲಿ ಸಿಲುಕಿದ್ದರಿಂದ ಟ್ರಾಫಿಕ್ ಜಾಮ್ ಆಗಿತ್ತು. ಉಪ್ಪಿನಂಗಡಿ-ಅಜಿಲಮೊಗರು- ಮಣಿಹಳ್ಳ ಸಮೀಪದ ರಸ್ತೆಯನ್ನು ಗೂಗಲ್ ಮ್ಯಾಪ್ ತೋರಿಸಿತ್ತು. ಹೆದ್ದಾರಿಯಲ್ಲಿ ಕಾಮಗಾರಿ ನಡೆಯುತ್ತಿರುವ ಕಾರಣ ಗೂಗಲ್ ಮ್ಯಾಪ್ ಒಳ ರಸ್ತೆಯನ್ನು ಸೂಚಿಸಿತ್ತು. ಅದನ್ನು ನಂಬಿ ಚಾಲಕ ಈ ಗ್ರಾಮೀಣ ರಸ್ತೆಗೆ ಬಂದಿದ್ದರು.



ಬದಿಯಡ್ಕ ಸಮೀಪದ ಪಳ್ಳಂಜಿ ಪ್ರದೇಶದ ತೋಡಿಗೆ ಬಿದ್ದ ಕಾರು

## ದುಬಾರೆಯಲ್ಲಿ ದೋಣಿ ವಿಹಾರ ಸ್ಥಗಿತ

ಮಡಿಕೇರಿ: ಕುಶಾಲನಗರ ತಾಲ್ಲೂಕಿನ ದುಬಾರೆ ಸಾಕಾನೆ ಶಿಬಿರದಲ್ಲಿ ದೋಣಿ-ವಿಹಾರವನ್ನು ಅರಣ್ಯ ಇಲಾಖೆ ಗುರುವಾರ ನಿಲ್ಲಿಸಿದೆ.

ಕಾವೇರಿ ನದಿ ಇಲ್ಲಿ ಅಪಾಯದ ಮಟ್ಟ ಮೀರಿ ಹರಿಯುತ್ತಿರುವುದರಿಂದ ಪ್ರವಾಸಿಗರನ್ನು ದೋಣಿಯಲ್ಲಿ ಸಾಕಾನೆ ಶಿಬಿರಕ್ಕೆ ಕರೆದೊಯ್ಯುವುದು ಅಪಾಯಕಾರಿ ಎನಿಸಿದೆ. ಹೀಗಾಗಿ ಈ ಕ್ರಮ ಕೈಗೊಳ್ಳಲಾಗಿದೆ.

‘ನದಿಯಲ್ಲಿ ನೀರು ಹೆಚ್ಚು ರಭಸದಿಂದ ಹರಿಯುತ್ತಿದೆ. ಪ್ರವಾಸಿಗರ ಸುರಕ್ಷತೆಯ ದೃಷ್ಟಿಯಿಂದ ದೋಣಿವಿಹಾರವನ್ನು ನಿಲ್ಲಿಸಲಾಗಿದೆ. ನೀರಿನ ರಭಸ ಕಡಿಮೆಯಾಗುತ್ತಿದ್ದಂತೆ ಮತ್ತೆ ಆರಂಭಿಸಲಾಗುವುದು’ ಎಂದು ಡಿಸಿಎಫ್ ಭಾಸ್ಕರ್ ‘ಪ್ರಜಾವಾಣಿ’ಗೆ ತಿಳಿಸಿದರು.



ಶಿವಮೊಗ್ಗ ತಾಲ್ಲೂಕಿನ ಗಾಜನೂರಿನ ತುಂಗಾ ಜಲಾಶಯ ಭರ್ತಿಯಾದ ಕಾರಣ ಗುರುವಾರ ಎರಡು ಕ್ರೆಸ್ಟ್‌ಗೇಟ್‌ಗಳನ್ನು ತೆರೆದು ನದಿಗೆ ನೀರು ಹರಿಸಲಾಯಿತು – ಪ್ರಜಾವಾಣಿ ಚಿತ್ರ/ಶಿವಮೊಗ್ಗ ನಾಗರಾಜ್

## ಭದ್ರಾ, ಲಿಂಗನಮಕ್ಕಿಗೂ ಒಳಹರಿವು ಏರಿಕೆ

# ಮತ್ತಷ್ಟು ಮಳೆ: 'ತುಂಗಾ' ಭರ್ತಿ

ಪ್ರಜಾವಾಣಿ ವಾರ್ತೆ

ಮಂಗಳೂರು/ ಮಡಿಕೇರಿ/ಶಿವಮೊಗ್ಗ: ಮಲೆನಾಡು, ಕರಾವಳಿ ಸೇರಿದಂತೆ ರಾಜ್ಯದ ವಿವಿಧೆಡೆ ಧಾರಾಕಾರ ಮಳೆಯು ಗುರುವಾರವೂ ಮುಂದುವರಿದಿದೆ. ಜಲಾಶಯಗಳಿಗೆ ನೀರಿನ ಒಳಹರಿವಿನ ಪ್ರಮಾಣ ಹೆಚ್ಚಳಗೊಂಡಿದೆ.

ಶಿವಮೊಗ್ಗ ಜಿಲ್ಲೆಯ ಗಾಜನೂರು ಬಳಿ ಇರುವ ತುಂಗಾ ಜಲಾಶಯ ಸಂಪೂರ್ಣ ಭರ್ತಿಯಾಗಿದೆ. ಈ ವರ್ಷದ ಮಳೆಗಾಲದಲ್ಲಿ ರಾಜ್ಯದಲ್ಲಿ ಮೊದಲು ಭರ್ತಿಯಾದ ಜಲಾಶಯ ಇದು.

7ನೇ ಪುಟ ನೋಡಿ

## ಕಬಿನಿ ಒಳಹರಿವು ಹೆಚ್ಚಳ

ಮೈಸೂರು: ಕೇರಳದ ವಯನಾಡು ಭಾಗದಲ್ಲಿ ಉತ್ತಮ ಮಳೆಯಿಂದಾಗಿ ಜಿಲ್ಲೆಯ ಎಚ್‌.ಡಿ. ಕೋಟೆ ತಾಲ್ಲೂಕಿನ ಕಬಿನಿ ಜಲಾಶಯಕ್ಕೆ ಒಳಹರಿವು ಇನ್ನಷ್ಟು ಹೆಚ್ಚಿದ್ದು, ಗುರುವಾರ ಮುಂಜಾನೆ ಜಲಾಶಯಕ್ಕೆ 16,977 ಕ್ಯುಸೆಕ್ ಪ್ರಮಾಣದ ನೀರು ಹರಿದು ಬಂದಿತ್ತು.

2284 ಅಡಿ ಸಂಗ್ರಹ ಸಾಮರ್ಥ್ಯದ ಜಲಾಶಯದಲ್ಲಿ ಈಗ 2269.22 ಅಡಿಯಷ್ಟು ನೀರು ಸಂಗ್ರಹವಾಗಿದೆ. ಜಲಾಶಯದಿಂದ ನದಿಗೆ 1 ಸಾವಿರ ಕ್ಯುಸೆಕ್ ನೀರು ಹರಿಯುತ್ತಿದೆ.

ಕಳೆದ ವರ್ಷ ಇದೇ ಅವಧಿಯಲ್ಲಿ ಜಲಾಶಯದ ಒಳಹರಿವು ಕೇವಲ 115 ಕ್ಯುಸೆಕ್‌ನಷ್ಟಿತ್ತು. ಮೈಸೂರಿನಲ್ಲಿ ಗುರುವಾರ ದಿನವಿಡೀ ಜಿಟಿಜಿಟಿ ಮಳೆಯಾಗಿದ್ದು, ತಂಪು ವಾತಾವರಣವಿತ್ತು.

**ನೆರೆ ಸಂಕಷ್ಟ** ಪ್ರವಾಹ ಎದುರಿಸಲು ಗ್ರಾಪಂ ಮಟ್ಟದಲ್ಲಿ ಸಮಿತಿ ರಚನೆಗೆ ಸರ್ಕಾರ ನಿರ್ಧಾರ

# ಮಳೆಗಾಲದಲ್ಲಿ ರಾಜ್ಯದ 1763 ಗ್ರಾಮಗಳಲ್ಲಿ ಪ್ರವಾಹ ಭೀತಿ

• **ಗಿರೀಶ್ ಗರಗ**

**ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜ್ಯದಲ್ಲಿ ಮುಂಗಾರು ಮಳೆ ಭರ್ಜರಿಯಾಗಿ ಸುರಿದಂತೆ 1,763 ಗ್ರಾಮಗಳಲ್ಲಿ ಪ್ರವಾಹ ಪರಿಸ್ಥಿತಿ ಉಂಟಾಗುವ ಸಾಧ್ಯತೆಗಳಿವೆ. ಹೀಗಾಗಿ ಪ್ರವಾಹ ಎದುರಿಸಲು ಕಂದಾಯ ಇಲಾಖೆ ವಿಪತ್ತು ನಿರ್ವಹಣಾ ವಿಭಾಗವು ಗ್ರಾಮ ಪಂಚಾಯತಿ ಮಟ್ಟದಲ್ಲಿ ತಂಡಗಳ ರಚನೆಗೆ ಮುಂದಾಗಿದೆ.

ರಾಜ್ಯದಲ್ಲಿ ಪ್ರವಾಹ ಪರಿಸ್ಥಿತಿ ಕುರಿತಂತೆ ಕಂದಾಯ ಇಲಾಖೆ ವಿಪತ್ತು ನಿರ್ವಹಣಾ ವಿಭಾಗವು ಅಧ್ಯಯನ ನಡೆಸಿ ವರದಿ ಸಿದ್ಧಪಡಿಸಿದೆ. ಕಳೆದ 15 ವರ್ಷಗಳ ಪ್ರವಾಹ ಪರಿಸ್ಥಿತಿಯನ್ನಾಧರಿಸಿ ವರದಿಯನ್ನು ಸಿದ್ಧಪಡಿಸಲಾಗಿದ್ದು, ಅದರಲ್ಲಿ ಆತಂಕಾರಿ ಅಂಶಗಳನ್ನು ಬಹಿರಂಗಪಡಿಸಲಾಗಿದೆ.

ಅಧ್ಯಯನದಲ್ಲಿನ ವರದಿಯಲ್ಲಿರುವಂತೆ ಕಳೆದ 10 ವರ್ಷಗಳಲ್ಲಿ 7 ವರ್ಷಗಳು ರಾಜ್ಯದ ಹಲವು ಜಿಲ್ಲೆಗಳು ಪ್ರವಾಹ ಉಂಟಾಗಿದೆ. ಅದರಲ್ಲೂ 2018ರಿಂದ 2022ರವರೆಗೆ ಸತತ 5 ವರ್ಷಗಳ ಕಾಲ ಪ್ರವಾಹ ಸೃಷ್ಟಿಯಾಗಿದೆ. ರಾಜ್ಯದಲ್ಲಿ ಉಂಟಾಗಿರುವ ಪ್ರವಾಹ ಪರಿಸ್ಥಿತಿ ಕುರಿತಂತೆ ಅಧ್ಯಯನ ನಡೆಸಿರುವ ವಿಪತ್ತು ನಿರ್ವಹಣಾ ವಿಭಾಗವು ರಾಜ್ಯದ 23 ಜಿಲ್ಲೆಗಳ 148 ತಾಲೂಕುಗಳ 717 ಗ್ರಾಮ ಪಂಚಾಯತಿ ವ್ಯಾಪ್ತಿಯ 1,763 ಗ್ರಾಮಗಳು ಪ್ರವಾಹ ಪೀಡಿತ ಗ್ರಾಮಗಳನ್ನಾಗಿ ಗುರುತಿಸಿದೆ. ಅದರಲ್ಲಿ 1,003 ಗ್ರಾಮಗಳಲ್ಲಿ ಮಧ್ಯಮ ಪ್ರಮಾಣದ ಪ್ರವಾಹ ಉಂಟಾಗಲಿದ್ದು, 760 ಗ್ರಾಮಗಳಲ್ಲಿ ತೀವ್ರತರವಾದ ಪ್ರವಾಹ ಉಂಟಾಗಲಿದೆ. ಈ ಬಾರಿಯೂ ಭಾರೀ ಮಳೆ ಸುರಿದರೆ ಅಷ್ಟೂ ಗ್ರಾಮಗಳಲ್ಲಿ ಪ್ರವಾಹ ಉಂಟಾಗಲಿದೆ ಎಂದು ಮುನ್ಸೂಚನೆ ನೀಡಲಾಗಿದೆ.

**ಉತ್ತರ ಕರ್ನಾಟಕ ಜಿಲ್ಲೆಗಳಲ್ಲೇ ಹೆಚ್ಚು:** ಹೀಗೆ ಪ್ರವಾಹ ಉಂಟಾಗುವ ಗ್ರಾಮಗಳ ಪೈಕಿ ಉತ್ತರ ಕರ್ನಾಟಕ ಭಾಗದ ಜಿಲ್ಲೆಗಳ ಗ್ರಾಮಗಳೇ ಹೆಚ್ಚಿವೆ. ಪ್ರಮುಖವಾಗಿ ಕಲಬುರಗಿಯಲ್ಲಿ 238, ಬೆಳಗಾವಿಯಲ್ಲಿ 201, ಬಾಗಲಕೋಟೆಯಲ್ಲಿ 192, ಹಾವೇರಿಯಲ್ಲಿ 176, ರಾಯಚೂರು 137 ಗ್ರಾಮಗಳು ಪ್ರವಾಹ ಪೀಡಿತವಾಗಲಿವೆ. ಉಳಿದಂತೆ ಶಿವಮೊಗ್ಗದಲ್ಲಿ 142 ಗ್ರಾಮಗಳು ಪ್ರವಾಹಕ್ಕೆ ತುತ್ತಾಗಲಿದ್ದು, ಉಳಿದ 17 ಜಿಲ್ಲೆಗಳಲ್ಲಿ 100ಕ್ಕಿಂತ ಕಡಿಮೆ ಗ್ರಾಮಗಳು ಪ್ರವಾಹ ಪರಿಸ್ಥಿತಿ ಎದುರಿಸಲಿವೆ ಎಂದು ವರದಿಯಲ್ಲಿ ತಿಳಿಸಲಾಗಿದೆ.



### ನದಿ ಪಾತ್ರಗಳಲ್ಲಿ ಪ್ರವಾಹ ಉಂಟಾಗುವ ಗ್ರಾಮಗಳು

- ಕೃಷ್ಣ ಕೊಳ್ಳ: **1490** ಗ್ರಾಮಗಳು
- ಕಾವೇರಿ ಕೊಳ್ಳ: **124** ಗ್ರಾಮಗಳು
- ಪಶ್ಚಿಮ ಘಟ್ಟ ನದಿ: **90** ಗ್ರಾಮ
- ಇತರೆ ನದಿಗಳು: **59** ಗ್ರಾಮಗಳು

**ಗ್ರಾಪಂ ಮಟ್ಟದಲ್ಲಿ ತಂಡಗಳ ರಚನೆ:** ಪ್ರವಾಹ ಎದುರಿಸುವ ಗ್ರಾಮಗಳಲ್ಲಿ ರಕ್ಷಣಾ ಕಾರ್ಯ ಹಾಗೂ ಪರಿಹಾರ ಕಾರ್ಯಗಳನ್ನು ಕೈಗೊಳ್ಳಲು ಗ್ರಾಮ ಪಂಚಾಯತಿ ಮಟ್ಟದಲ್ಲಿ ತಂಡಗಳನ್ನು ರಚಿಸಲು ಕಂದಾಯ ಇಲಾಖೆ ಮುಂದಾಗಿದೆ. ಈ ಕುರಿತಂತೆ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ. ಆ ತಂಡದಲ್ಲಿ ಕಂದಾಯ ಇಲಾಖೆ, ಗ್ರಾಮೀಣಾಭಿವೃದ್ಧಿ, ಪಶು ಸಂಗೋಪನೆ, ಪೊಲೀಸ್, ಅಗ್ನಿಶಾಮಕದಳದ ಸಿಬ್ಬಂದಿಗಳನ್ನು ನೇಮಿಸುವಂತೆಯೂ ತಿಳಿಸಲಾಗಿದೆ. ಜತೆಗೆ ಆಯಾ ಗ್ರಾಮದಲ್ಲಿನ ನುರಿತ ಈಜುಗಾರರನ್ನು ಗುರುತಿಸಿ, ಅವರನ್ನು ಪ್ರವಾಹ ಪರಿಸ್ಥಿತಿಯಲ್ಲಿ ರಕ್ಷಣಾ ಕಾರ್ಯಗಳಿಗೆ ಬಳಸಿಕೊಳ್ಳುವಂತೆ ಹೇಳಲಾಗಿದೆ.

**ಗ್ರಾಪಂ ಮಟ್ಟದಲ್ಲಿ ಅಣಕು ಪ್ರದರ್ಶನ:** ಪ್ರವಾಹ ಪರಿಸ್ಥಿತಿ ಎದುರಿಸಲು ರಚಿಸಲಾಗುವ ಗ್ರಾಪಂ ಮಟ್ಟದ ತಂಡಗಳು ಜುಲೈ 15ರೊಳಗೆ ಕಂದಾಯ ಇಲಾಖೆಯಿಂದ ಕಾರ್ಯಾಗಾರವನ್ನೂ ಮಾಡಲಾಗುತ್ತದೆ. ಅದರ ಜತೆಗೆ ಪ್ರವಾಹ ಪರಿಸ್ಥಿತಿ ಎದುರಿಸುವ ಕುರಿತಂತೆ ಗ್ರಾಪಂ ಮಟ್ಟದಲ್ಲಿ ಅಣಕು ಪ್ರದರ್ಶನ ನಡೆಸಲೂ ಕಂದಾಯ ಇಲಾಖೆ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿದೆ. ಜು. 15ರೊಳಗೆ ಗ್ರಾಪಂ ಮಟ್ಟದ ತಂಡಗಳ ರಚನೆ, ಕಾರ್ಯಾಗಾರ, ಅಣಕು ಪ್ರದರ್ಶನ ಸೇರಿದಂತೆ ಉಳಿದೆಲ್ಲ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆಯೂ ಕಂದಾಯ ಇಲಾಖೆಯಿಂದ ಜಿಲ್ಲಾಧಿಕಾರಿಗಳಿಗೆ ತಿಳಿಸಲಾಗಿದೆ.

**ನೋಡಲ್ ಅಧಿಕಾರಿಗಳ ನೇಮಕ:** ಪ್ರವಾಹ ಪರಿಸ್ಥಿತಿಯನ್ನು ಎದುರಿಸುವ ಸಲುವಾಗಿ ತಾಲೂಕು ಮತ್ತು ಜಿಲ್ಲಾ ಮಟ್ಟದಲ್ಲಿ ನೋಡಲ್ ಅಧಿಕಾರಿಗಳನ್ನು ನೇಮಿಸಲು ಜಿಲ್ಲಾಧಿಕಾರಿಗಳಿಗೆ ತಿಳಿಸಲಾಗಿದೆ. ತಾಲೂಕು ನೋಡಲ್ ಅಧಿಕಾರಿ ತಮ್ಮ ವ್ಯಾಪ್ತಿಯ ಗ್ರಾಮ ಪಂಚಾಯತಿಗಳ ತಂಡಗಳೊಂದಿಗೆ 7ರಿಂದ 10 ದಿನಗಳಿಗೊಮ್ಮೆ ಸಭೆ ನಡೆಸಬೇಕು, ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿ ಪ್ರವಾಹ ಪೀಡಿತ ಗ್ರಾಮಗಳು ಹೆಚ್ಚಿರುವ ತಾಲೂಕುಗಳ ಮೇಲೆ ನಿಗಾವಹಿಸಬೇಕು ಎಂದು ಸೂಚಿಸಲಾಗಿದೆ.

# ಮಳೆಗೆ ಮೈದುಂಬಿದ ರಾಜ್ಯದ ನದಿಗಳು



ಭಾರೀ ಮಳೆಯಿಂದಾಗಿ ಕೊಡಗಿನ ಭಾಗಮಂಡಲ ಜಲಾವೃತ.



ಕಾರವಾರದಲ್ಲಿ ಕಡಲ ಕೊರೆತಕ್ಕೆ ಬಲಿಯಾದ ರೆಸಾರ್ಟ್.

↙ ಮೊದಲ ಪುಟದಿಂದ

ಕರಾವಳಿಯಲ್ಲಿ ಭಾರೀ ಮಳೆ ಮುನ್ಸೂಚನೆ ಹಿನ್ನೆಲೆಯಲ್ಲಿ ಶುಕ್ರವಾರವೂ ದಕ್ಷಿಣ ಕನ್ನಡದ ಶಾಲೆಗಳಿಗೆ ರಜೆ ಘೋಷಿಸಲಾಗಿದೆ.

**ನದಿ ಮಟ್ಟ ಏರಿಕೆ:** ಪಶ್ಚಿಮಘಟ್ಟ ಭಾಗದಲ್ಲಿ ಉತ್ತಮ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ದಕ್ಷಿಣ ಕನ್ನಡ, ಉಡುಪಿ, ಕೊಡಗು ಮತ್ತು ಚಿಕ್ಕಮಗಳೂರಿನಲ್ಲಿ ಪ್ರಮುಖ ನದಿಗಳು ಮತ್ತು ತೊರೆಗಳಲ್ಲಿ ನೀರಿನ ಮಟ್ಟ ದಿಢೀರ್ ಏರಿಕೆಯಾಗಿದೆ. ಕುಮಾರಧಾರ ನದಿ ನೀರಿನಮಟ್ಟ ಏರಿಕೆಯಾಗಿ ಸುಬ್ರಹ್ಮಣ್ಯದ ಸ್ನಾನಘಟ್ಟ ಮುಳುಗಡೆಯಾಗಿದೆ. ತುಂಗಾ ನದಿ ನೀರಿನಮಟ್ಟ ಏರಿಕೆಯಾಗಿ ಚಿಕ್ಕಮಗಳೂರಿನ ಶೃಂಗೇರಿಯಲ್ಲಿ ಕಪ್ಪೆ ಶಂಕರ ದೇಗುಲ ಜಲಾವೃತವಾಗಿದೆ. ಕೊಡಗಿನಲ್ಲಿ ಲಕ್ಷ್ಮಣತೀರ್ಥ ಮತ್ತು ಕಾವೇರಿ ನದಿ ನೀರಿನಮಟ್ಟ ಹೆಚ್ಚಾಗಿದ್ದು, ಭಾಗಮಂಡಲದಲ್ಲಿ ತ್ರಿವೇಣಿ ಸಂಗಮ ಜಲಾವೃತವಾಗಿದೆ. ಉಡುಪಿಯಲ್ಲಿ ಸೀತಾ ಮತ್ತು ಸ್ವರ್ಣ ನದಿ ಉಕ್ಕಿ ಹರಿಯುತ್ತಿದ್ದು, ಅಕ್ಕಪಕ್ಕದ ತಗ್ಗು ಗದ್ದೆ, ತೋಟಗಳಿಗೆ ನೀರು ನುಗ್ಗಿದೆ.

ಇನ್ನು ರಾಜ್ಯದಲ್ಲೇ ಮೊದಲು ಭರ್ತಿಯಾಗುವ ತುಂಗಾ ಜಲಾಶಯ ಸಂಪೂರ್ಣ ಭರ್ತಿಯಾಗಿದ್ದು, ಆರು ಸಾವಿರ ಕ್ಯುಸೆಕ್ ನೀರು ಹೊರಬಿಡಲಾಗುತ್ತಿದೆ. ಕೆಆರ್‌ಎಸ್ ಡ್ಯಾಂಗೂ 3856 ಕ್ಯುಸೆಕ್ ಹರಿದುಬರುತ್ತಿದ್ದು, ನೀರಿನಮಟ್ಟ 88.40 ಅಡಿ ತಲುಪಿದೆ. ಇನ್ನು 2859 ಅಡಿ ಗರಿಷ್ಠ ಮಟ್ಟದ ಕೊಡಗಿನ ಹಾರಂಗಿ ಡ್ಯಾಂ ನೀರಿನಮಟ್ಟ 2832 ಅಡಿಗೆ ತಲುಪಿದೆ.

**ಕೃತಕ ಪ್ರವಾಹ:** ಮಂಗಳೂರು ಮತ್ತು ಉಡುಪಿ ನಗರದಲ್ಲಿ ಕೃತಕ ಪ್ರವಾಹ ಉಂಟಾಗಿ ಜನ ಪರದಾಡಬೇಕಾಯಿತು. ಮಂಗಳೂರಿನ ಹಲವೆಡೆ ಹಾಗೂ ಉಡುಪಿಯ ಮೂಡನಿಡಂಬೂರು, ಕಲ್ಸಂಕ ಮತ್ತು ಬೈಲಕೆರೆ ಪ್ರದೇಶದಲ್ಲಿ ಕೃತಕ ಪ್ರವಾಹದಿಂದಾಗಿ ಹಲವು ಮನೆಗಳಿಗೆ ನೀರು ನುಗ್ಗಿದೆ.

**ಮೂವರು ಸಾವು:** ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮೂವರು ವಿದ್ಯುತ್ ಸ್ಪರ್ಶಕ್ಕೆ ಬಲಿಯಾಗಿದ್ದಾರೆ. ಮಂಗಳೂರಿನ ಪಾಂಡೇಶ್ವರದ ರೊಸಾರಿಯೊ ಚರ್ಚ್ ಬಳಿ ವಿದ್ಯುತ್ ತಂತಿ ತಗುಲಿ ರಿಕ್ಷಾ ಚಾಲಕರಾದ ಹಾಸನದ ರಾಜು (50) ಹಾಗೂ ಪುತ್ತೂರು ರಾಮಕುಂಜದ ದೇವರಾಜ್ (46) ಮೃತಪಟ್ಟಿದ್ದಾರೆ. ಬುಧವಾರ ರಾತ್ರಿ ರಿಕ್ಷಾ ಸ್ವಚ್ಛ ಮಾಡಲೆಂದು ಬಕೆಟ್‌ನಲ್ಲಿ ನೀರು ಹಿಡಿದು ರಾಜು ಹೊರ ಬಂದಾಗ ಭಾರೀ ಗಾಳಿಗೆ ಮರವೊಂದು ಉರುಳಿ ಕಳಚಿಬಿದ್ದ ವಿದ್ಯುತ್ ತಂತಿ ಸ್ಪರ್ಶಿಸಿ ವಿದ್ಯುತ್ ಆಘಾತಕ್ಕೆ ಒಳಗಾಗಿದ್ದಾರೆ. ಆಗ ಅವರನ್ನು ರಕ್ಷಿಸಲು ಬಂದ ದೇವರಾಜು ಕೂಡ ವಿದ್ಯುತ್ ಸ್ಪರ್ಶಕ್ಕೆ ಒಳಗಾಗಿದ್ದು, ಇಬ್ಬರೂ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಗುರುವಾರ ಬೆಳಗ್ಗೆ 6 ಗಂಟೆ ವೇಳೆಗೆ ಬೀದಿ ದೀಪ ಆರಿಸಲು ಬಂದ ಪಾಲಿಕೆ ಸಿಬ್ಬಂದಿ ಗಮನಿಸಿದಾಗ ಪ್ರಕರಣ ಬೆಳಕಿಗೆ ಬಂದಿದೆ.

ಇನ್ನು ಬೆಳ್ತಂಗಡಿ ತಾಲೂಕಿನ ಶಿಬಾಜೆ ಗ್ರಾಮದ ಬರ್ಗುಲಾ ಎಂಬಲ್ಲಿ ಪ್ರತೀಕ್ಷಾ ಶೆಟ್ಟಿ(20) ಎಂಬ ಯುವತಿ ಪಾರ್ಸೆಲ್‌ವೊಂದನ್ನು ಸ್ವೀಕರಿಸಲು ಮನೆ ಸಮೀಪದ ರಸ್ತೆಗೆ ಬಂದಾಗ ನೀರಿಗೆ ತಾಕಿದ್ದ ವಿದ್ಯುತ್ ತಂತಿ ಸ್ಪರ್ಶಿಸಿ ಮೃತಪಟ್ಟಿದ್ದಾಳೆ.

## ಮಧೂರು ದೇವಾಲಯ ಜಲಾವೃತ

ಕೇರಳದ ಗಡಿಭಾಗ ಕಾಸರಗೋಡಿನಲ್ಲೂ ಗುರುವಾರ ಧಾರಾಕಾರ ಮಳೆಯಾಗಿದ್ದು, ನದಿಗಳು ಉಕ್ಕಿ ಹರಿಯುತ್ತಿವೆ. ಪರಿಣಾಮ ಮಧೂರಿನ ಪ್ರಸಿದ್ಧ ಮದನಂತೇಶ್ವರ ಸಿದ್ಧಿವಿನಾಯಕ ದೇವಾಲಯ ಸಂಪೂರ್ಣ ಜಲಾವೃತಗೊಂಡಿತ್ತು. ಮಧುವಾಹಿನಿ ನದಿ ತುಂಬಿಹರಿಯುತ್ತಿರುವುದರಿಂದ ದೇವಾಲಯ ಆವರಣದಲ್ಲಿ 3-4 ಅಡಿಗಳಷ್ಟು ಎತ್ತರಕ್ಕೆ ನೀರು ಹರಿಯುತ್ತಿದೆ.



ದಕ್ಷಿಣ ಕನ್ನಡದಲ್ಲಿ ವಿದ್ಯುತ್ ತಂತಿ ತಗುಲಿ ಇಬ್ಬರು ಬಲಿ.



ಮಡಿಕೇರಿಯಲ್ಲಿ ಮಳೆಗೆ ಮನೆಗೋಡೆ ಕುಸಿತ.

## ಮಲೆನಾಡು, ಕರಾವಳೀಲಿ ಮಳೆಯಬ್ಬರ

# ಮಳೆಗೆ ಮೈದುಂಬಿದ ರಾಜ್ಯದ ನದಿಗಳು

## ಕಾವೇರಿ, ತುಂಗಾ ಸೇರಿ ಹಲವು ನದಿ ಮಟ್ಟ ಏರಿಕೆ

## ಮತ್ತೆ 3 ಬಲಿ | ದಕ್ಷಿಣ ಕನ್ನಡ ಶಾಲೆ, ಕಾಲೇಜಿಗೆ ರಜೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕರಾವಳಿ ಹಾಗೂ ಮಲೆನಾಡು ಜಿಲ್ಲೆಗಳಲ್ಲಿ ಕಳೆದೆರಡು ದಿನಗಳಿಂದ ಇರುವ ಮಳೆಯಬ್ಬರ ಗುರುವಾರವೂ ಮುಂದುವರಿದಿದೆ. ಪಶ್ಚಿಮ ಘಟ್ಟದಲ್ಲಿ ಭಾರೀ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಕುಮಾರಧಾರಾ, ಕಾವೇರಿ, ತುಂಗಾ, ಲಕ್ಷ್ಮಣತೀರ್ಥ, ಸುವರ್ಣಾ ಸೇರಿ ಹಲವು ನದಿಗಳ ನೀರಿನ ಮಟ್ಟ ಏರಿಕೆಯಾಗಿದ್ದು, ಪ್ರವಾಹದ ಆತಂಕ ಶುರುವಾಗಿದೆ.



ಸಮುದ್ರ ತೀರದಲ್ಲೂ ಕಡಲ್ಕೊರೆತ ಹೆಚ್ಚಾಗಿದ್ದು, ಅಪಾಯದಂಚಿನಲ್ಲಿರುವ ಮನೆಗಳ ನಿವಾಸಿಗಳನ್ನು ಸ್ಥಳಾಂತರಿಸಲಾಗಿದೆ.

ಈ ಮಧ್ಯೆ, ಮಳೆ ಸಂಬಂಧಿ ಅನಾಹುತಕ್ಕೆ ದಕ್ಷಿಣ ಕನ್ನಡದಲ್ಲಿ ಮತ್ತೆ ಮೂವರು ಬಲಿಯಾಗಿದ್ದಾರೆ.

↘ 5

# Monsoon gains steam in coastal districts, parts of Malnad

## Red alert sounded in DK today; holiday declared for schools, colleges

MANGALURU/HUBBALLI/ MYSURU, DHNS

With southwest monsoon gaining steam, all three coastal districts - Uttara Kannada, Udupi and Dakshina Kannada - and parts of Malnad, including Kodagu and Chikkamagaluru, have been experiencing heavy to very showers since Tuesday night.

The India Meteorological Department has forecast more torrential rain for the region, sounding a red alert for coastal districts and an orange alert for Kodagu and Chikkamagaluru for Thursday.

The Dakshina Kannada district administration has declared a holiday for schools and colleges for Thursday.

Intermittent spells of sharp showers have created a flood-like situation in several parts of the coastal districts.

Motorists had a tough time in negotiating the flooded Moodbidri-Mangaluru stretch of national highway near Badaga Yedapadavu and near Tumbe in Bantwal taluk.

Rainwater inundated the Jeppinamogaru area of Mangaluru city. Potholes have emerged on the rain-battered national highway and several roads in Mangaluru, causing grave hardships to the motorists.



River Cauvery comes alive following copious rainfall, near Siddapur in Kodagu district. DH PHOTO

A portion of road between Vittal (Vitla) and Mangaluru has caved in at Bobbekeri. Tree fall incidents have been reported at several places in the twin districts. Manchi in Bantwal taluk has registered 180 mm of rain in the last 24 hours

The situation of Uttara Kannada district was no different.

Unrelenting rains have flooded roads, houses and temples in Bhatkal and Murudeshwar.

The vehicular movement on Kumta-Siddapur state highway near Valgalli was hit for hours due to flash floods. The roof of Panchalinga government higher primary school at Shivalli in Sirsi taluk was damaged after a massive tree came crashing on it.

River Cauvery, Kannika and several rivulets have come alive in Kodagu following the relentless showers.

Triveni Sangam at Bhagamandala is full to the brim. Naaladi in Napoklu hobli has recorded 196 mm of rain in just 24 hours (ending 8.30 am on Wednesday).

Tree fall incidents at Chettalli-Neerukolli road has caused hardships to students. Mud slips have been reported at several places including at Kalatmadu residential area near Siddapur.

Virajpet BEO Prakash has declared holiday for schools in Virajpet and Ponnampet taluks in view of heavy rain forecast for Thursday.

Water level of Hemavathi, Tunga and Bhadra rivers has gone up following heavy rains in catchments in Chikkamagaluru

# Heavy rain lashes Kerala, seawater enters houses in many parts of State

Several houses partially destroyed, trees uprooted; mother and child injured in collapse of roof in Alappuzha; situation under control but heavy rain to continue for 48 hours, says Minister

**The Hindu Bureau**
THIRUVANANTHAPURAM

A reinvigorated monsoon lashed across the State on Wednesday with parts of north and central Kerala and hilly areas experiencing heavy rain, bringing normal life to a halt in many places.

A 15-year-old youth went missing in Kuthirappuzha, near Chokkad, in Malappuram. A mother and child sustained injuries when the roof of their house collapsed in the heavy rain near Amabalappuzha in Alappuzha.

Scores of houses were partially destroyed in many places across the State due to mudslips, uprooted trees, and broken branches falling on houses, as per initial reports. The shutters of the Poringalkuthu, Kallarkutty, Pambla and Malankara dams were opened following heavy rain in the catchment areas. Two shutters of the Maniyar barrage were also opened to regulate the inflow.



**Caught in downpour:** Commuters during heavy rain in Thiruvananthapuram on Wednesday. The rain, triggered by an offshore trough, also caused rough seas in many places in Kerala. PTI

The heavy rain, triggered by an offshore trough, also caused rough seas in many places, like Chavakkad in Thrisur, Ponnani in Malappuram, and Kannamali in Ernakulam.

A makeshift causeway constructed as part of a bridge work across the Bharathapuzha was damaged in the heavy rain near Alathur in Palakkad.

A couple identified as Wilson and his wife, Jansi, at Devikulam had a narrow escape after a retaining wall fell on their house.

Seawater entered the houses along the coast at Kannamali and Njarakkal in Ernakulam, Veliancode and Palapetti in Ponnanni, parts of Punnapra in Alappuzha, and Kadappuram and Anjangadi, near Chavakkad, in Thrissur.

A relief camp has been opened at Kanayannur in Ernakulam accommodating 20 people from seven families. In Kottayam, traffic along the Kottayam-Kumily route was disrupted after trees fell across the road.

The swollen Pampa river submerged the causeways at Karumbanmoozhi and Arayanjilimon, leaving villagers stranded.

However, the situation is under control, said State Revenue Minister K. Rajan. Speaking to the media, the Minister said nine teams of the National Disaster Response Force (NDRF) had already been deployed in various parts of the State.

Heavy rain is likely to continue for the next 48 hours, the Minister said.

A holiday has been declared for educational institutions, including professional colleges, in Wayanad, Pathanamthitta, and Chethala taluk in Alappuzha, on Thursday in view of the heavy rain forecast. However, there would not be any changes for examination scheduled earlier.

Meanwhile, the India Meteorological Department (IMD) issued an orange alert warning of very heavy rainfall in Wayanad and Kannur and a yellow alert for seven districts from Ernakulam to Kasaragod, forecasting heavy rain in the range of 64.5 mm to 115.6 mm in 24 hours.

# ಆರಿದ್ರಾ ಮಳೆಯ ಅಬ್ಬರ



ಭಾರಿ ಮಳೆಯಿಂದ ಕೊಡಗು ಜಿಲ್ಲೆಯ ಭಾಗಮಂಡಲದಲ್ಲಿ ತ್ರಿವೇಣಿ ಸಂಗಮ ಬಹುತೇಕ ಭರ್ತಿಯಾಗಿದೆ.

ಮೊದಲನೇ ಪುಟದಿಂದ...

ಬುಧವಾರ ಬೆಳಗ್ಗೆ 8.30ಕ್ಕೆ ಕೊನೆಗೊಂಡಂತೆ ಕಳೆದ 24 ಗಂಟೆ ಅವಧಿಯಲ್ಲಿ 62.63 ಮಿ.ಮೀ. ಸರಾಸರಿ ಮಳೆಯಾಗಿದೆ. ಶಿವಮೊಗ್ಗ, ಚಿಕ್ಕಮಗಳೂರು, ಮೈಸೂರು ಜಿಲ್ಲೆಯ ಬಹುತೇಕ ಭಾಗಗಳಲ್ಲಿ ಜೋರು ಮಳೆಯಾಗಿದೆ. ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡದಲ್ಲಿ ಗುರುವಾರ (ಜೂ.27) ಭಾರಿ ಮಳೆ ಸಾಧ್ಯತೆ ಹಿನ್ನೆಲೆಯಲ್ಲಿ ಹವಾಮಾನ ಇಲಾಖೆ ರೆಡ್ ಅಲರ್ಟ್ ಘೋಷಿಸಿದೆ. ಶುಕ್ರವಾರದಿಂದ ಎರಡು ದಿನ ಆರೆಂಜ್ ಅಲರ್ಟ್ ಇರಲಿದೆ. ಬೆಳಗಾವಿ, ಧಾರವಾಡ, ಹಾವೇರಿ, ಹಾಸನದಲ್ಲಿ ಗುರುವಾರ ಹಾಗೂ ಶುಕ್ರವಾರ, ಮೈಸೂರು ಜಿಲ್ಲೆಯಲ್ಲಿ ಗುರುವಾರ ಯೆಲ್ಲೋ ಅಲರ್ಟ್ ಇರಲಿದೆ. ದಕ್ಷಿಣ ಕನ್ನಡದ ಮೂಲ್ಕಿಯಿಂದ ಮಂಗಳೂರಿನವರೆಗೆ, ಉಡುಪಿಯ ಬೈಂದೂರಿನಿಂದ ಕಾಪುವರೆಗೆ ಹಾಗೂ ಉತ್ತರ ಕನ್ನಡದ ಮಾಜಾಳಿಯಿಂದ ಭಟ್ಕಳದವರೆಗೆ ಮುಂದಿನ 2 ದಿನ 3.9 ಮೀ. ಎತ್ತರದಷ್ಟು ಅಲೆಗಳು ಏಳಲಿವೆ. ಕರಾವಳಿ ಉದ್ದಕ್ಕೂ ಪ್ರತಿ ಗಂಟೆಗೆ 55 ಕಿ.ಮೀ. ವೇಗದಲ್ಲಿ ಬಿರುಗಾಳಿ ಬೀಸಲಿದೆ. ಹೀಗಾಗಿ, ಸಮುದ್ರಕ್ಕೆ ಇಳಿಯದಂತೆ ಇಲಾಖೆ ಸೂಚಿಸಿದೆ.

# ಆರಿದ್ರಾ ಮಳೆಯ ಅಬ್ಬರ

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮನೆ ಕುಸಿದು ನಾಲ್ವರ ಸಾವು

ಬೆಂಗಳೂರು: ರಾಜ್ಯದ ಹಲವೆಡೆ ಆರಿದ್ರಾ ಮಳೆ ಬಿರುಸು ಪಡೆದಿದ್ದು, ಕರಾವಳಿ, ಪಶ್ಚಿಮಘಟ್ಟ ಹಾಗೂ ಕೊಡಗು ಜಿಲ್ಲೆಗಳಲ್ಲಿ ವರುಣಾರ್ಭಟ ತೀವ್ರಗೊಂಡಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಳೆಯಿಂದಾಗಿ ಗೋಡೆ ಕುಸಿದು ಒಂದೇ ಕುಟುಂಬದ ನಾಲ್ವರು ಸಾವನ್ನಪ್ಪಿದ್ದಾರೆ. ಮುನ್ನೆಚ್ಚರಿಕೆ ಕ್ರಮವಾಗಿ ಮಡಿಕೇರಿ ಜಿಲ್ಲೆಯ ಅಂಗನವಾಡಿ, ಸರ್ಕಾರಿ ಅನುದಾನಿತ, ಖಾಸಗಿ ಪ್ರಾಥಮಿಕ, ಪ್ರೌಢಶಾಲೆಗಳಿಗೆ ಗುರುವಾರ ರಜೆ ಘೋಷಿಸಲಾಗಿದೆ. ಮಡಿಕೇರಿಯ ಪೊನ್ನಂಪೇಟೆ ಹಾಗೂ ವಿರಾಜಪೇಟೆ ತಾಲೂಕು ವ್ಯಾಪ್ತಿಯಲ್ಲಿ ಹಲವೆಡೆ ಧಾರಾಕಾರ ಮಳೆ ಸುರಿಯುತ್ತಿರುವ ಹಿನ್ನೆಲೆಯಲ್ಲಿ ಜೂ. 27 ರಂದು ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಿಗೆ ರಜೆ ಘೋಷಣೆ ಮಾಡಲಾಗಿದೆ. ಕೊಡಗು ಜಿಲ್ಲೆ ಭಾಗಮಂಡಲದಲ್ಲಿ ಮಂಗಳವಾರ ರಾತ್ರಿಯಿಂದ ಜೋರು ಮಳೆಯಾಗುತ್ತಿರುವುದರಿಂದ ತ್ರಿವೇಣಿ ಸಂಗಮ ಬಹುತೇಕ ಭರ್ತಿಯಾಗಿದೆ. ಪುಟ 7

**» ದ.ಕನ್ನಡ ಜಿಲ್ಲೆ, ಕೊಡಗಿನ 2 ತಾಲೂಕು ಶಾಲೆಗಳಿಗೆ ರಜೆ**

### ಮಲಗಿದ್ದಲ್ಲೇ ಶವವಾದರು



ಉಳ್ಳಾಲ (ದ.ಕ.): ಭಾರಿ ಮಳೆಗೆ ಉಳ್ಳಾಲದ ಮುನ್ನೂರು ಗ್ರಾಮದ ಮದನಿ ನಗರ ಎಂಬಲ್ಲಿ ಒಂದೇ ಕುಟುಂಬದ ನಾಲ್ವರು ಬಲಿಯಾಗಿದ್ದಾರೆ. ನಸುಕಿನ ವೇಳೆ ಪಕ್ಕದ ಮನೆಯ ತಡೆಗೋಡೆ ಕುಸಿದ ಪರಿಣಾಮ ಮನೆಯೊಳಗೆ ನಿದ್ರಿಸುತ್ತಿದ್ದ ಮೊಹಮ್ಮದ್ ಯಾಸೀರ್(45), ಪತ್ನಿ ಮರಿಯಮ್ಮ (40) ಮಕ್ಕಳಾದ ರಿಫಾನಾ(17) ಮತ್ತು ಆಯಿಶಾ ರಿಯಾನಾ(14) ಸಾವಿಗೀಡಾಗಿದ್ದಾರೆ.

# ಧಾರಾಕಾರ ಮಳೆ: ತುಂಬಿದ ಹೊಳೆ

ಒಂದನೇ ಪುಟದಿಂದ...

ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು ಜಿಲ್ಲೆಯಾದ್ಯಂತ ಬುಧವಾರ ಭಾರಿ ಮಳೆಯಾಗಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜೂನ್ 27ರಂದು ರೆಡ್ ಅಲರ್ಟ್ ಘೋಷಿಸಿದ್ದು, ಶಾಲಾ–ಕಾಲೇಜುಗಳಿಗೆ ರಜೆ ಘೋಷಿಸಲಾಗಿದೆ. ಕೊಡಗು ಜಿಲ್ಲೆಯ ಪೊನ್ನಂಪೇಟೆ ಮತ್ತು ವಿರಾಜಪೇಟೆಯ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಕೂಡ ಗುರುವಾರ ರಜೆ ನೀಡಲಾಗಿದೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಂಗಳವಾರ ರಾತ್ರಿ 9 ಗಂಟೆ ಸುಮಾರಿಗೆ ಶುರುವಾಗಿದ್ದ ಮಳೆ ಮುಂಜಾನೆವರೆಗೂ ಬಿಟ್ಟು ಬಿಟ್ಟು ಸುರಿಯಿತು. ಬುಧವಾರವೂ ದಿನವಿಡೀ ಮಳೆಯಾಯಿತು.

ಮಂಗಳೂರು ನಗರದ ಜಪ್ಪಿನಮೊಗರು ಪ್ರದೇಶದಲ್ಲಿ ತಗ್ಗು ಪ್ರದೇಶಗಳು ಜಲಾವೃತವಾಗಿವೆ. ಬಜಾಲ್‌ನಲ್ಲಿ ರೈಲ್ವೆ ಕೆಳಸೇತುವೆಯಲ್ಲಿ ನೀರು ತುಂಬಿ ಸಾರ್ವಜನಿಕರು ಸಮಸ್ಯೆ ಎದುರಿಸಿದರು. ಮಳೆಯಿಂದಾಗಿ ಜಿಲ್ಲೆಯಾದ್ಯಂತ ಅಲ್ಲಲ್ಲಿ ರಸ್ತೆ ಹಾಗೂ ಹೆದ್ದಾರಿಗಳಲ್ಲಿ ಗುಂಡಿಗಳು ನಿರ್ಮಾಣವಾಗಿವೆ. ಸುರತ್ಕಲ್‌ನಲ್ಲಿ ರಾಷ್ಟ್ರೀಯ ಹೆದ್ದಾರಿಯಲ್ಲಿದ್ದ ಗುಂಡಿಯಿಂದಾಗಿ ಸ್ಕೂಟರ್ ಸವಾರರೊಬ್ಬರು ಆಯತಪ್ಪಿ ನೆಲಕ್ಕುರುಳಿದರು. ಅದೇ ಗುಂಡಿಯಲ್ಲಿ ತಮ್ಮ ಸ್ಕೂಟರ್ ನಿಲ್ಲಿಸಿದ ಅವರು ಅದರ ಪಕ್ಕದಲ್ಲಿ ನಿಂತು ವಿನೂತನ ರೀತಿಯಲ್ಲಿ ಪ್ರತಿಭಟನೆ ನಡೆಸಿದರು. ಗುಂಡಿ ಇರುವ ಬಗ್ಗೆ ಇತರ ವಾಹನಗಳ ಚಾಲಕರಲ್ಲೂ ಜಾಗೃತಿ ಮೂಡಿಸಿದರು.

| ಎಲ್ಲೆಲ್ಲಿ ಮಳೆ | ಪ್ರಮಾಣ ಸೆಂ.ಮೀ.ಗಳಲ್ಲಿ |
|---|---|
| ನಾಲಡಿ ಗ್ರಾಮ (ನಾಪೋಕ್ಲು ಹೋಬಳಿ) | 19.6 |
| ಮಂಚಿ (ಬಂಟ್ವಾಳ) | 18 |
| ಮಂಕಿ (ಉತ್ತರ ಕನ್ನಡ ತಾಲ್ಲೂಕು) | 17 |
| ಭಾಗಮಂಡಲ (ಕೊಡಗು) | 15 |
| ಮಾಣಿ (ಬಂಟ್ವಾಳ) | 14 |
| ಕುಂದಾಪುರ (ಉಡುಪಿ) | 13 |
| ಇರಾ (ಬಂಟ್ವಾಳ) | 15 |
| ಬಾಳ್ತಿಲ (ಬಂಟ್ವಾಳ) | 14 |
| ಕೋಟೆಕಾರು (ಉಲ್ಲಾಳ) | 12 |
| ಬೋಳಿಯಾರ್ (ಉಲ್ಲಾಳ) | 12 |
| ಬ್ರಹ್ಮಾವರ (ಉಡುಪಿ) | 10 |

**ಅಲರ್ಟ್ ಘೋಷಣೆ:** ರಾಜ್ಯದ ಹಲವೆಡೆ ಗುರುವಾರವೂ ಗುಡುಗು ಸಹಿತ ಭಾರಿ ಮಳೆಯಾಗುವ ಸಾಧ್ಯತೆಯಿದ್ದು, ಹವಾಮಾನ ಇಲಾಖೆಯು 10 ಜಿಲ್ಲೆಗಳಿಗೆ 'ಅಲರ್ಟ್' ಘೋಷಿಸಿದೆ. ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ, ಕೊಡಗು, ಶಿವಮೊಗ್ಗ ಹಾಗೂ ಚಿಕ್ಕಮಗಳೂರು ಜಿಲ್ಲೆಗೆ 'ಆರೆಂಜ್ ಅಲರ್ಟ್' ನೀಡಲಾಗಿದೆ. ಬೆಳಗಾವಿ, ಧಾರವಾಡ, ಹಾವೇರಿ ಹಾಗೂ ಹಾಸನ ಜಿಲ್ಲೆಗೆ 'ಯೆಲ್ಲೊ ಅಲರ್ಟ್' ಘೋಷಿಸಲಾಗಿದೆ. ಇಲ್ಲಿ ಗಂಟೆಗೆ 45 ಕಿ.ಮೀ.ಯಿಂದ 55 ಕಿ.ಮೀ. ವೇಗದಲ್ಲಿ ಗಾಳಿ ಬೀಸುವ ಸಾಧ್ಯತೆ ಇದೆ ಎಂದು ಇಲಾಖೆ ಮುನ್ಸೂಚನೆ ನೀಡಿದೆ.

ಕರಾವಳಿ ಉದ್ದಕ್ಕೂ ಬಿರುಗಾಳಿಯ ಅರ್ಭಟ ಹೆಚ್ಚಿರುವ ಸಾಧ್ಯತೆಯಿದೆ. ಗಂಟೆಗೆ 35 ಕಿ.ಮೀ.ಯಿಂದ 55 ಕಿ.ಮೀ. ವೇಗದಲ್ಲಿ ಗಾಳಿ ಬೀಸುವ ಸಂಭವವಿದೆ. ಸಮುದ್ರದಲ್ಲಿ ಭಾರಿ ಅಲೆಗಳು ಕಾಣಿಸಿಕೊಳ್ಳಬಹುದು. ಆದ್ದರಿಂದ, ಮೀನುಗಾರರು ಸಮುದ್ರಕ್ಕೆ ಇಳಿಯುವಾಗ ಎಚ್ಚರ ವಹಿಸಬೇಕು. ಸಣ್ಣ ಹಡಗುಗಳು ಸಂಚಾರ ಹಾಗೂ ಸಮುದ್ರದ ದಡದಲ್ಲಿ ಮನೋರಂಜನಾ ಚಟುವಟಿಕೆಗಳನ್ನು ನಡೆಸದಂತೆ ಇಲಾಖೆ ಎಚ್ಚರಿಕೆ ನೀಡಿದೆ.

## ಇಬ್ಬರು ಮಕ್ಕಳು, ಅಪ್ಪ–ಅಮ್ಮ ಸಾವು

ಒಂದನೇ ಪುಟದಿಂದ...

ಆರು ವರ್ಷಗಳ ಹಿಂದೆ ಮನೆ ಖರೀದಿಸಿದ್ದ ಯಾಸಿರ್ ಅದನ್ನು ಭೋಗ್ಯಕ್ಕೆ ನೀಡಿದ್ದರು. ಆರು ತಿಂಗಳ ಹಿಂದಷ್ಟೇ ಮನೆಗೆ ವಾಪಸ್ಸಾಗಿದ್ದರು. ಎರಡು ವರ್ಷಗಳ ಹಿಂದೆಯೂ ಇದೇ ಮನೆ ಮೇಲೆ ಆವರಣ ಗೋಡೆ ಕುಸಿದಿತ್ತು ಎಂದು ಸ್ಥಳೀಯರು ಮಾಹಿತಿ ನೀಡಿದರು.

ವಿಧಾನ ಸಭಾಧ್ಯಕ್ಷ ಯು.ಟಿ.ಖಾದರ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು. ಸಂತ್ರಸ್ತ ಕುಟುಂಬಕ್ಕೆ ಗರಿಷ್ಠ ಪರಿಹಾರ ಕೊಡಿಸಲು ಪ್ರಯತ್ನಿಸುವುದಾಗಿ ಭರವಸೆ ನೀಡಿದರು.

# ಭಾರಿ ಮಳೆ: ತುಂಬಿದ ಹೊಳೆ

## ಹಾರಂಗಿ: ಒಳಹರಿವು 810 ಕ್ಯುಸೆಕ್‌ಗೆ ಏರಿಕೆ ● ಕರಾವಳಿಯಲ್ಲೂ ಭಾರಿ ಮಳೆ

ಪ್ರಜಾವಾಣಿ ವಾರ್ತೆ

**ಮಡಿಕೇರಿ/ಮಂಗಳೂರು/ಬೆಂಗಳೂರು:** ರಾಜ್ಯದ ವಿವಿಧ ಭಾಗಗಳಲ್ಲಿ ಬುಧವಾರ ಧಾರಾಕಾರ ಮಳೆ ಸುರಿದು ಜನರಲ್ಲಿ ನಿರಾಳ ಭಾವ ಮೂಡಿಸಿದೆ.

ಬುಧವಾರ ಬೆಳಿಗ್ಗೆ 8.30ಕ್ಕೆ ಕೊನೆಗೊಂಡಂತೆ ಹಿಂದಿನ 24 ಗಂಟೆಗಳಲ್ಲಿ ಕರಾವಳಿಯ ಬಹುತೇಕ ಕಡೆ ಹಾಗೂ ಒಳನಾಡಿನ ಕೆಲವೆಡೆ ಮಳೆಯಾಗಿದೆ.

ನೈರುತ್ಯ ಮುಂಗಾರು ಕರಾವಳಿಯಲ್ಲಿ ಚುರುಕಾಗಿದೆ. ದಕ್ಷಿಣ ಒಳನಾಡಿನಲ್ಲಿ ಸಾಧಾರಣವಾಗಿದ್ದು, ಉತ್ತರ ಒಳನಾಡಿನಲ್ಲಿ ದುರ್ಬಲವಾಗಿದೆ.

ಕೊಡಗು ಜಿಲ್ಲೆಯ ಮಡಿಕೇರಿ, ಭಾಗಮಂಡಲ ಸೇರಿದಂತೆ ಹಲವೆಡೆ ಮಂಗಳವಾರ ರಾತ್ರಿಯಿಂದಲೂ ನಿರಂತರವಾಗಿ ಒಂದೇ ಸಮನೆ ಮಳೆ ಸುರಿಯುತ್ತಿದ್ದು, ನದಿ ತೊರೆಗಳು ಮೈದುಂಬತೊಡಗಿವೆ. ಭಾಗಮಂಡಲದ ತ್ರಿವೇಣಿ ಸಂಗಮವೂ ತುಂಬಿ ಹರಿದಿದೆ.

ಇದರಿಂದ, ಇಲ್ಲಿನ ಕಾವೇರಿ ಮತ್ತು ಕನ್ನಿಕಾ ನದಿಗಳಲ್ಲಿ ನೀರಿನ ಮಟ್ಟ ಗಣನೀಯ ಪ್ರಮಾಣದಲ್ಲಿ ಹೆಚ್ಚಾಗಿದೆ. ಹಾರಂಗಿ ಜಲಾಶಯದ ಒಳಹರಿವಿನ ಪ್ರಮಾಣ 514 ಕ್ಯುಸೆಕ್‌ನಿಂದ 810 ಕ್ಯುಸೆಕ್‌ಗೆ ಏರಿಕೆಯಾಗಿದೆ.

5ನೇ ಪುಟ ನೋಡಿ



ಧಾರಾಕಾರ ಮಳೆಯಿಂದ ಕೊಡಗು ಜಿಲ್ಲೆಯ ಭಾಗಮಂಡಲದ ತ್ರಿವೇಣಿ ಸಂಗಮ ತುಂಬಿ ಹರಿಯಿತು

### ಕಬಿನಿ ಒಳಹರಿವು ಹೆಚ್ಚಳ

**ಮೈಸೂರು:** ಜಿಲ್ಲೆಯ ಹಲವೆಡೆ ಮಂಗಳವಾರ ರಾತ್ರಿಯಿಂದ ನಿರಂತರವಾಗಿ ಮಳೆ ಸುರಿಯುತ್ತಿದ್ದು, ಕಬಿನಿ ಜಲಾಶಯದಲ್ಲಿ ನೀರಿನ ಒಳಹರಿವು 6 ಸಾವಿರ ಕ್ಯುಸೆಕ್‌ಗೆ ಏರಿಕೆಯಾಗಿದೆ. ಜೂನ್ 21ರಂದು ಸಾವಿರ ಕ್ಯುಸೆಕ್ ಒಳಹರಿವಿದ್ದು, ವಾರದ ಅಂತರದಲ್ಲಿ ಐದು ಸಾವಿರ ಕ್ಯುಸೆಕ್ ಹೆಚ್ಚಾಗಿದೆ.

### ಇಬ್ಬರು ಮಕ್ಕಳು, ಅಪ್ಪ-ಅಮ್ಮ ಸಾವು

**ಉಳ್ಳಾಲ (ದಕ್ಷಿಣ ಕನ್ನಡ):** ಭಾರಿ ಮಳೆಗೆ ತಾಲ್ಲೂಕಿನ ಮುನ್ನೂರು ಗ್ರಾಮದ ಕುತ್ತಾರು ಮದನಿ ನಗರದಲ್ಲಿ ಪಕ್ಕದ ಮನೆಯ ಗೋಡೆ, ಹೆಂಚಿನ ಮನೆಯ ಚಾವಣಿಯ ಮೇಲೆ ಕುಸಿದು ಇಬ್ಬರು ಮಕ್ಕಳು ಸೇರಿದಂತೆ ಒಂದೇ ಕುಟುಂಬದ ನಾಲ್ವರು ಮೃತಪಟ್ಟಿದ್ದಾರೆ.

ಮನೆಯಲ್ಲಿ ಮಲಗಿದ್ದ ಯಾಸಿರ್ (45), ಅವರ ಪತ್ನಿ ಮರಿಯಮ್ಮ(40) ಪುತ್ರಿಯರಾದ ರಿಯಾನ (14) ಮತ್ತು ರಿಫಾನ (16) ಮೃತರು. ಅಬೂಬಕರ್ ಎಂಬವರಿಗೆ ಸೇರಿದ ಮನೆಯ ಆವರಣ ಗೋಡೆ ಹಾಗೂ ಎರಡು ಅಡಿಕೆ ಮರಗಳು ತಗ್ಗು ಪ್ರದೇಶದಲ್ಲಿರುವ ಯಾಸಿರ್ ಅವರ ಮನೆ ಮೇಲೆ ಉರುಳಿ ಬಿದ್ದವು.

5ನೇ ಪುಟ ನೋಡಿ

### ಮಲೆನಾಡು, ಕರಾವಳಿಗಳಲ್ಲಿ ಭಾರಿ ವರ್ಷಧಾರೆ | ಉಕ್ಕಿ ಹರಿದ ಕಾವೇರಿ, ತುಂಗೆ

# ಅಬ್ಬರಿಸುತ್ತಿದೆ ಆರಿದ್ರಾ ಮಳೆ

■ ವಿಕ ಸುದ್ದಿಲೋಕ ಬೆಂಗಳೂರು

ರಾಜ್ಯದ ಕರಾವಳಿ ಮತ್ತು ಮಲೆನಾಡು ಭಾಗದಲ್ಲಿ ವ್ಯಾಪಕ ಮಳೆ ಆಗಿದ್ದು, ದಕ್ಷಿಣ, ಒಳನಾಡು, ಮಧ್ಯ ಕರ್ನಾಟಕದ ಅಲ್ಲಲ್ಲಿ ಸಾಧಾರಣ ಮಳೆ ಆಗಿದೆ. ಉತ್ತರ ಒಳನಾಡಿನಲ್ಲಿ ಮಳೆ ಇಲ್ಲವಾಗಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಳೆಯಿಂದಾಗಿ 20ಕ್ಕೂ ಹೆಚ್ಚು ಮನೆಗಳು ಕುಸಿದಿವೆ. ನಾಲ್ವರು ಸಾವು ಸಂಭವಿಸಿದೆ. ಕೊಡಗು ಜಿಲ್ಲೆಯ ಭಾಗಮಂಡಲದ ಸಂಗಮ ಪ್ರದೇಶ ಜಲಾವೃತಗೊಂಡಿದೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮಂಗಳವಾರ ರಾತ್ರಿಯಿಂದಲೇ ಆದ್ರಾ ಮಳೆ ಅಬ್ಬರ ಮುಂದುವರಿದಿದೆ. ಮುಂದಿನ ಎರಡು ದಿನಗಳಲ್ಲಿ ಮಳೆ ಮತ್ತಷ್ಟು ಬಿರುಸು ಪಡೆಯುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮಂಗಳವಾರ ನಗರ, ಗ್ರಾಮಾಂತರ, ಪುತ್ತೂರು, ಸುಳ್ಯ, ಬಂಟ್ವಾಳ, ಬೆಳ್ತಂಗಡಿ, ತಾಲೂಕುಗಳಲ್ಲಿ ಉತ್ತಮ ಮಳೆಯಾಗಿದೆ. ಕಟೀಲಿನಲ್ಲಿ ನಂದಿನಿ ನದಿ ತುಂಬಿ ಹರಿಯುತ್ತಿದೆ. ಬಂಟ್ವಾಳದ ಮಂಚಿಯಲ್ಲಿ 188 ಮಿ.ಮೀ. ಮಳೆಯಾಗಿದೆ. ನೇತ್ರಾವತಿ ನದಿಯಲ್ಲಿ ಮಳೆ ನೀರಿನ ಒತ್ತಡ ಹೆಚ್ಚಾಗುವ ಸಾಧ್ಯತೆ ಇರುವುದರಿಂದ ತುಂಬೆ ಡ್ಯಾಂನ 11 ಗೇಟ್‌ಗಳನ್ನೂ ತೆರೆಯಲಾಗಿದೆ.

**ಹದವಾದ ಮಳೆ:** ಶಿವಮೊಗ್ಗ ಜಿಲ್ಲೆಯ ಸಾಗರ, ತೀರ್ಥಹಳ್ಳಿ, ಹೊಸನಗರ, ಸೊರಬ ತಾಲೂಕು ಸೇರಿದಂತೆ ಹಲವು ಪ್ರದೇಶಗಳಲ್ಲಿ ಕಳೆದ ಎರಡು ದಿನಗಳಿಂದ ಹದವಾದ ಮಳೆಯಾಗುತ್ತಿದೆ. ತುಂಗಾ, ಮಾಲತಿ ನದಿಗಳಲ್ಲಿ ನೀರಿನ ಒಳ ಹರಿವು ಹೆಚ್ಚಿದೆ. ಚಿಕ್ಕಮಗಳೂರಿನಲ್ಲೂ ಭಾರಿ ಮಳೆ ಸುರಿದಿದೆ.

ಮಳೆಯ ರಭಸಕ್ಕೆ ಸರಕಾರಿ ಶಾಲಾ ಕಾಂಪೌಂಡ್ ಕುಸಿತಗೊಂಡ ಘಟನೆ ಹೊಸನಗರ ತಾಲೂಕಿನ ನಿಟ್ಟೂರಿನಲ್ಲಿ ನಡೆದಿದೆ. ಬುಧವಾರ ಬೆಳಗ್ಗೆಯ ಮಾಹಿತಿಯಂತೆ ಹುಲಿಕಲ್ 85 ಮಿ.ಮೀ., ಮಾಸ್ತಿಕಟ್ಟೆ 91 ಮಿ.ಮೀ. ಮಳೆಯಾಗಿದೆ. ದಾವಣಗೆರೆ ಜಿಲ್ಲೆಯಲ್ಲಿ ಸಾಧಾರಣ ಮಳೆಯಾಗಿದೆ ಭದ್ರಾ ಡ್ಯಾಂನಲ್ಲಿ ಕಳೆದ ವಾರ 700-800 ಕ್ಯೂಸೆಕ್ ಇದ್ದ ಒಳ ಹರಿವು, ಬುಧವಾರ ಇನ್ನಷ್ಟು ಏರಿಕೆಯಾಗಿದ್ದು 2,276 ಕ್ಯೂಸೆಕ್ ಇದೆ.

**ಕರಾವಳಿಯಲ್ಲಿ ಮಳೆ ಅವಾಂತರ:** ಉತ್ತರ ಕನ್ನಡ ಜಿಲ್ಲೆಯಲ್ಲಿ ಮಂಗಳವಾರದಿಂದ ಮಳೆ ಅಬ್ಬರ ಜೋರಾಗಿದ್ದು, ಕಾರವಾರ ತಾಲೂಕಿನಲ್ಲಿ ಅನೇಕ ರಸ್ತೆಗಳು ಜಲಾವೃತವಾಗಿದ್ದವು. ಭಟ್ಕಳ, ಅಂಕೋಲಾ, ಕುಮಟಾ, ಹೊನ್ನಾವರ, ಭಟ್ಕಳ ಭಾಗದಲ್ಲಿಯೂ ತಗ್ಗು ಪ್ರದೇಶಗಳಿಗೆ ನೀರು ನುಗ್ಗಿದೆ. ಶಿರಸಿ- ಸಿದ್ದಾಪುರ ರಸ್ತೆಯಲ್ಲಿಯೂ ನೀರು ನಿಂತು ಸಮಸ್ಯೆಯಾಗಿದೆ. ಭಟ್ಕಳ ತಾಲೂಕಿನಲ್ಲಿ ತಗ್ಗು ಪ್ರದೇಶಗಳಿಗೆ ಹೆಚ್ಚಿನ ನೀರು ಹರಿದು ಮನೆ, ದೇವಸ್ಥಾನ ಜಲಾವೃತಗೊಂಡಿದೆ. ತಾಲೂಕಿನ ಬೆಂಗ್ರೆ, ಶಿರಾಲಿ, ಶಾರದಾಹೊಳೆ ಭಾಗಗಳಲ್ಲಿ ನೂರಾರು ಎಕರೆ ಕೃಷಿ ಭೂಮಿಯಲ್ಲಿ ನೀರು ತುಂಬಿಕೊಂಡಿದೆ. ಗೋಕರ್ಣದ ಭೋಜನ ಶಾಲೆ ಚಾವಣಿ ಮೇಲೆ ಮರ ಬಿದ್ದು ಹಾನಿಯಾಗಿದೆ.

## ಕಾಂಪೌಂಡ್ ಕುಸಿದು ಒಂದೇ ಕುಟುಂಬದ ನಾಲ್ವರ ಸಾವು



ಕುಸಿದ ಮನೆಯ ಅವಶೇಷಗಳ ಅಡಿಯಿಂದ ಮೃತದೇಹಗಳನ್ನು ಹೊರತೆಗೆಯುತ್ತಿರುವುದು.

**ಮಂಗಳೂರು:** ಉಳ್ಳಾಲ ತಾಲೂಕಿನ ಮುನ್ನೂರು ಗ್ರಾಮದ ಇಳಿಜಾರು ಪ್ರದೇಶದಲ್ಲಿರುವ ದೇರಳಕಟ್ಟೆ ಮದನಿನಗರದಲ್ಲಿ ಬುಧವಾರ ಮುಂಜಾನೆ ಮನೆಯ ಕಾಂಪೌಂಡ್ ಪಕ್ಕದ ಮನೆ ಮೇಲೆ ಕುಸಿದು ಒಂದೇ ಕುಟುಂಬದ ನಾಲ್ವರು ಮಲಗಿದಲ್ಲೇ ಮೃತಪಟ್ಟಿದ್ದಾರೆ.

ಯಾಸಿರ್ (45), ಅವರ ಪತ್ನಿ ಮರಿಯಮ್ಮ (40), ಪುತ್ರಿಯರಾದ ಆಯಿಷತ್ ರಿಫಾನ (17) ಹಾಗೂ ಆಯಿಷತ್ ರಿಹಾನ (14) ಮೃತರು.

ಮದನಿನಗರದ ನಿವಾಸಿ ಯಾಸಿರ್ ಅವರ ಮನೆಯ ಪಕ್ಕ ಸ್ವಲ್ಪ ಎತ್ತರದ ಪ್ರದೇಶದಲ್ಲಿ ಅಬೂಬಕ್ಕರ್ ಮನೆಯಿದ್ದು, ಭಾರಿ ಮಳೆಗೆ ಬುಧವಾರ ನಸುಕಿನಲ್ಲಿ ಅಬೂಬಕರ್ ಅವರ ಮನೆಯ ಕಾಂಪೌಂಡ್ ಯಾಸಿರ್ ಅವರ ಮನೆಯ ಗೋಡೆ ಮೇಲೆ ಬಿತ್ತು. ಇದರ ಭಾರಕ್ಕೆ ಯಾಸಿರ್ ಮನೆ ಗೋಡೆ ಕುಸಿದು ಮನೆಯೊಳಗೆ ಮಲಗಿದ್ದ ನಾಲ್ವರು ಅವಶೇಷದಡಿಯಲ್ಲಿ ಹೂತುಹೋದರು.

ಬೆಳಗ್ಗೆ 6 ಗಂಟೆ ಸುಮಾರಿಗೆ ಘಟನೆ ಸ್ಥಳೀಯರು ಮೂರು ಮೃತದೇಹಗಳನ್ನು ಹೊರಗೆ ತೆಗೆದರು. ಬಳಿಕ ಅಗ್ನಿಶಾಮಕ ದಳ ಸಿಬ್ಬಂದಿ ಆಗಮಿಸಿ ಸುಮಾರು 2 ಗಂಟೆಗಳ ಕಾರ್ಯಾಚರಣೆ ನಡೆಸಿ ಮತ್ತೊಂದು ಮೃತದೇಹವನ್ನು ಹೊರತೆಗೆದರು.

ಬೂಬಕ್ಕರ್ ಅವರ ಮನೆಯ ಇನ್ನೊಂದು ಬದಿಯ ಮನೆ ಅಡಿಪಾಯದ ವರೆಗೂ ತಡೆಗೋಡೆ ಕುಸಿದಿದ್ದು, ಆ ಮನೆಯೂ ಕುಸಿತದ ಆತಂಕದಲ್ಲಿದೆ. ದುರಂತದಿಂದ ಮನೆಯ ಜಗಲಿ ಹಾಗೂ ಗೋಡೆಗಳು ಬಿರುಕು ಬಿಟ್ಟಿವೆ. ಆ ಮನೆಗೆ ಜನರು ತೆರಳದಂತೆ ತಡೆ ಹಾಕಲಾಗಿದೆ.

**ತಲಾ 5 ಲಕ್ಷ ರೂ. ಪರಿಹಾರ:** ತಡೆಗೋಡೆ ಕುಸಿತದಿಂದ ಮೃತಪಟ್ಟ ನಾಲ್ವರ ಕುಟುಂಬಕ್ಕೆ ತಲಾ 5 ಲಕ್ಷ ರೂ. ಪರಿಹಾರವನ್ನು ಜಿಲ್ಲಾಧಿಕಾರಿಗಳು ಘೋಷಣೆ ಮಾಡಿದ್ದಾರೆ ಎಂದು ವಿಧಾನಸಭೆ ಸ್ಪೀಕರ್, ಶಾಸಕ ಯು.ಟಿ.ಖಾದರ್ ತಿಳಿಸಿದ್ದಾರೆ.

## ಭಾಗಮಂಡಲ ಸಂಗಮ ಜಲಾವೃತ



ಕೊಡಗು ಜಿಲ್ಲೆಯ ಭಾಗಮಂಡಲದ ತ್ರಿವೇಣಿ ಸಂಗಮದ ಸ್ಥಳ ಜಲಾವೃತಗೊಂಡಿದೆ.

**ಮಡಿಕೇರಿ:** ಮಡಿಕೇರಿ, ಭಾಗಮಂಡಲ, ನಾಪೋಕ್ಲು, ಪೊನ್ನಂಪೇಟೆ, ಸೂರ್ಲಬ್ಬಿ, ಚೆಟ್ಟಳ್ಳಿ, ಮೂರ್ನಾಡು ಸೇರಿ ಜಿಲ್ಲೆಯ ಬಹುತೇಕ ಭಾಗಗಳಲ್ಲಿ ಆರಿದ್ರಾ ಮಳೆ ಆರ್ಭಟಿಸುತ್ತಿದೆ. ಜೀವನದಿ ಕಾವೇರಿಯಲ್ಲಿಯೂ ನೀರಿನ ಹರಿವು ಗಣನೀಯವಾಗಿ ಏರಿಕೆಯಾಗಿದೆ. ಕಾವೇರಿ ಪ್ರವಾಹಕ್ಕೆ ಮೂರ್ನಾಡು ಬಳಿಯ ಬಲಮುರಿ ಹಳೆಯ ಸೇತುವೆ ಮುಳುಗಡೆಯಾಗಿದೆ. ಹಾರಂಗಿ ಜಲಾಶಯಕ್ಕೆ 1,300 ಕ್ಯೂಸೆಕ್ ನೀರು ಹರಿದುಬರುತ್ತಿದೆ.

ಮರ ಉರುಳಿ ಬಿದ್ದ ಕಾರಣ ರಸ್ತೆ ಸಂಚಾರಕ್ಕೆ ಅಡ್ಡಿಯಾದ ಘಟನೆ ಜಿಲ್ಲೆಯ ಹಲವು ಭಾಗದಲ್ಲಿ ವರದಿಯಾಗಿದೆ. ಕೆಲವೆಡೆ ಸಣ್ಣ ಪ್ರಮಾಣದಲ್ಲಿ ಬರೆ ಕುಸಿತವೂ ಉಂಟಾಗಿದೆ. ಮಳೆಯಿಂದಾಗಿ ವಿರಾಜಪೇಟೆ ಹೋಬಳಿಯ ಕಂಡಂಗಾಲ ಗ್ರಾಮದಲ್ಲಿ ಮನೆಗೆ ಹಾನಿಯಾಗಿದೆ.

ಕಳೆದ 24 ಗಂಟೆಗಳಲ್ಲಿ ಅತ್ಯಧಿಕ ಮಳೆ ಭಾಗಮಂಡಲದಲ್ಲಿ ಬಿದ್ದಿದೆ. ಪರಿಣಾಮ ಕಾವೇರಿ ಉಕ್ಕಿ ಹರಿಯುತ್ತಿದ್ದು, ತ್ರಿವೇಣಿ ಸಂಗಮ ಭರ್ತಿಯಾಗಿದೆ. ಹೊಸದಾಗಿ ನಿರ್ಮಿಸಲಾಗಿರುವ ಉದ್ಯಾನ ಭಾಗಶಃ ಮುಳುಗಡೆಯಾಗಿದ್ದು, ಮಳೆ ಮುಂದುವರಿದರೆ ದೇವಾಲಯದ ಆವರಣದ ವರೆಗೆ ಪ್ರವಾಹದ ಸಾಧ್ಯತೆಯಿದೆ.

## ಕರಾವಳಿ ಜಿಲ್ಲೆಗಳಿಗೆ ರೆಡ್ ಅಲರ್ಟ್

**ಬೆಂಗಳೂರು:** ರಾಜ್ಯದ ಕರಾವಳಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡದಲ್ಲಿ ಭಾರಿ ಮಳೆ ಬೀಳುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಹವಾಮಾನ ಇಲಾಖೆ ಈ ಜಿಲ್ಲೆಗಳಿಗೆ ಗುರುವಾರ ರೆಡ್ ಅಲರ್ಟ್ ಘೋಷಿಸಿದೆ.

ಜೂ. 28ರಿಂದ 29ರವರೆಗೆ ಈ ಜಿಲ್ಲೆಗಳಲ್ಲಿ ಆರೆಂಜ್ ಅಲರ್ಟ್ ಇರಲಿದೆ. ಚಿಕ್ಕಮಗಳೂರು, ಕೊಡಗು, ಶಿವಮೊಗ್ಗದಲ್ಲಿ ಮುಂದಿನ ಎರಡು ದಿನ ಭಾರಿ ವರ್ಷಧಾರೆ ಬೀಳುವುದರಿಂದ ಆರೆಂಜ್ ಅಲರ್ಟ್ ಇರಲಿದೆ. ಬೆಳಗಾವಿ, ಧಾರವಾಡ, ಹಾವೇರಿ, ಹಾಸನದಲ್ಲಿ ಜೂ 27ರಿಂದ 28ರವರೆಗೆ, ಮೈಸೂರಿನಲ್ಲಿ ಜೂ. 27ರಂದು ಯೆಲ್ಲೋ ಅಲರ್ಟ್ ಇರಲಿದೆ. ಉತ್ತರ ಕರ್ನಾಟಕ, ದಕ್ಷಿಣ ಕರ್ನಾಟಕ ಬಹುತೇಕ ಜಿಲ್ಲೆಗಳಲ್ಲಿ ಮುಂದಿನ 4 ದಿನ ಗುಡುಗು ಮಿಂಚು ಸಹಿತ ವರ್ಷಧಾರೆಯಾಗಲಿದೆ.

ರಾಜ್ಯದ ಹಲವೆಡೆ ಬಿರುಸಾಗಿ ಮಳೆಯಾಗುತ್ತಿದ್ದು, ದಕ್ಷಿಣ ಕನ್ನಡದ ಮಂಗಳೂರು, ಕೊಡಗಿನ ಗೋಣಿಕೊಪ್ಪಲು, ಶಿವಮೊಗ್ಗದ ಆಗುಂಬೆ ಹಾಗೂ ಚಿಕ್ಕಮಗಳೂರಿನ ಮೂಡಿಗೆರೆಯಲ್ಲಿ ಬುಧವಾರ ಭಾರಿ ಮಳೆ ಸುರಿದಿದೆ.

## ಭಯ ಬೇಡ, ವರ್ಷಧಾರೆ ಸಮೃದ್ಧ ಎಂದ ಹವಾಮಾನ ಇಲಾಖೆ

# ರಾಜ್ಯದಲ್ಲಿ 33.06 ಲಕ್ಷ ಹೆಕ್ಟೇರ್‌ನಲ್ಲಿ ಬಿತ್ತನೆ

**ವಿಕ ಸುದ್ದಿಲೋಕ** ಬೆಂಗಳೂರು

ರಾಜ್ಯದಲ್ಲಿ ಈ ಬಾರಿ ಕೃಷಿ ಬಿತ್ತನೆಯಲ್ಲಿ ಉತ್ತಮ ಪ್ರಗತಿ ಕಂಡು ಬಂದಿದೆ. 82.48 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ ಹೊಂದಲಾಗಿದ್ದು, ಈಗಾಗಲೇ 33.06 ಲಕ್ಷ ಹೆಕ್ಟೇರ್‌ನಲ್ಲಿ ಬಿತ್ತನೆ ಪೂರ್ಣಗೊಂಡಿದ್ದು, ಶೇ.40ರಷ್ಟು ಗುರಿ ತಲುಪಲಾಗಿದೆ. ಆದರೆ, ಕೆಲವೆಡೆ ಮುಂಗಾರು ದುರ್ಬಲಗೊಂಡಿದ್ದು, ಬಿತ್ತನೆ ಮಾಡಿರುವ ರೈತರಲ್ಲಿ ಬೆಳೆ ಒಣಗುವ ಆತಂಕ ಎದುರಾಗಿದೆ.

ಈ ಮಧ್ಯೆ, ರಾಜ್ಯದಲ್ಲಿ ಕೆಲ ಜಿಲ್ಲೆಗಳಲ್ಲಿ ಮುಂಗಾರು ಪ್ರಬಲವಾಗಿದ್ದರೆ, ಕೆಲವು ಜಿಲ್ಲೆಗಳಲ್ಲಿ ದುರ್ಬಲವಾಗಿತ್ತು. ಹೀಗಾಗಿ, ಉತ್ತರ ಕನ್ನಡ, ಹಾವೇರಿ, ದಕ್ಷಿಣ ಕನ್ನಡ, ಉಡುಪಿ, ಕೊಡಗು, ಶಿವಮೊಗ್ಗ, ಚಿಕ್ಕಮಗಳೂರು ಜಿಲ್ಲೆಗಳಲ್ಲಿ ಪೂರ್ಣ ಪ್ರಮಾಣದ ಮಳೆಯಾಗದೆ ಈಗಾಗಲೇ ಬಿತ್ತನೆ ಮಾಡಿರುವ ಕೆಲವು ಬೆಳೆಗಳಿಗೆ ನೀರಿನ ಕೊರತೆ ಎದುರಾಗಿದ್ದು, ಬೆಳೆ ಬಾಡಲಿದೆ ಎಂಬ ಆತಂಕ ರೈತರದ್ದು. ಆದರೆ ಕೃಷಿ ಇಲಾಖೆ ಹೇಳುವಂತೆ ಈ ಬಾರಿ ವಾಡಿಕೆಗಿಂತ ಹೆಚ್ಚು ಬಿತ್ತನೆಯಾಗಿದೆ.

**ಶೇ.40ರಷ್ಟು ಬಿತ್ತನೆ ಪೂರ್ಣ:** ಬಿತ್ತನೆ ಪ್ರಮಾಣ ಕಳೆದ ವರ್ಷಕ್ಕಿಂತ ಹೆಚ್ಚಾಗಿದೆ. ಆದರೆ, ಮಳೆ ಕೊರತೆಯಿಂದ ಕೆಲವೆಡೆ ಬಿತ್ತಿದ ಬೆಳೆ ಒಣಗುತ್ತಿದೆ. ಕಳೆದ ಮುಂಗಾರಿನಲ್ಲಿ ಈ ವೇಳೆಗೆ ಶೇ.8.37ರಷ್ಟು ಬಿತ್ತನೆ ಮಾಡಲಾಗಿತ್ತು. ಈ ಬಾರಿ ಶೇ.40ರಷ್ಟು ಬಿತ್ತನೆಯಾಗಿದೆ. ರಾಗಿ ಬಿತ್ತನೆ ಮಾಡುವ ಜಿಲ್ಲೆಗಳಲ್ಲಿ ಮಾತ್ರ ಇನ್ನೂ ಕೆಲವೆಡೆ ಬಿತ್ತನೆ ಆರಂಭವಾಗಿಲ್ಲ.

ಇನ್ನು, ಬೆಂಗಳೂರು ಗ್ರಾಮಾಂತರ, ದಕ್ಷಿಣ ಕನ್ನಡ, ಕೊಡಗು ಜಿಲ್ಲೆಗಳಲ್ಲಿ ಈವರೆಗೆ ಶೂನ್ಯ ಬಿತ್ತನೆಯಾಗಿದೆ. ಕೋಲಾರದಲ್ಲಿ ಶೇ.1ರಷ್ಟು ಹಾಗೂ ಚಿಕ್ಕಬಳ್ಳಾಪುರದಲ್ಲಿ ಶೇ.2 ರಷ್ಟು ಮಾತ್ರ ಬಿತ್ತನೆಯಾಗಿದೆ.

**45 ತಾಲೂಕುಗಳಲ್ಲಿ ಮಳೆ ಕೊರತೆ:** ನೈಋತ್ಯ ಮುಂಗಾರು ಅವಧಿಯಲ್ಲಿ ಜೂನ್ 1 ರಿಂದ 23ರವರೆಗೆ ವಾಡಿಕೆ ಪ್ರಕಾರ, 137 ಮಿ.ಮೀ. ಮಳೆ ಆಗುತ್ತಿತ್ತು. ಆದರೆ, ಈ ಬಾರಿ 145 ಮಿ.ಮೀ. ಮಳೆಯಾಗಿದೆ. ಕೆಲವು ಜಿಲ್ಲೆಗಳಲ್ಲಿ ಮಾತ್ರ ಮಳೆ ಹೆಚ್ಚಾಗಿದೆ. ಮಲೆನಾಡು ಮತ್ತು ಕರಾವಳಿ ಜಿಲ್ಲೆಗಳಲ್ಲಿ ಕ್ರಮವಾಗಿ ವಾಡಿಕೆಗಿಂತ ಶೇ. 43 ಮತ್ತು 31ರಷ್ಟು ಮಳೆ ಕೊರತೆಯಾಗಿದೆ.

ರಾಜ್ಯದಲ್ಲಿ ವಾಡಿಕೆ ಪ್ರಕಾರ, ಜೂ.1ರಿಂದ 23ರವರೆಗೆ 14 ಜಿಲ್ಲೆಗಳ 101 ತಾಲೂಕುಗಳಲ್ಲಿ ಅತಿ ಹೆಚ್ಚು ಮಳೆಯಾದರೆ, 7 ಜಿಲ್ಲೆಗಳ 38 ತಾಲೂಕುಗಳಲ್ಲಿ ಹೆಚ್ಚು ಮಳೆಯಾಗಿದೆ. 3 ಜಿಲ್ಲೆ, 47 ತಾಲೂಕುಗಳಲ್ಲಿ ವಾಡಿಕೆಯಷ್ಟು ಮಳೆಯಾಗಿದೆ. 7 ಜಿಲ್ಲೆ 45 ತಾಲೂಕುಗಳಲ್ಲಿ ಮಳೆಯ ಕೊರತೆ ಉಂಟಾಗಿದೆ.

### ಮಳೆ ಕೊರತೆಯುಳ್ಳ ಜಿಲ್ಲೆಗಳಲ್ಲಿ ರೈತರ ಆತಂಕ



ಜೂನ್ ಮೊದಲ ವಾರದಲ್ಲಿ ಅತಿ ಹೆಚ್ಚು ಮಳೆಯಾಯಿತು. ಜೂ.10ರಿಂದ 20ರವರೆಗೆ ಮಳೆಯ ಪ್ರಮಾಣ ಕಡಿಮೆಯಾಯಿತು. ಜುಲೈ, ಆಗಸ್ಟ್ ಮಳೆಯ ಸಮೃದ್ಧ ಕಾಲಮಾನವಾಗಲಿದ್ದು, ವಾಡಿಕೆಗಿಂತ ಹೆಚ್ಚು ಮಳೆಯಾಗುವ ಸಾಧ್ಯತೆಯಿದೆ.

**- ಸಿ.ಎಸ್. ಪಾಟೀಲ್**
ನಿರ್ದೇಶಕರು, ಭಾರತೀಯ ಹವಾಮಾನ ಇಲಾಖೆ

ಈಗಾಗಲೇ ಶೇ.40ರಷ್ಟು ಬಿತ್ತನೆಯಾಗಿದೆ. ಬಾಗಲಕೋಟೆ, ಗದಗ, ಹಾವೇರಿ ಮತ್ತಿತರ ಜಿಲ್ಲೆಗಳಲ್ಲಿ ನಿರೀಕ್ಷೆಗೂ ಮೀರಿದ ಬಿತ್ತನೆಯಾಗಿದೆ. ಎಲ್ಲಿಯೂ ಮಳೆಯ ಕೊರತೆ ಆಗಿಲ್ಲ. ಅಲ್ಲದೆ, ಕೆಲವು ಜಿಲ್ಲೆಗಳಲ್ಲಿ ಕಪ್ಪು ಮಣ್ಣಿದ್ದರೆ ಅಂತಹ ಭೂಮಿಯು ಹೆಚ್ಚು ತೇವಾಂಶದಿಂದ ಕೂಡಿರುವುದರಿಂದ ನಿರಂತರ ಮಳೆ ಅಗತ್ಯವಿಲ್ಲ. ಹೀಗಾಗಿ, ಈ ಬಾರಿ ರೈತರು ಆತಂಕಪಡುವ ಅಗತ್ಯವಿಲ್ಲ.

**-ಡಾ. ಜಿ.ಟಿ. ಪುತ್ರ**
ನಿರ್ದೇಶಕರು, ಕೃಷಿ ಇಲಾಖೆ

# ಮಳೆಗೆ ನಾಲ್ವರು ಸಾವು

**ಮಂಗಳೂರು/ಮಡಿಕೇರಿ:** ಕರಾವಳಿ ಜಿಲ್ಲೆಗಳು ಮತ್ತು ಮಡಿಕೇರಿಯಲ್ಲಿ ಧಾರಾಕಾರ ಮಳೆ ಮುಂದುವರಿದಿದ್ದು, ಪ್ರವಾಹ ಪರಿಸ್ಥಿತಿ ಮನೆ ಮಾಡಿದೆ. ಮಂಗಳೂರಿನ ಉಳ್ಳಾಲ ತಾಲೂಕಿನ ಮುನ್ನೂರು ಗ್ರಾಮದಲ್ಲಿ ಬುಧವಾರ ಮುಂಜಾನೆ ಗೋಡೆ ಕುಸಿದು ಒಂದೇ ಕುಟುಂಬದ ನಾಲ್ವರು ಮೃತಪಟ್ಟಿದ್ದಾರೆ.

ಕರಾವಳಿಯಲ್ಲಿ ಮುಂದಿನ 2 ದಿನಗಳಲ್ಲಿ ಮಳೆ ಮತ್ತಷ್ಟು ಬಿರುಸು ಪಡೆಯುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ. ಇತ್ತ ಕೊಡಗು ಜಿಲ್ಲೆಗೂ ಜೂ.28ರವರೆಗೆ ಆರೆಂಜ್ ಅಲರ್ಟ್ ಘೋಷಿಸಲಾಗಿದೆ. ಭಾಗಮಂಡಲದ ತ್ರಿವೇಣಿ ಸಂಗಮ ಬಹುತೇಕ ಭರ್ತಿಯಾಗಿದೆ.

**2 ಜಿಲ್ಲೆಗಳಲ್ಲಿ ರಜೆ:** ಈ ಮಧ್ಯೆ ಭಾರಿ ಮಳೆ ಮುನ್ಸೂಚನೆ ಹಿನ್ನೆಲೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶಾಲೆಗಳಿಗೆ ಜೂ.27ರಂದು ರಜೆ ಘೋಷಿಸಲಾಗಿದೆ. ಕೊಡಗು ಜಿಲ್ಲೆಯ ಮಡಿಕೇರಿ, ವಿರಾಜಪೇಟೆ, ಪೊನ್ನಂಪೇಟೆ ತಾಲೂಕು ವ್ಯಾಪ್ತಿಯ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಿಗೆ ರಜೆ ಘೋಷಿಸಲಾಗಿದೆ.

# ಕರಾವಳಿ, ಮಲೆನಾಡಿನಲ್ಲಿ ಭಾರೀ ಮಳೆ: 4 ಜನ ಬಲಿ

ಮೊದಲ ಪುಟದಿಂದ

ಹಿರಿಯ ಮಗಳು ಬಕ್ರೀದ್‌ಗೆಂದು ತಾಯಿ ಮನೆಗೆ ಬಂದವರು ಹಿಂದಿನ ದಿನವಷ್ಟೇ ಕೇರಳದ ಗಂಡನ ಮನೆಗೆ ತೆರಳಿದ್ದರಿಂದ ಬದುಕುಳಿದಿದ್ದಾರೆ.

ಮಂಗಳವಾರ ರಾತ್ರಿಯಿಡೀ ಭಾರಿ ಮಳೆ ಸುರಿದ ಪರಿಣಾಮ ಅಬೂಬಕ್ಕರ್ ಎಂಬವರಿಗೆ ಸೇರಿದ ಮನೆಯ ಕಾಂಪೌಂಡ್ ಗೋಡೆ ಹಾಗೂ ಎರಡು ಅಡಕೆ ಮರಗಳು ಯಾಸಿರ್ ಅವರ ಮನೆ ಮೇಲೆ ಉರುಳಿಬಿದ್ದಿದ್ದು, ಅದರಡಿ ಸಿಲುಕಿ ನಾಲ್ವರೂ ಮೃತಪಟ್ಟಿದ್ದಾರೆ. ಭಾರೀ ಶಬ್ದ ಕೇಳಿ ಓಡಿ ಬಂದ ಸ್ಥಳೀಯರು ಮತ್ತು ಅಗ್ನಿಶಾಮಕ ಸಿಬ್ಬಂದಿ ಮೂರು ಗಂಟೆಗಳ ನಿರಂತರ ಕಾರ್ಯಾಚರಣೆ ಬಳಿಕ ನಾಲ್ಕು ಮೃತದೇಹಗಳನ್ನು ಹೊರತೆಗೆದಿದ್ದಾರೆ.

ಬೆಳಗ್ಗೆ 6 ಗಂಟೆಗೆ ಭಾರೀ ಶಬ್ದ ಕೇಳಿ ಹೊರಗೆ ಬಂದು ನೋಡಿದೆವು. ಆಗ ಮನೆ ಮೇಲೆ ಗೋಡೆ ಕುಸಿದು ಬಿದ್ದಿತ್ತು. ತಕ್ಷಣ ಸ್ಥಳೀಯರೆಲ್ಲ ಸೇರಿ ಮನೆ ಬಾಗಿಲು ಒಡೆದೆವು. ಒಳ ಹೋದಾಗ ನಮಗೆ ಕರೆಂಟ್ ಶಾಕ್ ಹೊಡೆಯಿತು. ಬಳಿಕ ನಮ್ಮಲ್ಲೇ ಇದ್ದ ಎಲೆಕ್ಟ್ರಿಶಿಯನ್ ಒಬ್ಬರು ಲೈನ್ ಆಫ್ ಮಾಡಿದ್ರು. ಆ ಬಳಿಕ ನಾವು ಕಾರ್ಯಾಚರಣೆ ನಡೆಸಲು ಶುರು ಮಾಡಿದೆವು. ಮೂವರು ಹಾಲ್‌ನಲ್ಲಿ ಮಲಗಿದ್ದರು. ಒಬ್ಬಳು ಕೋಣೆಯಲ್ಲಿದ್ದಳು. ನಾವು ಮೊದಲು ಮೂವರನ್ನು ಮಣ್ಣಿನ ಅಡಿಯಿಂದ ತೆಗೆದಾಗ ಬಾಲಕಿಯ ಕೈ ಅಲುಗಾಡುತ್ತಿತ್ತು. ಆದರೆ ರಸ್ತೆ ಕಿರಿದಾಗಿ ಆಂಬ್ಯುಲೆನ್ಸ್ ಬರಲಾಗದೆ ಆಸ್ಪತ್ರೆಗೆ ಸಾಗಿಸುವ ದಾರಿ ಮಧ್ಯೆ ಮೃತಪಟ್ಟಿದ್ದಾಳೆ ಎಂದು ರಕ್ಷಣಾ ಕಾರ್ಯದಲ್ಲಿ ಪಾಲ್ಗೊಂಡಿದ್ದ ಸ್ಥಳೀಯರು ತಿಳಿಸಿದ್ದಾರೆ.

ನದಿ ನೀರಿಮಟ್ಟ ಏರಿಕೆ: ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಕೊಡಗು ಮತ್ತು ಚಿಕ್ಕಮಗಳೂರು ಜಿಲ್ಲೆಯಲ್ಲಿ ಕಳೆದ ಎರಡ್ಮೂರು ದಿನಗಳಿಂದ ಉತ್ತಮ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಹಲವು ಮನೆಗಳಿಗೆ ಹಾನಿಯಾಗಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ.

ಕೊಡಗಿನಲ್ಲಿ ಕಾವೇರಿ ನದಿ ನೀರಿನ ಪ್ರಮಾಣ ಏರಿಕೆಯಾಗಿದ್ದು, ಭಾಗಮಂಡಲದ ತ್ರಿವೇಣಿ ಸಂಗಮ ಬಹುತೇಕ ಭರ್ತಿಯಾಗುವ ಹಂತ ತಲುಪಿದೆ. ಮರ ಬಿದ್ದು ಹಲವೆಡೆ ಸಂಚಾರ ಅಸ್ತವ್ಯಸ್ತಗೊಂಡಿದೆ. ಚಿಕ್ಕಮಗಳೂರಿನ ಶೃಂಗೇರಿಯಲ್ಲಿ ತುಂಗಾ ನದಿ ನೀರಿನ ಮಟ್ಟ ಏರಿಕೆಯಾಗಿದೆ. ಕಳಸ-ಮಂಗಳೂರು ರಾಜ್ಯ ಹೆದ್ದಾರಿಯ ಕುದುರೆಮುಖ ಸಮೀಪದ ನೆಲ್ಲಿಬೀಡು ಗ್ರಾಮದ ಬಳಿ ಮರವೊಂದು ಬಿದ್ದಿದೆ.

nada Prabha • Daily • Thursday • 27.06.2024 • Volume 58 • Issue 178 • Pages 16 • Price ₹7 Bengaluru



ಇಂದಿನ ಸ್ಪೆಷಲ್! ಪುಟದಲ್ಲಿಂದು

## ಆಯುಷ್ಮಾನ್ ಖುರಾನ ಚಿತ್ರಕ್ಕೆ ರಶ್ಮಿಕಾ ನಾಯಕಿ

ಕನ್ನಡದ ಬೆಡಗಿ ರಶ್ಮಿಕಾ ಮಂದಣ್ಣ ಬಾಲಿವುಡ್‌ನ 'ವ್ಯಾಂಪೈರ್ಸ್ ಆಫ್ ವಿಜಯನಗರ' ಹಾರರ್ ಚಿತ್ರಕ್ಕೆ ನಾಯಕಿಯಾಗಿ ಆಯ್ಕೆ. ಚಿತ್ರದಲ್ಲಿ ಆಯುಷ್ಮಾನ್ ಖುರಾನ ನಾಯಕ.

16

# ಕರಾವಳಿ, ಮಲೆನಾಡಿನಲ್ಲಿ ಭಾರೀ ಮಳೆ: 4 ಜನ ಬಲಿ

## ಗೋಡೆ ಕುಸಿದು ಸಾವು | ದ.ಕ., ಕೊಡಗಲ್ಲಿ ಶಾಲೆಗೆ ರಜೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಹಲವು ದಿನಗಳ ಬಳಿಕ ರಾಜ್ಯದ ಕರಾವಳಿ ಮತ್ತು ಮಲೆನಾಡು ಜಿಲ್ಲೆಗಳಲ್ಲಿ ಮತ್ತೆ ಮುಂಗಾರು ಮಳೆ ಆರ್ಭಟಿಸಿದ್ದು, ಭಾರೀ ಗಾಳಿಗೆ ಹಲವೆಡೆ ಮರ ಮತ್ತು ವಿದ್ಯುತ್ ಕಂಬ ಉರುಳಿಬಿದ್ದು, 30ಕ್ಕೂ ಹೆಚ್ಚು ಮನೆಗಳಿಗೆ ಹಾನಿಯಾಗಿದೆ. ಮಂಗಳೂರಲ್ಲಿ ಮನೆಯೊಂದರ ಮೇಲೆ ಕಾಂಪೌಂಡ್ ಕುಸಿದು ಒಂದೇ ಕುಟುಂಬದ ನಾಲ್ವರು ಅವಶೇಷಗಳಡಿ ಸಿಲುಕಿ ಮೃತಪಟ್ಟಿದ್ದಾರೆ.

ಇನ್ನು ಗುರುವಾರವೂ ಭಾರೀ ಮಳೆ ನಿರೀಕ್ಷೆಯಿದ್ದು, ಮುನ್ನೆಚ್ಚರಿಕಾ ಕ್ರಮವಾಗಿ ಕೊಡಗಿನ ವಿರಾಜಪೇಟೆ, ಪೊನ್ನಂಪೇಟೆ ತಾಲೂಕು ಹಾಗೂ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಂಗನವಾಡಿ ಮತ್ತು ಸರ್ಕಾರಿ ಶಾಲೆಗಳಿಗೆ ರಜೆ ಘೋಷಿಸಲಾಗಿದೆ. ಭಾರೀ ಗಾಳಿ ಮಳೆಯಿಂದಾಗಿ ಮೀನುಗಾರರಿಗೂ ಕಡಲಿಗಿಳಿಯದಂತೆ ಜಿಲ್ಲಾಡಳಿತಗಳು ಸೂಚಿಸಿದೆ.



**ಇಂದೂ ಕರಾವಳಿ ಜಿಲ್ಲೆಗಳಿಗೆ ಮಳೆಯ ರೆಡ್ ಅಲರ್ಟ್**

**ಮಲಗಿದ್ದಲ್ಲೇ ಸಮಾಧಿಯಾದ್ರು:** ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಳೆದೆರಡು ದಿನದಿಂದ ಭಾರಿ ಮಳೆಯಾಗುತ್ತಿದ್ದು ಉಳ್ಳಾಲ ತಾಲೂಕಿನ ಮುನ್ನೂರು ಗ್ರಾಮದ ಮದನಿನಗರದಲ್ಲಿ ಬುಧವಾರ ಮುಂಜಾನೆ ಕಾಂಪೌಂಡ್ ಗೋಡೆ ಮನೆ ಮೇಲೆ ಬಿದ್ದು ಒಂದೇ ಕುಟುಂಬದ ನಾಲ್ವರು ಮಲಗಿದ್ದಲ್ಲೇ ಸಜೀವ ಸಮಾಧಿಯಾದರು. ಯಾಸಿರ್ (45), ಅವರ ಪತ್ನಿ ಮರಿಯಮ್ಮ (40) ಮಕ್ಕಳಾದ ರಿಹಾನ (11) ಮತ್ತು ರಿಫಾನ (17) ಮೃತರು.

↘ 14

# ಮೂರು ಜಿಲ್ಲೆಗಳಲ್ಲಿ ಉತ್ತಮ ಮಳೆ

ಪ್ರಜಾವಾಣಿ ವಾರ್ತೆ

**ತುಮಕೂರು/ಕೊಡಗು:** ರಾಜ್ಯದಲ್ಲಿ ಭಾನುವಾರ ತುಮಕೂರು, ಕೊಡಗು ಹಾಗೂ ಕರಾವಳಿಯ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಉತ್ತಮ ಮಳೆಯಾಗಿದೆ.

ತುಮಕೂರು ನಗರ ಸೇರಿದಂತೆ ಜಿಲ್ಲೆಯ ವಿವಿಧ ಕಡೆ ಮಳೆ ಸುರಿಯಿತು. ನಗರದಲ್ಲಿ ಸಂಜೆ ಸುಮಾರು ಮೂರು ತಾಸು ಧಾರಾಕಾರವಾಗಿ ಸುರಿಯಿತು. ಅಂತರಸನಹಳ್ಳಿ, ಕುಣಿಗಲ್ ಮತ್ತು ಶೆಟ್ಟಿಹಳ್ಳಿ ಸೇತುವೆ ಬಳಿ ನೀರು ನಿಂತು ರಸ್ತೆ ದಾಟಲು ವಾಹನ ಸವಾರರು ಕಷ್ಟಪಟ್ಟರು.

ಲಿಂಗಾಪುರ ಗ್ರಾಮದ ಬಳಿ ರಾಷ್ಟ್ರೀಯ ಹೆದ್ದಾರಿ 48ರಲ್ಲಿ ಮೇಲ್ಸೇತುವೆ ಕಾಮಗಾರಿ ನಡೆಯುತ್ತಿರುವ ಕಾರಣ ವಾಹನಗಳು ಮಂದಗತಿಯಲ್ಲಿ ಸಾಗಿದ್ದು, ದಟ್ಟಣೆ ಉಂಟಾಗಿತ್ತು.

ತುಮಕೂರು ಗ್ರಾಮಾಂತರ, ಕೋರ ಠಾಣೆಯ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ವಾಹನಗಳ ಸುಗಮ ಸಂಚಾರಕ್ಕೆ ಅನುವು ಮಾಡಿಕೊಟ್ಟರು.



ಮಂಗಳೂರಿನಲ್ಲಿ ಭಾನುವಾರ ಸಂಜೆ ಜೋರು ಮಳೆಯಾಗಿದ್ದು ನೀರು ತುಂಬಿದ ರಸ್ತೆಯಲ್ಲಿ ವಾಹನ ಸವಾರರು ಪ್ರಯಾಸಪಟ್ಟು ಸಾಗಿದರು

**ಮಡಿಕೇರಿ ವರದಿ:** ಕೊಡಗು ಜಿಲ್ಲೆಯಲ್ಲಿ ಭಾನುವಾರ ಮುಂಗಾರು ಮಳೆ ಕೊಂಚ ಬಿರುಸು ಪಡೆಯಿತು. ನಗರದಲ್ಲಿ ಬೆಳಿಗ್ಗೆ ಜಿಟಿಜಿಟಿಯಾಗಿ, ಸಂಜೆ ಜೋರಾಗಿ ಸುರಿಯಿತು. ನಾಪೋಕ್ಲು ಭಾಗದಲ್ಲಿ ಬಿರುಸಾಗಿ, ಸುಂಟಿಕೊಪ್ಪ, ಸಿದ್ದಾಪುರ, ವಿರಾಜಪೇಟೆಯಲ್ಲಿ ಸಾಧಾರಣವಾಗಿತ್ತು.

ಮೈಸೂರು ನಗರದಲ್ಲಿ ಮಧ್ಯಾಹ್ನ, ಸಂಜೆ, ರಾತ್ರಿ ಬಿಟ್ಟುಬಿಟ್ಟು ಸಾಧಾರಣ ಮಳೆಯಾಯಿತು.

**ಕಲಬುರಗಿ ವರದಿ:** ಕಲಬುರಗಿ ಹಾಗೂ ಬೀದರ್ ಜಿಲ್ಲೆಗಳಲ್ಲಿ ಭಾನುವಾರ ಸಂಜೆ ಕೆಲ ಹೊತ್ತು ಮಳೆ ಸುರಿಯಿತು.

ಬೀದರ್ ನಗರ ಆಸುಪಾಸಿನಲ್ಲಿ ಅರ್ಧ ಗಂಟೆಗೂ ಹೆಚ್ಚು ಕಾಲ ಬಿರುಸಿನ ಮಳೆಯಾಗಿದೆ. ಕಲಬುರಗಿ ನಗರದಲ್ಲೂ ಕೆಲಹೊತ್ತು ಮಳೆಯಾಯಿತು.

**ದಕ್ಷಿಣ ಕನ್ನಡದಲ್ಲಿ ಧಾರಾಕಾರ ಮಳೆ**

**ಮಂಗಳೂರು ವರದಿ:** ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ಭಾನುವಾರ ಧಾರಾಕಾರವಾಗಿ ಮಳೆಯಾಗಿದೆ. ಶನಿವಾರ ರಾತ್ರಿಯಿಂದ ಭಾನುವಾರ ಬೆಳಿಗ್ಗೆ 8ಗಂಟೆವರೆಗೆ ಬಿಟ್ಟು ಬಿಟ್ಟು ಮಳೆ ಸುರಿಯಿತು. ಮಧ್ಯಾಹ್ನದ ಬಳಿಕ ಮತ್ತೆ ಮಳೆ ತೀವ್ರಗೊಂಡಿತು.

ಜಿಲ್ಲೆಯಲ್ಲಿ ಭಾನುವಾರ ಬೆಳಿಗ್ಗೆ 8.30ರವರೆಗಿನ 24 ಗಂಟೆಗಳಲ್ಲಿ ಚೆನ್ನೈತ್ತೋಡಿಯಲ್ಲಿ 6.65 ಸೆಂ.ಮೀ, ರಾಯಿಯಲ್ಲಿ 6.6, ಬಡಗನ್ನೂರಿನಲ್ಲಿ 5.5, ಕುಕ್ಕಿಪಾಡಿಯಲ್ಲಿ 5.2, ಇರಾ ಮತ್ತು ಮೇರಮಜಲುಗಳಲ್ಲಿ ತಲಾ 5.1, ಮಳವೂರಿನಲ್ಲಿ 4.9, ಬೋಳಿಯಾರ್‌ನಲ್ಲಿ 4.75, ಪುದು ಮತ್ತು ನೀರುಮಾರ್ಗದಲ್ಲಿ ತಲಾ 4.4 ಸೆಂ.ಮೀ ಮಳೆ ಸುರಿದಿರುವುದು ದಾಖಲಾಗಿದೆ.

# 16 ಜಿಲ್ಲೆಗಳಲ್ಲಿ ಭಾರಿ ಮಳೆ ಸಾಧ್ಯತೆ

ಪ್ರಜಾವಾಣಿ ವಾರ್ತೆ

---

ಬೆಂಗಳೂರು: ಕರಾವಳಿ ಮತ್ತು ದಕ್ಷಿಣ ಒಳನಾಡಿನ ಹಲವೆಡೆ ಸೋಮವಾರವೂ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ತಿಳಿಸಿರುವ ಹವಾಮಾನ ಇಲಾಖೆಯು, 10 ಜಿಲ್ಲೆಗಳಿಗೆ 'ಆರೆಂಜ್ ಅಲರ್ಟ್' ಹಾಗೂ ಆರು ಜಿಲ್ಲೆಗಳಿಗೆ 'ಯೆಲ್ಲೊ ಅಲರ್ಟ್' ಘೋಷಿಸಿದೆ.

ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ, ಬೆಳಗಾವಿ, ಧಾರವಾಡ, ಹಾವೇರಿ, ಶಿವಮೊಗ್ಗ, ಚಿಕ್ಕಮಗಳೂರು, ಹಾಸನ ಹಾಗೂ ಕೊಡಗು ಜಿಲ್ಲೆಗಳಿಗೆ 'ಆರೆಂಜ್ ಅಲರ್ಟ್' ಘೋಷಿಸಲಾಗಿದೆ. ಈ ಜಿಲ್ಲೆಗಳಲ್ಲಿ ಗುಡುಗು ಸಹಿತ ಧಾರಾಕಾರ ಮಳೆಯಾಗುವ ಸಾಧ್ಯತೆಯಿದೆ.

ಬಾಗಲಕೋಟೆ, ಗದಗ, ದಾವಣಗೆರೆ, ಮೈಸೂರು, ಮಂಡ್ಯ ಹಾಗೂ ಚಾಮರಾಜನಗರ ಜಿಲ್ಲೆಗಳಿಗೆ 'ಯೆಲ್ಲೊ ಅಲರ್ಟ್' ಘೋಷಿಸಲಾಗಿದೆ. ಕರಾವಳಿಯ ಉದ್ದಕ್ಕೂ ತೀವ್ರ ಬಿರುಗಾಳಿಯ ಸಾಧ್ಯತೆಯಿದೆ. ಗಂಟೆಗೆ 35 ಕಿ.ಮೀ.ನಿಂದ 55 ಕಿ.ಮೀ. ವೇಗದಲ್ಲಿ ಗಾಳಿ ಬೀಸುವ ಸಂಭವವಿದೆ. ಮೀನುಗಾರರು ಎಚ್ಚರ ವಹಿಸಬೇಕು. ಸಮುದ್ರದಲ್ಲಿ ಕಾರ್ಯಾಚರಣೆ ಹಾಗೂ ಸಮುದ್ರದ ದಡದಲ್ಲಿ ಮನರಂಜನಾ ಚಟುವಟಿಕೆಗಳನ್ನು ನಡೆಸುವಾಗ ಜಾಗರೂಕವಾಗಿರಬೇಕು ಎಂದು ಇಲಾಖೆ ಹೇಳಿದೆ.

ಮಂಗಳವಾರವೂ ರಾಜ್ಯದ 14 ಜಿಲ್ಲೆಗಳಲ್ಲಿ ತೀವ್ರ ಮಳೆಯಾಗುವ ಸಾಧ್ಯತೆಯಿದ್ದು, ಏಳು ಜಿಲ್ಲೆಗಳಿಗೆ 'ಆರೆಂಜ್ ಅಲರ್ಟ್' ಹಾಗೂ ಏಳು ಜಿಲ್ಲೆಗಳಿಗೆ 'ಯೆಲ್ಲೊ ಅಲರ್ಟ್' ಘೋಷಿಸಿರುವುದಾಗಿ ಹವಾಮಾನ ಇಲಾಖೆ ತಿಳಿಸಿದೆ.

ವಿಜಯ ಕರ್ನಾಟಕ
ಶನಿವಾರ,1 ಜೂನ್ 2024
ನಮ್ಮ ಬೆಂಗಳ
twitter.com/vijaykarnataka facebook.com/vijaykarnataka

ದಶಕದಲ್ಲಿ ಬೆಂಗಳೂರಿನ ತಾಪಮಾನ 3 ಡಿ.ಸೆ.ನಷ್ಟು ಅಧಿಕ । ಅರಣ್ಯ ನಾಶ, ಕಾಂಕ್ರೀಟೀಕರಣದಿಂದ ಹೆಚ್ಚಿದ ತಾಪಮಾನ

# ಬೆಂಗಳೂರು ಈಗ ಬಿಸಿಲೂರು

■ ಮಹಾಬಲೇಶ್ವರ ಕಲ್ಕಣಿ ಬೆಂಗಳೂರು
mahabaleshwar.kalkani@timesgroup.com

ಒಂದು ಕಾಲದಲ್ಲಿ ಉದ್ಯಾನ ನಗರಿ ಎಂದು ಖ್ಯಾತಿ ಪಡೆದಿದ್ದ ರಾಜಧಾನಿ ಬೆಂಗಳೂರು ಈಗ ಹೀಟ್ ಸಿಟಿಯಾಗಿ ಬದಲಾಗುತ್ತಿದೆ. ರಾಜಧಾನಿಯಲ್ಲಿ ವರ್ಷದಿಂದ ವರ್ಷಕ್ಕೆ ಬಿಸಿಲಿನ ತಾಪಮಾನ ಏರಿಕೆಯಾಗುತ್ತಿದೆ. ಕಳೆದ ಒಂದು ದಶಕದಲ್ಲಿ ಬೆಂಗಳೂರಿನ ತಾಪಮಾನ 3 ಡಿ.ಸೆ. ಅಧಿಕವಾಗಿದೆ.

**6 ಮೆಟ್ರೊ ನಗರಗಳಲ್ಲಿ ಸಿಎಸ್‌ಇ ಅಧ್ಯಯನ**

ವಿಜ್ಞಾನ ಮತ್ತು ಪರಿಸರ ಕೇಂದ್ರ (ಸಿಎಸ್‌ಇ) ಆರು ಮೆಟ್ರೊ ನಗರಗಳಾದ ಬೆಂಗಳೂರು, ಚೆನ್ನೈ, ಕೋಲ್ಕೊತಾ, ಮುಂಬೈ, ದಿಲ್ಲಿ, ಹೈದರಾಬಾದ್‌ನ ಬಿಸಿಗಾಳಿ ಪರಿಸ್ಥಿತಿಗಳ ಅಧ್ಯಯನ ನಡೆಸಿದೆ. ಎಲ್ಲಾ ಹವಾಮಾನ ವಲಯಗಳಲ್ಲಿ ಹೆಚ್ಚುತ್ತಿರುವ ಸಾಪೇಕ್ಷ ಆರ್ದ್ರತೆ (ಗಾಳಿಯ ಉಷ್ಣತೆ ಮತ್ತು ಸಾಪೇಕ್ಷ ಆರ್ದ್ರತೆಯ ಸಂಯೋಜನೆ) ಪ್ರತಿ ನಗರದಲ್ಲಿ ಶಾಖದ ಒತ್ತಡವನ್ನು ಹದಗೆಡಿಸಿದೆ. ಹಗಲಿನಲ್ಲಿನ ಬಿಸಿಲಿನ ತಾಪಮಾನ ಹೆಚ್ಚಳ ರಾತ್ರಿವರೆಗೂ ಮುಂದುವರಿದಿದ್ದು, ರಾತ್ರಿ ವೇಳೆ ಕೂಡ ತಾಪಮಾನ ಸಾಮಾನ್ಯಕ್ಕಿಂತ ಹೆಚ್ಚಾಗಿರುತ್ತದೆ ಎಂದು ಅಧ್ಯಯನ ವರದಿ ತಿಳಿಸಿದೆ.

ಈ ಎಲ್ಲಾ ನಗರಗಳಲ್ಲಿ ಅರಣ್ಯ ನಾಶ, ಜಲ ಮೂಲಗಳ ಒತ್ತುವರಿ, ಕಾಂಕ್ರೀಟೀಕರಣ, ಕಟ್ಟಡಗಳ ನಿರ್ಮಾಣ ಗಮನಾರ್ಹ ಏರಿಕೆಯಾಗಿದೆ. ಇದು ಶಾಖ ಹೆಚ್ಚಳಕ್ಕೆ ಕಾರಣವಾಗಿದೆ. ಇದರಿಂದ ತಾಪಮಾನ ಸುಧಾರಣೆ, ಸಾರ್ವಜನಿಕ ಆರೋಗ್ಯ ರಕ್ಷಿಸಲು ಶಾಖ ನಿರ್ವಹಣಾ ಕ್ರಿಯಾ ಯೋಜನೆಯ ತುರ್ತು ಅಗತ್ಯವಿದೆ ಎಂದು ಸಿಎಸ್‌ಇ ಹೇಳಿದೆ.



## ಅಧ್ಯಯನದಲ್ಲಿ ಉಲ್ಲೇಖಿಸಿದ ಪ್ರಮುಖ ಅಂಶ

- ಪೂರ್ವ ಮುಂಗಾರು ಸಮಯದಲ್ಲಿ ಸರಾಸರಿ ಶಾಖ ಸೂಚ್ಯಂಕವು ಮಾನ್ಸೂನ್‌ಗಿಂತ 3 ಡಿ.ಸೆ.ಹೆಚ್ಚಿರುತ್ತದೆ.
- ಹಗಲು ಮತ್ತು ರಾತ್ರಿ ನಡುವಿನ ಭೂ ಮೇಲ್ಮೈ ತಾಪಮಾನದ ದೈನಂದಿನ ತಂಪಾಗುವಿಕೆಯು ಶೇ. 15 ರಷ್ಟು ಕಡಿಮೆಯಾಗಿದೆ.
- ಬಿಲ್ಟ್-ಅಪ್ ಪ್ರದೇಶದ ಹೆಚ್ಚಳಕ್ಕೂ ನಗರ ಶಾಖದ ಒತ್ತಡದ ನಡುವೆ ನೇರ ಸಂಬಂಧವಿದೆ. 2003ರಲ್ಲಿ ಶೇ. 37.5ರಷ್ಟಿದ್ದ ಬಿಲ್ಟ್ ಅಪ್ ಪ್ರದೇಶ 2023ರ ವೇಳೆಗೆ ಶೇ 71.5ಕ್ಕೇರಿದೆ. ಹಸಿರು ಹೊದಿಕೆಯು 2003ರಲ್ಲಿ ಶೇ 18.8ರಷ್ಟಿದ್ದರೆ, 2023ಕ್ಕೆ 26.4ರಷ್ಟು ಹೆಚ್ಚಳವಾಗಿದೆ.

## ಶಾಖ ತಡೆಗೆ ಏನು ಮಾಡಬೇಕು?

- ಎಲ್ಲಾ ಶಾಖ ಉತ್ಪಾದಕಗಳ ನಿಯಂತ್ರಣ: ಸಿಮೆಂಟ್ ರಸ್ತೆ, ಕಟ್ಟಡ, ವಾಹನಗಳು, ಕೈಗಾರಿಕೆಗಳು ಮತ್ತು ಹವಾನಿಯಂತ್ರಿತ (ಎಸಿ) ಸೇರಿದಂತೆ ಶಾಖ ಹೆಚ್ಚಿಸುವ ವಸ್ತು ಅಥವಾ ಯೋಜನೆಯನ್ನು ಶಾಖ ನಿರ್ವಹಣಾ ಕ್ರಿಯಾ ಯೋಜನೆಯ ವ್ಯಾಪ್ತಿಗೆ ತರಬೇಕು.
- ಭೂಮಿಯನ್ನು ತಂಪಾಗಿಸುವ ನಿಟ್ಟನಲ್ಲಿ ಹಸಿರು ಪ್ರದೇಶಗಳ ಹೆಚ್ಚಳ, ಜಲಮೂಲಗಳನ್ನು ಸಂರಕ್ಷಿಸಬೇಕು.
- ತಾಪಮಾನದ ಆರ್ದ್ರತೆ, ಒಟ್ಟಾರೆ ಶಾಖ ಸೂಚ್ಯಂಕದಲ್ಲಿನ ವಾರ್ಷಿಕ ಮತ್ತು ದೈನಂದಿನ ಚಟುವಟಿಕೆಗಳನ್ನು ಪತ್ತೆಹಚ್ಚಲು ಯೋಜನೆ ರೂಪಿಸಬೇಕು.
- ಸಾಮಾನ್ಯವಾಗಿ ಆರೋಗ್ಯ ತುರ್ತು ಕ್ರಮದಲ್ಲಿ ಹೆಚ್ಚಾಗಿ ಹಗಲಿನ ತಾಪಮಾನವನ್ನು ಮಾತ್ರ ಪರಿಗಣಿಸಲಾಗುತ್ತದೆ. ರಾತ್ರಿಯ ತಾಪಮಾನ ಮತ್ತು ಸಾಪೇಕ್ಷ ಆರ್ದ್ರತೆಯನ್ನು ಪರಿಗಣಿಸುವುದಿಲ್ಲ, ಇದರಿಂದ ನಗರದ ಸಾರ್ವಜನಿಕ ಆರೋಗ್ಯ ಮತ್ತು ಇಂಧನ ಸುರಕ್ಷತೆಗೆ ಅಪಾಯವನ್ನುಂಟು ಮಾಡುತ್ತದೆ.

**ಬೆಂಗಳೂರು ತಾಪಮಾನ 3 ಡಿಗ್ರಿ ಏರಿಕೆ**

2014-23ಕ್ಕೆ ಹೋಲಿಸಿದರೆ ಉದ್ಯಾನ ನಗರಿ ತಾಪಮಾನ 3 ಡಿಗ್ರಿ ಸೆಲ್ಸಿಯಸ್‌ನಷ್ಟು ಏರಿಕೆಯಾಗಿದೆ. ಬೆಂಗಳೂರು ಬೇಸಿಗೆಯಲ್ಲಿ ಉಷ್ಣತೆಯ ದಶಕದ ಸರಾಸರಿಯಲ್ಲಿ 0.5 ಡಿ. ಸೆಲ್ಸಿಯಸ್ ಹೆಚ್ಚಳವಾಗಿದೆ. ಆದರೆ, ಸಾಪೇಕ್ಷ ಆರ್ದ್ರತೆಯು ಕಳೆದ ಎರಡು ದಶಕಗಳಿಂದ ಸ್ಥಿರವಾಗಿದೆ. ಈ ವರ್ಷ ಮಾರ್ಚ್-ಏಪ್ರಿಲ್‌ನಲ್ಲಿ ಗಮನಾರ್ಹವಾಗಿ ಏರಿಕೆಯಾಗಿದೆ ಎಂದು ಅಧ್ಯಯನ ವರದಿ ಬಹಿರಂಗಪಡಿಸಿದೆ.

# ಪ್ರವಾಹ ಸಂತ್ರಸ್ತರು ಲಕ್ಷಾಂತರ

## ಈಶಾನ್ಯರಾಜ್ಯಗಳು ಪ್ರವಾಹಪೀಡಿತ | ಸಾವಿರಾರು ಜನರ ಸ್ಥಳಾಂತರ

**ಗುವಾಹಟಿ:** ದೇಶದಲ್ಲಿ ಒಂದೆಡೆ ಉಷ್ಣಹವೆ ತಾಪತ್ರಯ ಮುಂದುವರಿದಿದ್ದರೆ ಅದರ ಜತೆಗೆ ಪ್ರವಾಹ ಬಾಧೆ ಕೂಡ ಗಂಭೀರಗೊಂಡಿದ್ದು, ಅಸ್ಸಾಂ ರಾಜ್ಯವೊಂದರಲ್ಲೇ ಲಕ್ಷಾಂತರ ಮಂದಿ ಸಂತ್ರಸ್ತರಾಗಿದ್ದಾರೆ. ರೆಮಲ್ ಚಂಡಮಾರುತ ಪರಿಣಾಮವಾಗಿ ಸುರಿದ ಭಾರಿ ಮಳೆಯಿಂದ ಅಸ್ಸಾಮ್‌ನ 9 ಜಿಲ್ಲೆಗಳು ತೀವ್ರ ಬಾಧಿತವಾಗಿದ್ದು, 2 ಲಕ್ಷಕ್ಕೂ ಅಧಿಕ ಜನರು ಸಂತ್ರಸ್ತರಾಗಿದ್ದಾರೆ. ಅಲ್ಲದೆ, ಮೇ 28ರಿಂದ ರಾಜ್ಯದಲ್ಲಿ ಆರು ಮಂದಿ ಸಾವಿಗೀಡಾಗಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಕಛರ್ ಜಿಲ್ಲೆ ಅತ್ಯಂತ ಪ್ರವಾಹಪೀಡಿತ ಪ್ರದೇಶವಾಗಿದ್ದು, 1.12 ಲಕ್ಷಕ್ಕೂ ಅಧಿಕ ಸಂತ್ರಸ್ತರಾಗಿದ್ದಾರೆ. ಕರೀಂಗಂಜ್‌ನಲ್ಲಿ 37 ಸಾವಿರ, ಹೈಲಕಂಡಿಯಲ್ಲಿ 14 ಸಾವಿರಕ್ಕೂ ಅಧಿಕ ಮಂದಿ ಸಂತ್ರಸ್ತರಾಗಿದ್ದಾರೆ. ಜತೆಗೆ 3238.8 ಹೆಕ್ಟೇರ್‌ನಲ್ಲಿನ ಬೆಳೆ ಹಾನಿ ಆಗಿದ್ದು, 2.34 ಲಕ್ಷಕ್ಕೂ ಅಧಿಕ ಪ್ರಾಣಿಗಳೂ ಸಂಕಷ್ಟಕ್ಕೀಡಾಗಿವೆ. ಬ್ರಹ್ಮಪುತ್ರ, ಬರಕ್ ನದಿಗಳು ತುಂಬಿ ಅಪಾಯಕಾರಿ ಆಗಿ ಹರಿಯುತ್ತಿವೆ. ಸುಮಾರು 35,640 ಜನರನ್ನು 110 ಪುನರ್ವಸತಿ ಶಿಬಿರಗಳಿಗೆ ಸ್ಥಳಾಂತರಿಸಲಾಗಿದೆ. ಬರಕ್ ಕಣಿವೆ 2022ರಲ್ಲೂ ಪ್ರವಾಹಕ್ಕೆ ಒಳಗಾಗಿತ್ತು ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

ಬರಕ್ ಕಣಿವೆ ಕರೀಂಗಂಜ್, ಹೈಲಕಂಡಿ ಜಿಲ್ಲೆಗಳಲ್ಲಿ ಪಕ್ಕದ ರಾಜ್ಯ ಹಾಗೂ ಈಶಾನ್ಯ ಭಾಗಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಗಳು ಪ್ರವಾಹಬಾಧಿತವಾಗಿ ವಾಹನಗಳು ಸಾಲುಗಟ್ಟಿ ನಿಲ್ಲುವಂತಾಗಿವೆ. ರಸ್ತೆ ಮಾತ್ರವಲ್ಲದೆ ರೈಲುಮಾರ್ಗದ ಸಂಪರ್ಕ ಕೂಡ ಕಡಿತಗೊಂಡಿದೆ. ತಾರಾಪುರದ ಸಿಲ್ಚಾರ್ ರೈಲ್ವೆ ನಿಲ್ದಾಣ ನದಿ ಸಮೀಪ ಇರುವುದರಿಂದ ಜಲಾವೃತವಾಗಿದೆ. ಶುಕ್ರವಾರ-ಶನಿವಾರ ಹಲವು ರೈಲುಗಳನ್ನು ರದ್ದುಪಡಿಸಲಾಗಿದೆ.

**ರಾಜಭವನವೂ ಜಲಾವೃತ:** ನಿರಂತರ ಮಳೆಯಿಂದಾಗಿ ಮಣಿಪುರದ ಇಂಫಾಲದಲ್ಲಿ ಮೂವರು ಸಾವಿಗೀಡಾಗಿದ್ದು, ಸಾವಿರಾರು ಮಂದಿ ಸಂತ್ರಸ್ತರಾಗಿದ್ದಾರೆ. ಮಣಿಪುರದ ರಾಜಭವನ ಕೂಡ ಜಲಾವೃತಗೊಂಡಿದೆ. ಅದಾಗ್ಯೂ ಕಳೆದೆರಡು ದಿನಗಳಿಗಿಂತ ಇಲ್ಲಿ ಪರಿಸ್ಥಿತಿ ಸ್ವಲ್ಪ ಸುಧಾರಿಸಿದೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಮಣಿಪುರ ಸರ್ಕಾರ ಗುರುವಾರ ರಾತ್ರಿ ನೀಡಿದ್ದ ಮಾಹಿತಿ ಪ್ರಕಾರ 1.88 ಲಕ್ಷಕ್ಕೂ ಅಧಿಕ ಜನರು ಪ್ರವಾಹಸಂತ್ರಸ್ತರಾಗಿದ್ದು, ಸುಮಾರು 24 ಸಾವಿರ ಮನೆಗಳು ಹಾನಿಗೀಡಾಗಿವೆ. ಪ್ರವಾಹ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಶುಕ್ರವಾರವೂ ಸಾರ್ವಜನಿಕ ರಜೆ ಇತ್ತು.



ಇಂಫಾಲದಲ್ಲಿನ ಪ್ರವಾಹ ಪೀಡಿತ ಪ್ರದೇಶದಲ್ಲಿ ಸಂತ್ರಸ್ತರಿಗೆ ಆಹಾರ ವಿತರಣೆ.

## ನೀರು ಹೊರ ಹಾಕುವಾಗಲೇ ಸಾವು

ಮಣಿಪುರದ ಇಂಫಾಲದ ಕೇಸಮ್ಥೊಂಗ್ ಪ್ರದೇಶದ ಇಂಗುದಂ ನಿತಾಯಿ ಸಿಂಗ್ ಎಂಬ 41 ವರ್ಷದ ವ್ಯಕ್ತಿ ಮನೆಗೆ ನುಗ್ಗಿದ್ದ ಮಳೆ ನೀರನ್ನು ಪಂಪ್ ಮೂಲಕ ಹೊರಕ್ಕೆ ಹಾಕುವಾಗ ವಿದ್ಯುತ್ ಶಾಕ್‌ಗೆ ಒಳಗಾಗಿ ಸಾವಿಗೀಡಾಗಿದ್ದಾನೆ. ಈ ವೇಳೆ ಪತ್ನಿ ಗೀತಾರಾಣಿ ಕೂಡ ಗಾಯಗೊಂಡಿದ್ದು, ಆಕೆಯನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.



## ಮಿಡಿದ ಮೋದಿ

ದುರದೃಷ್ಟವಶಾತ್ ಅಸ್ಸಾಂ, ಮಣಿಪುರ, ಮೇಘಾಲಯ, ಮಿಜೋರಾಂ, ತ್ರಿಪುರ, ಪಶ್ಚಿಮಬಂಗಾಳ ರಾಜ್ಯಗಳಲ್ಲಿ ಹವಾಮಾನ ವೈಪರೀತ್ಯ ಉಂಟಾಗಿದ್ದು, ಸಂತ್ರಸ್ತರಾದವರೆಲ್ಲರ ಕುರಿತು ನನ್ನ ಪ್ರಾರ್ಥನೆ ಇದೆ. ಕೇಂದ್ರ ಸರ್ಕಾರ ಪರಿಸ್ಥಿತಿ ಮೇಲೆ ನಿಗಾ ಇರಿಸಿದ್ದು, ಸಂಬಂಧಿತ ರಾಜ್ಯಗಳಲ್ಲಿ ಅಧಿಕಾರಿಗಳು ತಳಮಟ್ಟದಲ್ಲಿ ಕಾರ್ಯನಿರತರಾಗಿದ್ದಾರೆ ಎಂದು ಪ್ರಧಾನಿ ನರೇಂದ್ರ ಮೋದಿ ಎಕ್ಸ್‌ನಲ್ಲಿ ತಿಳಿಸಿದ್ದಾರೆ.

## ಅಗತ್ಯ ನೆರವಿನ ಭರವಸೆ ನೀಡಿದ ಅಮಿತ್ ಷಾ

**ನವದೆಹಲಿ:** ಭಾರಿ ಮಳೆ ಹಾಗೂ ಪ್ರವಾಹ ಪರಿಸ್ಥಿತಿ ಹಿನ್ನೆಲೆಯಲ್ಲಿ ದೇಶದ ಜನರ ಕಾಳಜಿಗೆ ಮುಂದಾಗಿರುವ ಕೇಂದ್ರ ಗೃಹ ಸಚಿವ ಅಮಿತ್ ಷಾ, ಸಂತ್ರಸ್ತ ಈಶಾನ್ಯ ರಾಜ್ಯಗಳಿಗೆ ಅಗತ್ಯವಾಗಿರುವ ಎಲ್ಲ ಸಹಾಯಗಳನ್ನೂ ಮಾಡಲಾಗುವುದು ಎಂದು ಶುಕ್ರವಾರ ಭರವಸೆ ನೀಡಿದ್ದಾರೆ. ಅಸ್ಸಾಂ, ತ್ರಿಪುರ, ಮಣಿಪುರ, ಮೇಘಾಲಯ, ಮಿಜೋರಾಂ ರಾಜ್ಯಗಳಲ್ಲಿನ ಪರಿಸ್ಥಿತಿ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರಿಗೆ ವಿವರಿಸಿದ್ದು, ಅವರು ಕೂಡ ಜನರ ಸಂಕಷ್ಟಗಳಿಗೆ ಮಿಡಿದು, ಕಾಳಜಿ ವ್ಯಕ್ತಪಡಿಸಿದ್ದಾರೆ ಎಂದಿದ್ದಾರೆ. ಐದು ರಾಜ್ಯಗಳ ಮುಖ್ಯಮಂತ್ರಿಯವರ ಜತೆಗೂ ಮಾತನಾಡಿದ್ದು, ಸೂಕ್ತ ಕ್ರಮಗಳನ್ನು ಕೈಗೊಳ್ಳುವಂತೆ ಸೂಚನೆ ನೀಡಿದ್ದಾಗಿಯೂ ಷಾ ತಿಳಿಸಿದ್ದಾರೆ.

# ನಾಳೆಯಿಂದ ಮಳೆ ಚುರುಕು

**ಬೆಂಗಳೂರು:** ರಾಜ್ಯದಲ್ಲಿ ಮುಂಗಾರು ಪ್ರವೇಶಿಸುವ ಮುನ್ಸೂಚನೆ ಸಿಕ್ಕಿದ ಬೆನ್ನಲ್ಲೇ ಭಾನುವಾರದಿಂದ (ಜೂ. 2) ಮಳೆ ಚುರುಕು ಪಡೆಯುವ ಸಾಧ್ಯತೆ ಇದೆ. ಬೆಂಗಳೂರು, ಬೆಂ.ಗ್ರಾಮಾಂತರ, ಚಿಕ್ಕಬಳ್ಳಾಪುರ, ಚಿಕ್ಕಮಗಳೂರು, ಕೋಲಾರ, ಮೈಸೂರಿನಲ್ಲಿ ಜೂ. 2ರಿಂದ ಮುಂದಿನ ಎರಡು ದಿನ, ರಾಮನಗರ, ಚಾಮರಾಜನಗರದಲ್ಲಿ ಜೂ.2ರಂದು ಹಾಗೂ ಹಾಸನದಲ್ಲಿ ಜೂ.3ರಂದು ಭಾರಿ ಮಳೆ ಬೀಳುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಹವಾಮಾನ ಇಲಾಖೆ ಯೆಲ್ಲೋ ಅಲರ್ಟ್ ಘೋಷಿಸಿದೆ. ದಕ್ಷಿಣ ಕನ್ನಡ, ಉಡುಪಿ, ಉತ್ತರ ಕನ್ನಡ, ಬಾಗಲಕೋಟೆ, ಬೆಳಗಾವಿ, ಬೀದರ್, ಧಾರವಾಡ, ಗದಗ, ಹಾವೇರಿ, ಕಲಬುರಗಿ, ಕೊಪ್ಪಳ, ರಾಯಚೂರು, ವಿಜಯಪುರ, ಯಾದಗಿರಿ, ಚಿತ್ರದುರ್ಗ, ದಾವಣಗೆರೆ, ಶಿವಮೊಗ್ಗ, ತುಮಕೂರು, ವಿಜಯಪುರದಲ್ಲಿ ಮುಂದಿನ ಐದು ದಿನ ಸಾಧಾರಣ ವರ್ಷಧಾರೆಯಾಗಲಿದೆ ಎಂದು ಇಲಾಖೆ ಮಾಹಿತಿ ನೀಡಿದೆ.

**» 2ರಂದು 8 ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್**

**ಮಾನ್ಸೂನ್ ತುಸು ದುರ್ಬಲ:** ವಾಡಿಕೆಗಿಂತ ಮುನ್ನವೇ ಕೇರಳ ಪ್ರವೇಶಿಸಿದ್ದ ನೈಋತ್ಯ ಮಾನ್ಸೂನ್ ಶುಕ್ರವಾರ ತುಸು ದುರ್ಬಲವಾಗಿದೆ. ಮಾರುತಗಳು ಪ್ರಬಲವಾಗಿದ್ದರೆ ಕೇರಳಕ್ಕೆ ಪ್ರವೇಶಿಸಿದ್ದ ದಿನವೇ ಕರ್ನಾಟಕದ ಕರಾವಳಿ ಭಾಗಕ್ಕೆ ಆಗಮಿಸಬೇಕಿತ್ತು. ಆದರೆ, ದುರ್ಬಲಗೊಂಡಿರುವ ಹಿನ್ನೆಲೆಯಲ್ಲಿ ಒಂದೆರಡು ದಿನದಲ್ಲಿ ರಾಜ್ಯ ಪ್ರವೇಶಿಸಲಿದ್ದು, ಜೂ 8ರ ವೇಳೆಗೆ ರಾಜ್ಯಾದ್ಯಂತ ವ್ಯಾಪಿಸಲಿದೆ ಎಂದು ಹವಾಮಾನ ತಜ್ಞ ಶ್ರೀನಿವಾಸರೆಡ್ಡಿ ಹೇಳಿದ್ದಾರೆ. ಬೆಂಗಳೂರು ಸೇರಿ ರಾಜ್ಯದ ಹಲವೆಡೆ ಮತ್ತೆ ತಾಪಮಾನ ಹೆಚ್ಚಳವಾಗುತ್ತಿದೆ. ಬೀದರ್, ರಾಯಚೂರು, ವಿಜಯಪುರ, ಕಲಬುರಗಿಯಲ್ಲಿ ಉಷ್ಣಾಂಶ 40ರ ಗಡಿ ದಾಟಿದೆ. ಮಾನ್ಸೂನ್ ವ್ಯಾಪಿಸಿದ ಬಳಿಕ ಇಳಿಮುಖವಾಗಲಿದೆ ಎಂದರು.

# Monsoon loses steam after onset over Kerala

Neha.Madaan
@timesgroup.com

**Pune:** The southwest monsoon lost its steam barely a day after reaching Kerala and advancing into most parts of northeast India on May 30, and is likely to progress slowly for a few days, a senior IMD official said.

This could be concerning news for regions that normally see onset after Kerala, including parts of Maharashtra.

The IMD official said, "*Cyclone Remal caused the Bay of Bengal branch of the monsoon to get stronger, taking it to northeast India,* while the Arabian Sea branch has weakened. There



The monsoon is likely to progress slowly for a few days, IMD said

will be some rainfall activity over peninsular India in the next few days, but it may be subdued. It will take a few days for the monsoon to realign, thus causing a delay in monsoon entry over south Maharashtra and later even northwest India. June rainfall forecast for northwest India shows below normal rains."

GP Sharma, president, Skymet Weather Services, said, "The main trigger for monsoon advancement are systems forming along either side of both the Indian coasts. These features don't seem to be there and may not be there in the next few days. Whatever rain activity we see in peninsular India in the next few days will be akin to thundershowers or localised rain, atypical of monsoon activity. There could be a delay in its onset over parts of Maharashtra and even regions such as Odisha, Jharkhand and Chhattisgarh."

ರೀಮಲ್ ಚಂಡಮಾರುತದ ಪರಿಣಾಮ • 1.88 ಲಕ್ಷ ಮಂದಿ ಬಾಧಿತರು

# ಮಣಿಪುರ: 24 ಸಾವಿರ ಮನೆಗಳಿಗೆ ಹಾನಿ

ಇಂಫಾಲ್(ಪಿಟಿಐ): ರೀಮಲ್ ಚಂಡಮಾರುತದಿಂದಾಗಿ ಮಣಿಪುರದಲ್ಲಿ ಸುರಿದ ಭಾರಿ ಮಳೆ ಪರಿಣಾಮ ಉಂಟಾದ ಪ್ರವಾಹದಿಂದ 1,88,143 ಜನರು ಬಾಧಿತರಾಗಿದ್ದಾರೆ.

ಕಳೆದ ಕೆಲವು ದಿನಗಳಲ್ಲಿ ರಾಜ್ಯದಲ್ಲಿ ಕನಿಷ್ಠ 24,265 ಮನೆಗಳಿಗೆ ಹಾನಿಯಾಗಿದೆ ಎಂದು ಜಲ ಸಂಪನ್ಮೂಲ, ಪರಿಹಾರ ಮತ್ತು ವಿಪತ್ತು ನಿರ್ವಹಣಾ ಸಚಿವ ಅವಾಂಗ್‌ಬೊ ನ್ಯೂಮೈ ತಿಳಿಸಿದ್ದಾರೆ.

56 ಪರಿಹಾರ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, 18,103 ಜನರನ್ನು ಸ್ಥಳಾಂತರಿಸಲಾಗಿದೆ. 401 ಹೆಕ್ಟೇರ್ ಪ್ರದೇಶದಲ್ಲಿನ ಬೆಳೆ ಹಾನಿಯಾಗಿದೆ ಎಂದು ಅವರು ಫೇಸ್‌ಬುಕ್‌ನಲ್ಲಿ ಮಾಡಿರುವ ಪೋಸ್ಟ್‌ನಲ್ಲಿ ತಿಳಿಸಿದ್ದಾರೆ.

'ಸರ್ಕಾರದ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ, ಇಂಫಾಲ್ ಪಶ್ಚಿಮ ಮತ್ತು ಪೂರ್ವ ಜಿಲ್ಲೆಗಳ ಜಿಲ್ಲಾಧಿಕಾರಿಗಳು, ಪರಿಹಾರ ಮತ್ತು ವಿಪತ್ತು ನಿರ್ವಹಣಾ ನಿರ್ದೇಶನಾಲಯದ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಯಿತು. ರಾಜ್ಯದಲ್ಲಿನ ಪ್ರವಾಹ ಪರಿಸ್ಥಿತಿ, ರಕ್ಷಣೆ ಮತ್ತು ಪರಿಹಾರ ಕಾರ್ಯಗಳ ಕುರಿತು ಪರಿಶೀಲಿಸಲಾಯಿತು' ಎಂದು ಅವರು ಹೇಳಿದ್ದಾರೆ.

'ಮಳೆಯಿಂದಾಗಿ ಮೇ 29ರಂದು ರಾಜ್ಯದಲ್ಲಿ ಕಂಡುಬಂದ ಪ್ರವಾಹದಿಂದಾಗಿ ಮೂವರು ಮೃತಪಟ್ಟಿದ್ದಾರೆ. 9 ಜನರು ಗಾಯಗೊಂಡಿದ್ದರೆ, ಒಬ್ಬರು ನಾಪತ್ತೆಯಾಗಿದ್ದಾರೆ' ಎಂದೂ ಅವರು ತಿಳಿಸಿದ್ದಾರೆ.

'ರಾಜ್ಯದಲ್ಲಿ 18 ಸ್ಥಳಗಳಲ್ಲಿ ನದಿಗಳ ಒಡ್ಡುಗಳು ಒಡೆದಿದ್ದು, ಈ ಪೈಕಿ 17 ಸ್ಥಳಗಳಲ್ಲಿ ಮುಚ್ಚಲಾಗಿದೆ' ಎಂದು ಮುಖ್ಯಮಂತ್ರಿ ಎನ್.ಬಿರೇನ್ ಸಿಂಗ್ ಅವರು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿದ್ದಾರೆ.

### ಮುಖ್ಯಾಂಶಗಳು

- ಪ್ರವಾಹದಿಂದ ರಸ್ತೆ ಕೊಚ್ಚಿಹೋದ ಪರಿಣಾಮ ಅಸ್ಸಾಂನ ಹಫ್ಲಾಂಗ್-ಸಿಲ್ಚಾರ್ ನಡುವಿನ ಸಂಪರ್ಕ ಕಡಿತ
- ಭೂಕುಸಿತದ ಪರಿಣಾಮ ಹಫ್ಲಾಂಗ್-ಹರಾಂಗ್‌ಜಾವೊ ರಸ್ತೆಯಲ್ಲಿ ವಾಹನ ಸಂಚಾರವನ್ನು ನಿರ್ಬಂಧಿಸಲಾಗಿದೆ
- ಹಫ್ಲಾಂಗ್-ಬದರ್‌ಪುರ ರೈಲು ಮಾರ್ಗದ ಹಲವೆಡೆ ಭೂಕುಸಿತ

**ರಾಜ್ಯದಲ್ಲಿ ಪ್ರವಾಹ ಪರಿಸ್ಥಿತಿಯನ್ನು ಯಶಸ್ವಿಯಾಗಿ ನಿಯಂತ್ರಣಕ್ಕೆ ತರಲಾಗಿದ್ದು, ಪರಿಹಾರ ಕಾರ್ಯವನ್ನು ಸಮರೋಪಾದಿಯಲ್ಲಿ ಕೈಗೊಳ್ಳಲಾಗುತ್ತಿದೆ**

**ಎನ್.ಬಿರೇನ್ ಸಿಂಗ್,** ಮಣಿಪುರ ಮುಖ್ಯಮಂತ್ರಿ



ಪ್ರವಾಹ ಪೀಡಿತ ಅಸ್ಸಾಂನ ನಾಗಾವ್ ಜಿಲ್ಲೆಯ ಕಂಪುರ ಗ್ರಾಮದ ಮಹಿಳೆ ತನ್ನ ಸಾಮಗ್ರಿಗಳೊಂದಿಗೆ ಎತ್ತರದ ಪ್ರದೇಶವೊಂದರಲ್ಲಿ ಶುಕ್ರವಾರ ಆಶ್ರಯ ಪಡೆದಿದ್ದಾರೆ —ಪಿಟಿಐ ಚಿತ್ರ

## ಮಾಹಿತಿ ಪಡೆದ ಸಚಿವ ಅಮಿತ್ ಶಾ

ನವದೆಹಲಿ(ಪಿಟಿಐ): ಈಶಾನ್ಯ ರಾಜ್ಯಗಳಲ್ಲಿ ಸುರಿದ ಮಳೆ ಹಾಗೂ ಉಂಟಾಗಿರುವ ಪ್ರವಾಹ ಪರಿಸ್ಥಿತಿ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಶುಕ್ರವಾರ ಮಾಹಿತಿ ಪಡೆದ್ದಾರೆ.

ಐದು ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ಮಾತನಾಡಿರುವ ಅವರು, ರಕ್ಷಣೆ ಮತ್ತು ಪರಿಹಾರ ಕಾರ್ಯಕ್ಕೆ ಸಾಧ್ಯವಿರುವ ಎಲ್ಲ ಸಹಕಾರ ನೀಡುವುದಾಗಿಯೂ ಭರವಸೆ ನೀಡಿದ್ದಾರೆ.

'ಅಸ್ಸಾಂ, ತ್ರಿಪುರಾ, ಮಣಿಪುರ, ಮೇಘಾಲಯ ಹಾಗೂ ಮಿಜೋರಾಂನಲ್ಲಿನ ಪ್ರವಾಹ ಪರಿಸ್ಥಿತಿ ಕುರಿತು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಮಾಹಿತಿ ನೀಡಲಾಗಿದೆ' ಎಂದು ಅವರು 'ಎಕ್ಸ್'ನಲ್ಲಿ ಪೋಸ್ಟ್ ಮಾಡಿದ್ದಾರೆ.

## 6 ನದಿಗಳಲ್ಲಿ ಪ್ರವಾಹ ಪರಿಸ್ಥಿತಿ: ಕೇಂದ್ರ ಜಲ ಆಯೋಗ

ನವದೆಹಲಿ(ಪಿಟಿಐ): ಅಸ್ಸಾಂನ ಬ್ರಹ್ಮಪುತ್ರ, ಮಣಿಪುರದ ಬರಾಕ್ ಸೇರಿದಂತೆ ಈಶಾನ್ಯ ರಾಜ್ಯಗಳ 6 ನದಿಗಳು ಉಕ್ಕಿ ಹರಿಯುತ್ತಿದ್ದು, ಪ್ರವಾಹ ಪರಿಸ್ಥಿತಿ ಉಂಟಾಗಿದೆ. ಇದರಿಂದ ಹಲವಾರು ಜಿಲ್ಲೆಗಳು ಅಪಾಯ ಎದುರಿಸುತ್ತಿವೆ ಎಂದು ಕೇಂದ್ರ ಜಲ ಆಯೋಗ ಹೇಳಿದೆ.

ಪ್ರವಾಹದಿಂದಾಗಿ ಅಸ್ಸಾಂನ 9 ಜಿಲ್ಲೆಗಳ ಎರಡು ಲಕ್ಷಕ್ಕೂ ಅಧಿಕ ಜನರು ತೊಂದರೆ ಅನುಭವಿಸುತ್ತಿದ್ದಾರೆ. ರೀಮಲ್ ಚಂಡಮಾರುತ ಹಾಗೂ ಇದರಿಂದಾಗಿ ಸುರಿದ ಮಳೆ ಪರಿಣಾಮ ಉಂಟಾದ ಪ್ರವಾಹದಿಂದ ಒಟ್ಟು 6 ಜನರು ಮೃತಪಟ್ಟಿದ್ದಾರೆ ಎಂದು ಆಯೋಗದ ಅಧಿಕಾರಿಗಳು ಹೇಳಿದ್ದಾರೆ.

ಜೊರ್ಹಾಟ್ ಜಿಲ್ಲೆಯ ನಿಯಾಮತಿಘಾಟ್‌ನಲ್ಲಿ ಬ್ರಹ್ಮಪುತ್ರ ನದಿಯು 85.25 ಮೀಟರ್ ಎತ್ತರದಷ್ಟು ಹರಿಯುತ್ತಿದೆ. ಅಪಾಯ ಮಟ್ಟ 85.54 ಮೀ.ಗಿಂತ 0.28 ಮೀಟರ್‌ನಷ್ಟು ಅಧಿಕ. ಬರಾಕ್ ನದಿಯು ಸಹ ಅಪಾಯ ಮಟ್ಟದಲ್ಲಿ ಹರಿಯುತ್ತಿದೆ ಎಂದು ತಿಳಿಸಿದ್ದಾರೆ.

ಅಸ್ಸಾಂನ ನಾಗಾವ್ ಜಿಲ್ಲೆಯಲ್ಲಿ ಕೊಪಿಲಿ ನದಿ, ಕರೀಂಗಂಜ್ ಜಿಲ್ಲೆಯಲ್ಲಿ ಕುಶಿಯಾರಾ ನದಿ, ಮತಿಜುರಿ ಜಿಲ್ಲೆಯಲ್ಲಿ ಕತಹಾಲ್ ನದಿ, ಧಳೇಶ್ವರಿ ನದಿಗಳು ಅಪಾಯ ಮಟ್ಟ ಮೀರಿ ಹರಿಯುತ್ತಿದ್ದು, ಎಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

ಪ್ರಜಾವಾಣಿ
ಶನಿವಾರ • ಜೂನ್ 1, 2024

### ಬಿಸಿ ಗಾಳಿಗೆ ತತ್ತರಿಸಿದ ಉತ್ತರ ಭಾರತ • ಶಾಖಾಘಾತದಿಂದ ಹಲವರ ಸಾವು ಶಂಕೆ

# ಪ್ರತಿಕೂಲ ಹವಾಮಾನ: 36 ಸಾವು

ರೂರ್ಕೆಲಾ/ಕೌಶಾಂಬಿ/ಶಹಜಹಾನ್‌ಪುರ(ಪಿಟಿಐ): ಉತ್ತರ ಪ್ರದೇಶ, ಬಿಹಾರ, ಜಾರ್ಖಂಡ್ ಹಾಗೂ ಒಡಿಶಾ ಸೇರಿದಂತೆ ಉತ್ತರದ ಹಲವು ರಾಜ್ಯಗಳಲ್ಲಿ ತಾಪಮಾನ ಹೆಚ್ಚಾಗಿದ್ದು, ಇಬ್ಬರು ಮಕ್ಕಳು ಸೇರಿದಂತೆ 36 ಮಂದಿ ಮೃತಪಟ್ಟಿದ್ದಾರೆ. ಪ್ರತಿಕೂಲ ಹವಾಮಾನ ಪರಿಸ್ಥಿತಿ, ಶಾಖಾಘಾತವೇ ಸಾವುಗಳಿಗೆ ಕಾರಣ ಎಂದು ಶಂಕಿಸಲಾಗಿದೆ.

ಒಡಿಶಾದಲ್ಲಿ ಐವರು, ಬಿಹಾರ ಹಾಗೂ ಜಾರ್ಖಂಡ್‌ನಲ್ಲಿ ತಲಾ ನಾಲ್ವರು ಮೃತಪಟ್ಟಿದ್ದು, ಈ ಸಾವುಗಳಿಗೆ ಶಾಖಾಘಾತವೇ ಕಾರಣ ಎಂದು ಅಧಿಕಾರಿಗಳು ಹೇಳಿದ್ದಾರೆ.

ಒಡಿಶಾದಲ್ಲಿ ವರದಿಯಾಗಿರುವ 18 ಸಾವುಗಳಿಗೆ ಕೂಡ ಶಾಖಾಘಾತವೇ ಕಾರಣ ಎಂದು ಶಂಕಿಸಲಾಗಿದ್ದು, ಈ ಕುರಿತು ತನಿಖೆ ನಡೆಯುತ್ತಿದೆ ಎಂದು ಅಲ್ಲಿನ ರಾಜ್ಯ ಸರ್ಕಾರ ಹೇಳಿದೆ.

ಜೋರಾಗಿ ಬೀಸಿದ ಗಾಳಿ ಪರಿಣಾಮ ಶೆಡ್ ಕುಸಿದು ಉತ್ತರ ಪ್ರದೇಶದಲ್ಲಿ ಶುಕ್ರವಾರ ಐವರು ಮೃತಪಟ್ಟಿದ್ದಾರೆ.

ತಾತ್ಕಾಲಿಕ ಶೆಡ್ ಕುಸಿದ ಪರಿಣಾಮ ಶಹಜಹಾನ್‌ಪುರದಲ್ಲಿ ಮೂವರು ಮೃತಪಟ್ಟಿದ್ದಾರೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಶೋಕಕುಮಾರ್ ಮೀನಾ ತಿಳಿಸಿದ್ದಾರೆ.

ಕೌಶಾಂಬಿಯಲ್ಲಿ ವೃದ್ಧೆ ಸೇರಿದಂತೆ ಇಬ್ಬರು ಶಾಖಾಘಾತದಿಂದ ಮೃತಪಟ್ಟಿದ್ದಾರೆ.

‘ಈ ಇಬ್ಬರು ಜಿಲ್ಲೆಯ ಬೇರೆ ಬೇರೆ ಸ್ಥಳಗಳಲ್ಲಿ, ಬಿಸಿಲ ಆಘಾತದಿಂದ ಅಸ್ವಸ್ಥಗೊಂಡಿದ್ದರು. ಅವರನ್ನು ಗುರುವಾರ ಆಸ್ಪತ್ರೆಗೆ ದಾಖಲಿಸಲಾಗಿತ್ತು, ಆಸ್ಪತ್ರೆಗೆ ದಾಖಲಿಸಿದ ಅರ್ಧ ಗಂಟೆಯಲ್ಲಿಯೇ ಅವರು ಮೃತಪಟ್ಟರು. ಬಿಸಿಲ ಆಘಾತದಿಂದ ಕಂಡುಬಂದ ತೊಂದರೆಗಳೇ ಅವರ ಸಾವಿಗೆ ಕಾರಣವಾಗಿರಬಹುದು’ ಎಂದು ಕೌಶಾಂಬಿಯ ಮುಖ್ಯ ವೈದ್ಯಾಧಿಕಾರಿ ಸುಷ್ಮೇಂದ್ರ ಕುಮಾರ್ ಶುಕ್ರವಾರ ತಿಳಿಸಿದ್ದಾರೆ.

‘ಬಾಲೇಶ್ವರ, ಧೆಂಕನಾಲ್, ಮಯೂರ್‌ಭಂಜ್, ಸೋನೆಪುರ ಹಾಗೂ ಬೋಲಾಂಗಿರ್ ಜಿಲ್ಲೆಯ ತಲಾ ಒಬ್ಬರು ಶಾಖಾಘಾತದಿಂದ ಮೃತಪಟ್ಟಿರುವುದು ದೃಢಪಟ್ಟಿದೆ’ ಎಂದು ಒಡಿಶಾದ ವಿಶೇಷ ಆಯುಕ್ತ (ಪರಿಹಾರ) ಸತ್ಯವ್ರತ ಸಾಹು ಹೇಳಿದ್ದಾರೆ.

‘ಸುಂದರಗಢ ಜಿಲ್ಲೆಯಲ್ಲಿ 12 ಜನರು, ಝುರ್ಸುಗುಡ ಜಿಲ್ಲೆಯಲ್ಲಿ 6 ಸೇರಿದಂತೆ ಒಟ್ಟು 18 ಜನರು ಮೃತಪಟ್ಟಿದ್ದು, ಇವರು ಶಾಖಾಘಾತದಿಂದಲೇ ಮೃತಪಟ್ಟಿರುವ ಶಂಕೆ ಇದೆ. ಮರಣೋತ್ತರ ಪರೀಕ್ಷೆ ಬಳಿಕವಷ್ಟೆ ಈ 18 ಜನರ ಸಾವಿಗೆ ನಿಖರ ಕಾರಣ ಗೊತ್ತಾಗಲಿದೆ’ ಎಂದು ಸಾಹು ಹೇಳಿದ್ದಾರೆ.

‘ಶಾಖಾಘಾತದಿಂದ ಬಾಧಿತ 10 ಜನರನ್ನು ರೂರ್ಕೆಲಾದ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಇತರ 23 ಜನರನ್ನು ಸರ್ಕಾರಿ ಆಸ್ಪತ್ರೆಗೆ ದಾಖಲಿಸಲಾಗಿದೆ’ ಎಂದು ಸುಂದರಗಢ ಹೆಚ್ಚುವರಿ ಜಿಲ್ಲಾಧಿಕಾರಿ ಅಶುತೋಷ್ ಕುಲಕರ್ಣಿ ತಿಳಿಸಿದ್ದಾರೆ.

ಬಿಸಿಗಾಳಿ ಪರಿಣಾಮ ಬಿಹಾರದಲ್ಲಿ ಜೂನ್ 8ರವರೆಗೆ ಎಲ್ಲ ಶಾಲೆಗಳು, ಅಂಗನವಾಡಿ ಕೇಂದ್ರಗಳಿಗೆ ರಜೆ ಘೋಷಿಸಲಾಗಿದೆ





| ವಿವಿಧ ನಗರಗಳ ತಾಪಮಾನ (ಡಿಗ್ರಿ ಸೆಲ್ಸಿಯಸ್‌ನಲ್ಲಿ) | |
|---|---|
| ಬಕ್ಸರ್(ಬಿಹಾರ) | 47.1 |
| ಝುರ್ಸುಗುಡ(ಒಡಿಶಾ) | 47 |
| ತಿತ್ಲಾಗಢ(ಒಡಿಶಾ) | 46.5 |
| ಬಾರಗಢ(ಒಡಿಶಾ) | 46.3 |
| ಸಂಬಲ್‌ಪುರ(ಒಡಿಶಾ) | 46.2 |

ಲೋಕಸಭಾ ಚುನಾವಣೆ ಕರ್ತವ್ಯಕ್ಕೆ ನಿಯೋಜನೆಗೊಂಡಿರುವ ಸಿಬ್ಬಂದಿಯೊಬ್ಬರು ಬಿಸಿಲ ಝಳದಿಂದಾಗಿ ವಾರಾಣಸಿಯಲ್ಲಿನ ಚುನಾವಣಾ ಸಾಮಗ್ರಿ ವಿತರಣಾ ಕೇಂದ್ರದಲ್ಲಿ ಶುಕ್ರವಾರ ಕುಸಿದು ಬಿದ್ದರು —ಪಿಟಿಐ ಚಿತ್ರ

## ರಾಮಮಂದಿರದಲ್ಲಿ ಸಹಾಯ ಕೇಂದ್ರ

ಅಯೋಧ್ಯೆ (ಉತ್ತರ ಪ್ರದೇಶ) (ಪಿಟಿಐ): ಶಾಖದ ಅಲೆಯಿಂದ ಭಕ್ತರಿಗೆ ತೊಂದರೆಯಾಗದಂತೆ ಇಲ್ಲಿನ ರಾಮಮಂದಿರದ ಆಡಳಿತವು ಸಹಾಯ ಕೇಂದ್ರ, ವಾಟರ್ ಕೂಲರ್ ಮತ್ತು ಸರತಿಯಲ್ಲಿ ನಿಂತವರಿಗೆ ಒಆರ್‌ಎಸ್ ಸೇರಿದಂತೆ ಹಲವು ವ್ಯವಸ್ಥೆಗಳನ್ನು ಕಲ್ಪಿಸಿದೆ.

‘ಬೇಸಿಗೆಯ ಬಿಸಿಲು ಇದೀಗ ಗರಿಷ್ಠ ಮಟ್ಟದಲ್ಲಿದೆ. ತಾಪಮಾನವು 50 ಡಿಗ್ರಿ ಸೆಲ್ಸಿಯಸ್ ಮುಟ್ಟುತ್ತಿದೆ. ಇದನ್ನು ಪರಿಗಣಿಸಿ, 500ಕ್ಕೂ ಹೆಚ್ಚು ಕುರ್ಚಿಗಳನ್ನು ಹೊಂದಿರುವ ಸಹಾಯ ಕೇಂದ್ರವನ್ನು ಭಕ್ತರಿಗಾಗಿ ಸ್ಥಾಪಿಸಿದ್ದೇವೆ. ಇಲ್ಲಿ ಕೂಲರ್‌ಗಳು, ವಾಟರ್ ಕೂಲರ್‌ಗಳು ಸೇರಿದಂತೆ ಇನ್ನಿತರ ಸೌಲಭ್ಯ ಒದಗಿಸಿದ್ದೇವೆ’ ಎಂದು ರಾಮಮಂದಿರ ಟ್ರಸ್ಟ್ ಕ್ಯಾಂಪ್ ಕಚೇರಿಯ ಉಸ್ತುವಾರಿ ಪ್ರಕಾಶ್ ಗುಪ್ತಾ ಶುಕ್ರವಾರ ಸುದ್ದಿಸಂಸ್ಥೆಗೆ ತಿಳಿಸಿದರು.

## 25 ಚುನಾವಣಾ ಸಿಬ್ಬಂದಿ ಸಾವು

ಪಟ್ನಾ(ಬಿಹಾರ)/ಮಿರ್ಜಾಪುರ(ಉತ್ತರ ಪ್ರದೇಶ)(ಪಿಟಿಐ): ಬಿಸಿಲ ಆಘಾತ ಮತ್ತು ಆರೋಗ್ಯ ಏರುಪೇರಾಗಿ ಬಿಹಾರ ಮತ್ತು ಉತ್ತರ ಪ್ರದೇಶದಲ್ಲಿ 25 ಮಂದಿ ಚುನಾವಣಾ ಸಿಬ್ಬಂದಿ ಮೃತಪಟ್ಟಿದ್ದಾರೆ ಎಂದು ಅಧಿಕಾರಿಗಳು ಶುಕ್ರವಾರ ತಿಳಿಸಿದ್ದಾರೆ.

ಬಿಹಾರದಲ್ಲಿ ಬಿಸಿಲಿನ ಆಘಾತದಿಂದಾಗಿ ಕಳೆದ 24 ಗಂಟೆಗಳಲ್ಲಿ 10 ಜನ ಚುನಾವಣಾ ಸಿಬ್ಬಂದಿ ಮೃತಪಟ್ಟಿದ್ದರೆ, ಆರೋಗ್ಯ ಸಮಸ್ಯೆಗಳಿಂದಾಗಿ ಉತ್ತರ ಪ್ರದೇಶದ ಮಿರ್ಜಾಪುರದ ಆಸ್ಪತ್ರೆಯೊಂದರಲ್ಲಿ 15 ಮಂದಿ ಮೃತಪಟ್ಟಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಬಿಹಾರದ ವಿಪತ್ತು ನಿರ್ವಹಣಾ ಇಲಾಖೆ, ಭೋಜಪುರ ಜಿಲ್ಲೆಯಲ್ಲಿ ಐವರು, ರೋಹ್ತಾಸ್‌ನಲ್ಲಿ ಮೂವರು, ಕೈಮೂರ್ ಮತ್ತು ಔರಂಗಾಬಾದ್‌ನಲ್ಲಿ ತಲಾ ಒಬ್ಬ ಸಿಬ್ಬಂದಿ ಮೃತಪಟ್ಟಿದ್ದಾರೆ ಎಂದು ತಿಳಿಸಿದೆ. ಬಿಹಾರದ 8 ಲೋಕಸಭಾ ಕ್ಷೇತ್ರಗಳಿಗೆ ಶನಿವಾರ ಮತದಾನ ನಡೆಯಲಿದೆ

## ‘ಸುಪ್ರೀಂ’ ಆವರಣದಲ್ಲಿ ನೀರಿನ ವ್ಯವಸ್ಥೆ

ನವದೆಹಲಿ (ಪಿಟಿಐ): ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ತಾಪಮಾನ ಹೆಚ್ಚುತ್ತಿರುವ ಕಾರಣ, ಸುಪ್ರೀಂ ಕೋರ್ಟ್ ಆವರಣದಲ್ಲಿ ಪಕ್ಷಿಗಳು ಹಾಗೂ ಚಿಕ್ಕ ಪ್ರಾಣಿಗಳಿಗೆ ನೀರು ಮತ್ತು ಧಾನ್ಯಗಳನ್ನು ಇಡಲಾಗಿದೆ.

‘ಮುಖ್ಯನ್ಯಾಯಮೂರ್ತಿ ಡಿ.ವೈ.ಚಂದ್ರಚೂಡ್ ಅವರ ಸೂಚನೆಯಂತೆ, ನ್ಯಾಯಾಲಯದ ಆವರಣದಲ್ಲಿ ನೀರು ಮತ್ತು ಆಹಾರ ಧಾನ್ಯಗಳ ವ್ಯವಸ್ಥೆ ಮಾಡಲಾಗಿದೆ’ ಎಂದು ಸುಪ್ರೀಂ ಕೋರ್ಟ್‌ನ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ದೆಹಲಿಯಲ್ಲಿ ಈ ವರ್ಷ ಮೇ ತಿಂಗಳಲ್ಲಿ ಕೇವಲ ಎರಡು ದಿನಗಳಷ್ಟೆ ಮಳೆಯಾಗಿದೆ. ಈ ರೀತಿ ಆಗಿರುವುದು ಹತ್ತು ವರ್ಷಗಳ ನಂತರ ಇದೇ ಮೊದಲು ಎಂದು ಹವಾಮಾನ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ.

# ರಾಜ್ಯಕ್ಕೆ ಮುಂಗಾರು ಎಂಟ್ರಿ?

## ಒಂದೆರಡು ದಿನದಲ್ಲಿ ಅಧಿಕೃತ ಘೋಷಣೆ ಸಂಭವ

## ದಕ್ಷಿಣ ಕನ್ನಡ, ಮೈಸೂರು, ಚಾ.ನಗರದಲ್ಲಿ ಮಳೆ

ಬೆಂಗಳೂರು: ರಾಜ್ಯದ ಗಡಿ ಜಿಲ್ಲೆಗಳಿಗೆ ಈಗಾಗಲೇ ಮುಂಗಾರು ಪ್ರವೇಶಿಸಿದೆ. ಈ ಬಗ್ಗೆ ಒಂದೆರಡು ದಿನದಲ್ಲಿ ಹವಾಮಾನ ಇಲಾಖೆ ಅಧಿಕೃತವಾಗಿ ಘೋಷಿಸುವ ಸಾಧ್ಯತೆ ಇದೆ.

ನಿರೀಕ್ಷೆಗಿಂತ ಒಂದು ದಿನ ಮೊದಲೇ ಮೇ 30ರಂದು ಮುಂಗಾರು ಕೇರಳವನ್ನು ಪ್ರವೇಶಿಸಿದೆ. ಮೇ 31ರಂದು ರಾಜ್ಯದ ಗಡಿ ಜಿಲ್ಲೆಗಳಾದ ದಕ್ಷಿಣ ಕನ್ನಡ, ಮೈಸೂರು ಹಾಗೂ ಚಾಮರಾಜನಗರ ಜಿಲ್ಲೆಗಳಲ್ಲಿ ಮಳೆಯಾಗುತ್ತಿದೆ. ಮುಂಗಾರು ಪ್ರವೇಶದ ಘೋಷಣೆಗೆ ಕೆಲವು ಮಾನದಂಡಗಳನ್ನು ಹವಾಮಾನ ಇಲಾಖೆ ಪರಿಶೀಲಿಸುತ್ತಿದೆ. ಜೂ.1 ಅಥವಾ 2 ರಂದು ಈ ಬಗ್ಗೆ ಅಧಿಕೃತವಾಗಿ ಘೋಷಣೆ ಮಾಡಲಿದೆ ಎಂದು ಹವಾಮಾನ ಇಲಾಖೆಯ ತಜ್ಞರು ಮಾಹಿತಿ ನೀಡಿದ್ದಾರೆ.

ಮುಂಗಾರು ಮಾರುತಗಳು ಅಷ್ಟೊಂದು ಪ್ರಬಲವಾಗಿಲ್ಲ. ಕೇರಳದಲ್ಲಿಯೂ ಮಳೆ ಪ್ರಮಾಣ ನಿರೀಕ್ಷಿತ ಮಟ್ಟದಲ್ಲಿ ಇಲ್ಲ. ಎರಡ್ಮೂರು ದಿನದಲ್ಲಿ ಮಾರುತಗಳು ಪ್ರಬಲವಾಗಲಿವೆ. ಆಗ ಉತ್ತಮ ಮಳೆ ಆಗುವ ಸಾಧ್ಯತೆ ಇದೆ ಎಂದು ತಿಳಿಸಿದ್ದಾರೆ.

**ಜೂ.2ಕ್ಕೆ 9 ಜಿಲ್ಲೆಗೆ ಯೆಲ್ಲೋ ಅಲರ್ಟ್:** ಜೂ.1 ರಿಂದಲೇ ದಕ್ಷಿಣ ಒಳನಾಡಿನ ಹಲವು ಜಿಲ್ಲೆಗಳು ಹಾಗೂ ಕರಾವಳಿಯ ಎಲ್ಲ ಜಿಲ್ಲೆಗಳಲ್ಲಿ ಮತ್ತು ಜೂ.2 ರಿಂದ ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ಮಳೆ ಆರಂಭಗೊಳ್ಳಲಿದೆ. ಅಲ್ಲಿಂದ ಒಂದು ವಾರ ರಾಜ್ಯಾದ್ಯಂತ ಉತ್ತಮ ಮಳೆಯಾಗುವ ಲಕ್ಷಣಗಳಿವೆ. ಜೂ.2 ಮತ್ತು 3ಕ್ಕೆ ದಕ್ಷಿಣ ಒಳನಾಡಿನ ವಿವಿಧ ಜಿಲ್ಲೆಗಳಲ್ಲಿ ಹೆಚ್ಚಿನ ಪ್ರಮಾಣ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ.

ಬೆಂಗಳೂರು ನಗರ, ಕೊಡಗು ಸೇರಿ 9 ಜಿಲ್ಲೆಗಳಲ್ಲಿ 6 ರಿಂದ 11 ಸೆಂ.ಮೀ.ವರೆಗೆ ಮಳೆಯಾಗುವ ಸಾಧ್ಯತೆ ಇದ್ದು ಜೂನ್ 2ಕ್ಕೆ ಯೆಲ್ಲೋ ಅಲರ್ಟ್‌ನ ಎಚ್ಚರಿಕೆ ನೀಡಲಾಗಿದೆ.